ಕನ್ನಡ ದಿನಪತ್ರಿಕೆ
18 ಎಪ್ರಿಲ್ । ಗುರುವಾರ
18 APRIL 2024

# ಬೆಳಗಾವಿ ವರದಿ

ಪ್ರಧಾನ ಸಂಪಾದಕ : ಸತೀಶ ಬ ಗುಡಗೆನಟ್ಟಿ
BELAGAVI VARADI KANNADA DAILY NEWS PAPER
ಗಡಿ ಜಿಲ್ಲೆಯ ಧ್ವನಿ...

₹4 ಸಂಪುಟ – 5 ಸಂಚಿಕೆ – 52 ಪುಟ – 4 | RNI. KARKAN/2020/79084 | ADVRT EMAIL. BELAGAVIVARADIEDITOR@GMAIL.COM | NEWSBELAGAVI@GMAIL.COM | 9900332089 | REG.NO G-2/PMG/KA/NK/BM/139/2024-26

## ಬೃಹತ್ ರೋಡ್ ಶೋ: ಶೆಟ್ಟರ್ ಅವರಿಂದ ಶಕ್ತಿ ಪ್ರದರ್ಶನ

### ಅದ್ದೂರಿ ಮೆರವಣಿಗೆಯ ಮೂಲಕ ಶೆಟ್ಟರ್ ನಾಮಪತ್ರ ಸಲ್ಲಿಕೆ



ಬೆಳಗಾವಿ: ಬೆಳಗಾವಿ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಜಗದೀಶ ಶೆಟ್ಟರ್, ಬುಧವಾರ ಅದ್ದೂರಿ ಮೆರವಣಿಗೆಯ ಮೂಲಕ ಬಂದು ನಾಮಪತ್ರ ಸಲ್ಲಿಸಿದರು. ಅವರೊಂದಿಗೆ ಬಿಜೆಪಿ ಸಂಸದೀಯ ಮಂಡಳಿ ಸದಸ್ಯ ಬಿ.ಎಸ್.ಯಡಿಯೂರಪ್ಪ, ಗೋವಾ ಮುಖ್ಯಮಂತ್ರಿ ಪ್ರಮೋದ ಸಾವಂತ್ ಕೂಡ ಜತೆಯಾದರು.

ಇಲ್ಲಿನ ಸಮಾದೇವಿ ಮಂದಿರದಲ್ಲಿ ಬೆಳಿಗ್ಗೆ ಪೂಜೆ ಸಲ್ಲಿಸಿದ ಬಳಿಕ ಮೆರವಣಿಗೆಗೆ ಚಾಲನೆ ನೀಡಲಾಯಿತು. ಬಿ.ಎಸ್.ಯಡಿಯೂರಪ್ಪ ಅವರು ಮೆರವಣಿಗೆ ಬಳಿ ಬರುತ್ತಿದ್ದಂತೆಯೇ ಕಾರ್ಯಕರ್ತರ ಹರ್ಷೋದ್ಗಾರ ಮುಗಿಲು ಮುಟ್ಟಿತು. ಪಟಾಕಿ ಸಿಡಿಸಿ, ಜೈಕಾರ ಹಾಕಿ, ಬಾವುಟಗಳನ್ನು ಹಾರಾಡಿಸಿ ನಾಯಕರಿಗೆ ಸ್ವಾಗತ ಕೋರಿದರು.

ಅಪಾರ ಸಂಖ್ಯೆಯಲ್ಲಿ ಸೇರಿದ ಬಿಜೆಪಿ ಕಾರ್ಯಕರ್ತರು ಕೇಸರಿ ಪೇಟ ತೊಟ್ಟು ಮೆರವಣಿಗೆಯಲ್ಲಿ ಪಾಲ್ಗೊಂಡರು. ಕೇಸರಿ ಬಾವುಟ, ಬಿಜೆಪಿ ಚಿಹ್ನೆಯ ಬಾವುಟ, ಅಂಬೇಡ್ಕರ್ ಭಾವಚಿತ್ರ ಹೊಂದಿದ ನೀಲಿ ಬಾವುಟ... ಹೀಗೆ ವಿವಿಧ ರೀತಿಯ ಬಾವುಟಗಳು ರಾರಾಜಿಸಿದವು. ಬಿಳಿ ಉಡುಗೆಯಲ್ಲಿ ಬಂದಿದ್ದ ಯುವಜನರು ಭಗವಾಧ್ವಜ ಹಾರಾಡಿಸಿ ಗಮನ ಸೆಳೆದರು.

ನಗಾರಿ, ಡೋಲ್ ತಾಸೆ, ಕರಡಿಮಜಲು, ಮಹಿಳಾ ಡೋಲ್ ತಂಡ, ಡೊಳ್ಳು ಮೇಳಗಳು ಮೆರವಣಿಗೆಯಲ್ಲಿ ಪಾಲ್ಗೊಂಡವು. ದಿಂಡಿ ಭಜನಾ ಮಂಡಳದ ಮಹಿಳೆಯರು ಕೂಡ 'ವಿಠ್ಠಲ ವಿಠ್ಠಲ ಹರಿ ಓಂ ವಿಠ್ಠಲ' ಎಂದು ಭಜನೆ ಮಾಡಿದರು. ತಲೆಯ ಮೇಲೆ ತುಳಸಿಕಟ್ಟೆ ಹೊತ್ತು ಸಾಗಿದ ಮಹಿಳೆಯರು ಗಮನ ಸೆಳೆದರು.

ಮೆರವಣಿಗೆ ಸಾಗಿ ದಾರಿಯ ಇಕ್ಕೆಲಗಳಲ್ಲಿ ವ್ಯಾಪಾರ ವಹಿವಾಟು ನಡೆಯುತ್ತಿದ್ದ ಕಾರಣ ರಸ್ತೆಗಳು ಕಿಕ್ಕಿರಿದವು. ಸಂಚಾರ ಸಂಪೂರ್ಣ ಬಂದ್ ಆಯಿತು.



ಮಾರ್ಗದುದ್ದಕ್ಕೂ ಮೋದಿ, ಮೋದಿ ಎಂಬ ಕೂಗಾಟ ಮುಂದುವರಿಯಿತು. ಹರ್‌ಹರ್ ಮೋದಿ, ಹರ್ ಘರ್ ಮೋದಿ, ಅಬ್ ಕಿ ಬಾರ್ ಚಾರ್ ಸೌ ಪಾರ್ ಘೋಷಣೆ ಮೊಳಗಿಸಿದರು. ಹೆಜ್ಜೆ ಹೆಜ್ಜೆಗೂ ಜೈ ಶ್ರೀರಾಮ್, ಜೈಜೈ ಶ್ರೀರಾಮ್ ಎನ್ನುತ್ತ ಸಾಗಿದರು. ಮಹಿಳಾ ತಂಡಗಳು ಕೂಡ ರಾಮ ನಾಮ ಜಪ ಮಾಡುತ್ತಲೇ ಮೆರವಣಿಗೆಯಲ್ಲಿ ಹೆಜ್ಜೆ ಹಾಕಿದವು.



**ಜಗದೀಶ ಶೆಟ್ಟರ್ ಅದ್ದೂರಿ ಮೆರವಣಿಗೆ**

ಬೆಳಗಾವಿ: ಬೆಳಗಾವಿ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಜಗದೀಶ ಶೆಟ್ಟರ್, ಬುಧವಾರ ಅದ್ದೂರಿ ಮೆರವಣಿಗೆಯ ಮೂಲಕ ಬಂದು ನಾಮಪತ್ರ ಸಲ್ಲಿಸಿದರು. ಅವರೊಂದಿಗೆ ಬಿಜೆಪಿ ಸಂಸದೀಯ ಮಂಡಳಿ ಸದಸ್ಯ ಬಿ.ಎಸ್.ಯಡಿಯೂರಪ್ಪ, ಗೋವಾ ಮುಖ್ಯಮಂತ್ರಿ ಪ್ರಮೋದ ಸಾವಂತ್ ಕೂಡ ಜತೆಯಾದರು.

ಸಮಾದೇವಿ ಗಲ್ಲಿಯಿಂದ ಆರಂಭವಾದ ಮೆರವಣಿಗೆ ಖಡೇ ಬಜಾರ್ ರಸ್ತೆ, ಗಣಪತಿ ಗಲ್ಲಿ, ಶನಿವಾರ ಕೂಟ್ ಮೂಲಕ ಕಾಕತಿ ವೇಸ್‌ನಲ್ಲಿ ಸಾಗಿ ರಾಣಿ ಚನ್ನಮ್ಮ ವೃತ್ತಕ್ಕೆ ಬಂದು ಕೊನೆಗೊಂಡಿತು.

ಅಲ್ಲಿಂದ ವಾಹನ ಇಳಿದು ಜಿಲ್ಲಾಧಿಕಾರಿ ಕಚೇರಿಗೆ ತೆರಳಿದ ನಾಯಕರು, ಚುನಾವಣಾಧಿಕಾರಿ ನಿತೇಶ್ ಪಾಟೀಲ ಅವರಿಗೆ ಉಮೇದುವಾರಿಕೆ ಪತ್ರ ಸಲ್ಲಿಸಿದರು.

ಬಿ.ಎಸ್. ಯಡಿಯೂರಪ್ಪ, ಪ್ರಮೋದ ಸಾವಂತ್, ಸಂಸದೆ ಮಂಗಲಾ ಅಂಗಡಿ, ರಾಜ್ಯಸಭೆ ಸದಸ್ಯ ಈರಣ್ಣ ಕಡಾಡಿ, ಶಾಸಕರಾದ ಅಭಯ ಪಾಟೀಲ, ಬಾಲಚಂದ್ರ ಜಾರಕಿಹೊಳಿ, ದುರ್ಯೋಧನ ಐಹೊಳೆ, ವಿಧಾನ ಪರಿಷತ್ ಸದಸ್ಯ ಹಣಮಂತ ನಿರಾಣಿ, ಮಾಜಿ ಸಚಿವ ಮುರುಗೇಶ ನಿರಾಣಿ, ಮಾಜಿ ಶಾಸಕ ಅನಿಲ ಬೆನಕೆ, ರಾಜ್ಯಸಭಾ ಮಾಜಿ ಸದಸ್ಯ ಪ್ರಭಾಕರ ಕೋರೆ, ಮಹಾಂತೇಶ ಕವಟಗಿಮಠ, ಮೇಯರ್ ಸವಿತಾ ಕಾಂಬಳೆ ಕೂಡ ಸಾಥ್ ನೀಡಿದರು.

**'ಕಾಂಗ್ರೆಸ್ಸಿಗರಿಂದ ಸುಳ್ಳು ಪ್ರಚಾರ'**

ಬೆಳಗಾವಿ: 'ನನ್ನ ಬಗ್ಗೆ ಮಾತನಾಡಲು ಕಾಂಗ್ರೆಸ್ಸಿಗರಿಗೆ ಯಾವುದೇ ವಿಚಾರಗಳು ಇಲ್ಲ. ಹಾಗಾಗಿ, ನಾನು ಬೆಳಗಾವಿಗೆ ಮೋಸ ಮಾಡಿದ್ದೇನೆ ಎಂದು ಸುಳ್ಳು ಪ್ರಚಾರ ಮಾಡುತ್ತಿದ್ದಾರೆ' ಎಂದು ಬಿಜೆಪಿ ಅಭ್ಯರ್ಥಿ ಜಗದೀಶ ಶೆಟ್ಟರ್ ಹೇಳಿದರು.

ಮಾಧ್ಯಮದವರೊಂದಿಗೆ ಮಾತನಾಡಿದ ಅವರು, 'ಲೋಕಸಭೆ ಚುನಾವಣೆಯಲ್ಲಿ ಜಾತಿ ಲೆಕ್ಕಕ್ಕೆ ಬರುವುದಿಲ್ಲ. ರಾಷ್ಟ್ರೀಯತೆ ಆಧಾರದ ಮೇಲೆ ನನ್ನ ಗೆಲುವು ನಿಶ್ಚಿತ' ಎಂದರು.

'ಸಣ್ಣಪುಟ್ಟ ಸಮಸ್ಯೆಗಳು ಇದ್ದೇ ಇರುತ್ತವೆ. ಸಂಗಣ್ಣ ಕರಡಿ ಅವರು ಇದೇ ವಿಚಾರಕ್ಕೆ ಪಕ್ಷ ಬಿಟ್ಟಿರಬಹುದು. ನಾನು ಪಕ್ಷ ತೊರೆದಿದ್ದೆ. ಮರಳಿ ಬಂದಿದ್ದೇನೆ. ನನ್ನ ಮೂಲ ಆರ್‌ಎಸ್‌ಎಸ್ ಹಾಗೂ ಬಿಜೆಪಿ' ಎಂದರು.

'ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರದ ಪತನಕ್ಕೆ ಯಾವುದೇ ಆಪರೇಷನ್ ಕಮಲದ ಅವಶ್ಯಕತೆ ಇಲ್ಲ. ಈ ವಿಚಾರವಾಗಿ ಸ್ವತಃ ಗುಬ್ಬಿ ಶಾಸಕರೇ ನೇರವಾಗಿ ಹೇಳಿದ್ದಾರೆ. ಶಾಸಕರಲ್ಲಿ ಇರುವ ಒಳಬೇಗುದಿ ಯಾವಾಗ ಸ್ಫೋಟವಾಗುತ್ತದೆಯೋ ಗೊತ್ತಿಲ್ಲ' ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು.ನಗರದಲ್ಲಿ ಬಿಜೆಪಿ ಶಕ್ತಿ ಪ್ರದರ್ಶನ, ಕಾರ್ಯಕರ್ತ–ರಿಗೆ ಹುಮ್ಮಸ್ಸು ತುಂಬಿದ ಯಡಿಯೂರಪ್ಪ, ಪ್ರಮೋದ ಸಾವಂತ್.

ಇಲ್ಲಿನ ಸಮಾದೇವಿ ಮಂದಿರದಲ್ಲಿ ಬೆಳಿಗ್ಗೆ ಪೂಜೆ ಸಲ್ಲಿಸಿದ ಬಳಿಕ ಮೆರವಣಿಗೆಗೆ ಚಾಲನೆ ನೀಡಲಾಯಿತು. ಬಿ.ಎಸ್.ಯಡಿಯೂರಪ್ಪ ಅವರು ಮೆರವಣಿಗೆ ಬಳಿ ಬರುತ್ತಿದ್ದಂತೆಯೇ ಕಾರ್ಯಕರ್ತರ ಹರ್ಷೋದ್ಗಾರ ಮುಗಿಲು ಮುಟ್ಟಿತು. ಪಟಾಕಿ ಸಿಡಿಸಿ, ಜೈಕಾರ ಹಾಕಿ, ಬಾವುಟಗಳನ್ನು ಹಾರಾಡಿಸಿ ನಾಯಕರಿಗೆ ಸ್ವಾಗತ ಕೋರಿದರು.

ಅಪಾರ ಸಂಖ್ಯೆಯಲ್ಲಿ ಸೇರಿದ ಬಿಜೆಪಿ ಕಾರ್ಯಕರ್ತರು ಕೇಸರಿ ಪೇಟ ತೊಟ್ಟು ಮೆರವಣಿಗೆಯಲ್ಲಿ ಪಾಲ್ಗೊಂಡರು. ಕೇಸರಿ ಬಾವುಟ, ಬಿಜೆಪಿ ಚಿಹ್ನೆಯ ಬಾವುಟ, ಅಂಬೇಡ್ಕರ್ ಭಾವಚಿತ್ರ ಹೊಂದಿದ ನೀಲಿ ಬಾವುಟ... ಹೀಗೆ ವಿವಿಧ ರೀತಿಯ ಬಾವುಟಗಳು ರಾರಾಜಿಸಿದವು. ಬಿಳಿ ಉಡುಗೆಯಲ್ಲಿ ಬಂದಿದ್ದ ಯುವಜನರು ಭಗವಾಧ್ವಜ ಹಾರಾಡಿಸಿ ಗಮನ ಸೆಳೆದರು.

## ನಿರಾಶ್ರಿತ ಕನ್ನಡಿಗರಿಗೆ ಪುನರ್ವಸತಿ: ಗೋವಾ ಸಿಎಂ ಪ್ರಮೋದ ಸಾವಂತ್




ಬೆಳಗಾವಿ: 'ನ್ಯಾಯಾಲಯದ ಆದೇಶದಂತೆ ಗೋವಾದಲ್ಲಿ ಕನ್ನಡಿಗರ ಮನೆಗಳನ್ನು ತೆರವು ಮಾಡಲಾಗುತ್ತಿದೆ ಹೊರತು ಸರ್ಕಾರದ ಇರಾದೆ ಇಲ್ಲ. ನಿರಾಶ್ರಿತರಿಗೆ ಪ್ರತ್ಯೇಕ ಜಾಗ ಒದಗಿಸಿ, ಪುನರ್ವಸತಿ ಕಲ್ಪಿಸಲು ಕ್ರಮ ಕೈಗೊಳ್ಳಲಾಗಿದೆ' ಎಂದು ಗೋವಾ ಮುಖ್ಯಮಂತ್ರಿ ಪ್ರಮೋದ ಸಾವಂತ್ ಹೇಳಿದರು.

ಬೆಳಗಾವಿ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಜಗದೀಶ ಶೆಟ್ಟರ್ ಅವರು ಬುಧವಾರ ಉಮೇದುವಾರಿಕೆ ಸಲ್ಲಿಸಿದ ಸಂದರ್ಭದಲ್ಲಿ ಜತೆಗಿದ್ದ ಅವರು ಸುದ್ದಿಗಾರರೊಂದಿಗೆ ಮಾತನಾಡಿ, 'ನ್ಯಾಯಾಲಯದ ಆದೇಶ ಪಾಲನೆ ಸರ್ಕಾರದ ಕರ್ತವ್ಯ. ನಿರಾಶ್ರಿತ ಕನ್ನಡಿಗರ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನನ್ನೊಂದಿಗೆ ನೇರ ಮಾತನಾಡಿಲ್ಲ. 'ಎಕ್ಸ್' ಖಾತೆಯಲ್ಲಿ ಅಭಿಪ್ರಾಯ ಹಂಚಿಕೊಂಡಿದ್ದು ಗಮನಿಸಿದ್ದೇನೆ' ಎಂದರು.

ನಂತರ ನಡೆದ ಪ್ರಚಾರ ರ‍್ಯಾಲಿಯಲ್ಲಿ ಮಾತನಾಡಿದ ಅವರು,'ಸುಳ್ಳು ಹೇಳುವ ಪಕ್ಷ ಯಾವುದಾದರೂ ಇದ್ದರೆ ಅದು ಕಾಂಗ್ರೆಸ್. ಅದು ಜನರ ಭರವಸೆ ಈಡೇರಿಸಲ್ಲ. ನುಡಿದಂತೆ ನಡೆಯಲ್ಲ. ಹೀಗಾಗಿ ಜನರಿಗೆ ಆ ಪಕ್ಷದ ಮೇಲೆ ವಿಶ್ವಾಸ ಇಲ್ಲ. ಅದು ಕುಟುಂಬ ರಾಜಕಾರಣದ ಪಕ್ಷ. ನಮ್ಮದು ರಾಷ್ಟ್ರೀಯ ವಾದದ ಪಕ್ಷ' ಎಂದರು.

'10 ವರ್ಷಗಳಲ್ಲಿ ಮೋದಿ ನೇತೃತ್ವದ ಸರ್ಕಾರ ಕೈಗೊಂಡ ಸಾಧನೆಗಳನ್ನು ದೇಶದ ಜನ ನೋಡಿದ್ದಾರೆ. ಪ್ರಧಾನಿ ನುಡಿದಂತೆ ನಡೆದಿದ್ದಾರೆ. ದೇಶದ ವಿಕಾಸಕ್ಕೆ ಭದ್ರ ಅಡಿಪಾಯ ಹಾಕಿದ್ದಾರೆ. ರಾಜ್ಯದಲ್ಲಿ 28 ಸ್ಥಾನ ಗೆಲ್ಲುತ್ತೇವೆ' ಎಂದರು.

## ಬೆಳಗಾವಿ ಸೇರಿದಂತೆ ವಿವಿಧ ಜಿಲ್ಲೆಗಳಲ್ಲಿ ಭಾರಿ ಮಳೆ ಮುನ್ಸೂಚನೆ



ಬೆಂಗಳೂರು: ರಾಜ್ಯದಲ್ಲಿ ಮುಂದಿನ 4 ದಿನಗಳ ಕಾಲ ಬೆಳಗಾವಿ ಸೇರಿದಂತೆ ವಿವಿಧ ಜಿಲ್ಲೆಗಳಲ್ಲಿ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಬೆಂಗಳೂರು ಸೇರಿದಂತೆ ರಾಜ್ಯದ 27 ಜಿಲ್ಲೆಗಳಲ್ಲಿ ಮಳೆಯಾಗಲಿದೆ. ಬೆಂಗಳೂರು ನಗರ, ಕೊಡಗು, ಹಾಸನ, ಚಿಕ್ಕಮಗಳೂರು, ಮೈಸೂರು, ಮಂಡ್ಯ, ರಾಮನಗರ, ಚಾಮರಾಜನಗರ, ದಾವಣಗೆರೆ, ತುಮಕೂರು, ಚಿತ್ರದುರ್ಗ, ಕೋಲಾರ, ಶಿವಮೊಗ್ಗ, ದಕ್ಷಿಣ ಕನ್ನಡ, ಉತ್ತರ ಕನ್ನಡ, ಉಡುಪಿ, ಬಗಲಕೋಟೆ, ವಿಜಯನಗರ, ಬೆಳಗಾವಿ, ಬೀದರ್, ಗದಗ, ಹಾವೇರಿ, ರಾಯಚೂರು, ಕಲಬುರ್ಗಿ, ಕೊಪ್ಪಳ, ವಿಜಯಪುರ, ಯದಗಿರಿ, ಬಳ್ಳಾರಿ, ಧಾರವಾಡ, ಬೆಂಗಳೂರು ಗ್ರಾಮಾಂತರ ಸೇರಿದಂತೆ 27 ಜಿಲ್ಲೆಗಳಲ್ಲಿ ಮಳೆಯಾಗಲಿದೆ. ಬೆಂಗಳೂರಿನಲ್ಲಿ ಏಪ್ರಿಲ್ 19ರಂದು ಮಳೆಯಾಗಲಿದ್ದರೆ ಉಳಿದ ಜಿಲ್ಲೆಗಳಲ್ಲಿ ಏಪ್ರಿಲ್ 18ರಿಂದ ಮಳೆಯಾಗಲಿದೆ ಎಂದು ಮಾಹಿತಿ ನೀಡಿದೆ.

## ಸೂಕ್ತ ದಾಖಲೆಯಿಲ್ಲದೇ ಎಟಿಎಂ ವಾಹನದಲ್ಲಿ ಸಾಗಿಸುತ್ತಿದ್ದ 4 ಕೋಟಿ ನಗದು ಜಪ್ತಿ

ಚಿಕ್ಕಬಳ್ಳಾಪುರ: ಸೂಕ್ತ ದಾಖಲೆಗಳಿಲ್ಲದೇ ಎಟಿಎಂ ವಾಹನದಲ್ಲಿ ಸಾಗಿಸುತ್ತಿದ್ದ ಅಂದಾಜು 4 ಕೋಟಿ ರೂ.ಗಳನ್ನು ಚುನಾವಣಾಧಿಕಾರಿಗಳು ವಶಕ್ಕೆ ಪಡೆದಿದ್ದಾರೆ.

ಚಿಕ್ಕಬಳ್ಳಾಪುರ ನಗರದ ಡಿ–ಕ್ರಾಸ್ ಬಳಿ ಖಚಿತ ಮಾಹಿತಿ ಮೇರೆಗೆ ವಾಹನವನ್ನು ತಪಾಸಣೆ ನಡೆಸಿದಾಗ ಅಪಾರ ಪ್ರಮಾಣದ ನಗದು ಪತ್ತೆಯಾಗಿದೆ. ಬಳಿಕ ಪೊಲೀಸರು ಹಾಗೂ ಚುನಾವಣಾಧಿಕಾರಿಗಳು ಇಡಿ ಹಾಗೂ ಐಟಿ ಇಲಾಖೆ ಅಧಿಕಾ–ರಿಗಳಿಗೆ ಮಾಹಿತಿ ನೀಡಿದ್ದಾರೆ.

ಮೇಲ್ನೋಟಕ್ಕೆ ರೋಜಿಪುರದ ಎಟಿಎಂ ಗೆ ಸಾಗಿಸುತ್ತಿದ್ದ ಹಣ ಎಂದು ತಿಳಿದುಬಂದಿದೆ. ಆದರೆ ಹಣಕ್ಕೆ ಸಂಬಂಧಿಸಿದ ಸೂಕ್ತ ದಾಖಲೆ ಇರಲಿಲ್ಲ.

ಹಾಗಾಗಿ ಹಣವನ್ನು ಠಾಣೆಗೆ ಸಾಗಿಸಿದ್ದು, ಲೆಕ್ಕ ಹಾಕಲಾಗುತ್ತಿದೆ ಎಂದು ಮೂಲಗಳು ತಿಳಿಸಿವೆ. ಚುನಾವಣಾಧಿಕಾರಿಗಳು ದೂರು ಸಹ ನೀಡಿದ್ದು, ಪ್ರಕರಣ ದಾಖಲಿಸುವ ಸಾಧ್ಯತೆ ಇದೆ ಎಂದು ತಿಳಿದುಬಂದಿದೆ.

## ಚಿಕ್ಕೋಡಿಯಲ್ಲೂ ಬಿಜೆಪಿ ಗೆಲ್ಲುತ್ತದೆ: ಬಾಲಚಂದ್ರ ಜಾರಕಿಹೊಳಿ ವಿಶ್ವಾಸ

ಬೆಳಗಾವಿ: 'ಬೆಳಗಾವಿ ಹಾಗೂ ಚಿಕ್ಕೋಡಿ ಕ್ಷೇತ್ರಗಳಲ್ಲಿ ಈ ಬಾರಿ ಬಿಜೆಪಿ ಅಭ್ಯರ್ಥಿಗಳು ಗೆಲ್ಲುತ್ತಾರೆ. ಎಲ್ಲೆಡೆ ಪ್ರಧಾನಿ ಮೋದಿ ಅವರ ಗಾಳಿ ಬೀಸುತ್ತಿದೆ' ಎಂದು ಶಾಸಕ ಬಾಲಚಂದ್ರ ಜಾರಕಿಹೊಳಿ ಹೇಳಿದರು.

ನಗರದಲ್ಲಿ ಬುಧವಾರ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, 'ಚಿಕ್ಕೋಡಿಯಲ್ಲಿ ಅಣ್ಣಾಸಾಹೇಬ ಜೊಲ್ಲೆ ಗೆಲ್ಲುತ್ತಾರೆ ಎಂಬ ಮಾತು ಎಲ್ಲೆಡೆ ಕೇಳಿಬರುತ್ತಿವೆ. ಅವರು ನನ್ನನ್ನು ಪ್ರಚಾರಕ್ಕೆ ಕರೆದಿಲ್ಲ. ಹಾಗಾಗಿ, ನಾನು ಹೋಗಿಲ್ಲ. ನಮ್ಮ ಕುಟುಂಬದವರೊಬ್ಬರು ಅಣ್ಣಾಸಾಹೇಬ ವಿರುದ್ಧ ನಿಂತಿದ್ದಾರೆ ಎಂಬ ಕಾರಣಕ್ಕೆ ಹೋಗಿಲ್ಲ ಎಂದರ್ಥವಲ್ಲ. ಬೆಳಗಾವಿ ಲೋಕಸಭೆ ಕ್ಷೇತ್ರದಲ್ಲೇ ಹೆಚ್ಚು ಕ್ರಿಯಾಶೀಲವಾಗಿದ್ದೇನೆ' ಎಂದರು.



'ಜಗದೀಶ ಶೆಟ್ಟರ್ ಹೊರಗಿನವರು ಎನ್ನುವ ಆರೋಪಕ್ಕೆ ಈಗಾಗಲೇ ಅವರೇ ಉತ್ತರ ಕೊಟ್ಟಿದ್ದಾರೆ. ಕಾಂಗ್ರೆಸ್‌ನ ಜಿಲ್ಲೆಯ ನಾಯಕರಿಗೆ ಚುನಾವಣೆ ಬಂದಾಗ ಮಾತ್ರ ಸ್ವಾಭಿಮಾನ ನೆನಪಾಗುತ್ತದೆ. ಜಗದೀಶ ಶೆಟ್ಟರ್ ಹೊರಗಿನವರು ಎನ್ನುವುದನ್ನು ಜನ ಮರೆತಿ–ದ್ದಾರೆ. ಈಗ ಈ ವಿಷಯ ಮುಗಿದ ಅಧ್ಯಾಯ' ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

ಸಚಿವೆ ಲಕ್ಷ್ಮಿ ಹೆಬ್ಬಾಳಕರ ಲಿಂಗಾಯತ ಅಸ್ತ್ರ ಪ್ರಯೋಗಿಸುತ್ತಿರುವ ಕುರಿತು ಪ್ರತಿಕ್ರಿಯಿಸಿದ ಬಾಲಚಂದ್ರ, 'ಚುನಾವಣೆ ಬಂದಾಗ ಇದೆಲ್ಲ ಸ್ವಾಭಾವಿಕ. ಜನರು ಇದನ್ನು ಗಂಭೀರವಾಗಿ ಪರಿಗಣಿಸಿಲ್ಲ. ನರೇಂದ್ರ ಮೋದಿ ಮುಖಕ್ಕೆ ಹೆಚ್ಚಿನ ಗೌರವವಿದೆ. ಜಾತಿ ಕೆಲಸ ಮಾಡುವುದಿಲ್ಲ' ಎಂದರು.

'ಶಾಸಕ ಬಸನಗೌಡ ಪಾಟೀಲ ಯತ್ನಾಳ ಮುಂದೆ ಮುಖ್ಯಮಂತ್ರಿಯಾಗುತ್ತೇನೆ ಎಂದು ಹೇಳಿದ್ದಾರೆ. ಆ ಕನಸು ಈಡೇರಿದರೆ ಒಳ್ಳೆಯದೇ. ಉತ್ತರ ಕರ್ನಾಟಕದವರೊಬ್ಬರು ಮುಖ್ಯಮಂತ್ರಿಯಾದರೆ ನಾವೂ ಖುಷಿಪಡುತ್ತೇವೆ' ಎಂದರು.

ಜಾರಕಿಹೊಳಿ ಕುಟುಂಬ ರಾಜಕಾರಣದ ಬಗ್ಗೆ ಯತ್ನಾಳ ಕಿಡಿ ಕಾರಿದ್ದಾರೆ ಎಂಬ ಪ್ರಶ್ನೆಗೆ ಪ್ರತಿಕ್ರಿಯಿಸಿದ ಶಾಸಕ, 'ಯತ್ನಾಳ ಅವರು ಸಚಿವ ಸತೀಶ ಜಾರಕಿಹೊಳಿ ಅವರನ್ನು ಟೀಕಿಸಿದ್ದಾರೆ. ಇದಕ್ಕೆ ಸಚಿವರೇ ಉತ್ತರಿಸಬೇಕು, ನಾನಲ್ಲ' ಎಂದರು.

**ಶಾಸಕ ಯತ್ನಾಳ್ ಸಿಎಂ ಆದರೆ ನಮಗೂ ಖುಷಿ: ಶಾಸಕ ಬಾಲಚಂದ್ರ ಜಾರಕಿಹೊಳಿ**

ಬೆಳಗಾವಿ: ಬೆಳಗಾವಿ ಲೋಕಸಭಾ ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ್ ಅವರು ಗೆಲುವು ಸಾಧಿಸಲಿದ್ದಾರೆ. ಸಾಕಷ್ಟು ಸಂಖ್ಯೆಯಲ್ಲಿ ಜನ ಬಂದಿರುವುದು ನೋಡಿದರೆ ಶೆಟ್ಟರ್ ಆಯ್ಕೆ ಖಚಿತ ಎಂದು ಬಾಲಚಂದ್ರ ಜಾರಕಿಹೊಳಿ ಹೇಳಿದ್ದರು.

## ಬೆಳಗಾವಿ: ಮಾಜಿ ಶಾಸಕ ಮಾಳಗಿ ಕಾಂಗ್ರೆಸ್ ಸೇರ್ಪಡೆ



ಬೆಳಗಾವಿ: ಈ ಹಿಂದೆ ಅಸ್ತಿತ್ವದಲ್ಲಿದ್ದ ಹಿರೇಬಾಗೇವಾಡಿ ವಿಧಾನಸಭಾ ಮತಕ್ಷೇತ್ರದ ಮಾಜಿ ಶಾಸಕ ಶಿವಪುತ್ರಪ್ಪ ಚನ್ನಬಸಪ್ಪ(ಎಸ್.ಸಿ.)ಮಾಳಗಿ ಇದೀಗ ಮತ್ತೆ ಕಾಂಗ್ರೆಸ್ ಸೇರಿದ್ದಾರೆ.

ಬೆಂಗಳೂರಿನಲ್ಲಿ ಇಂದು ನಡೆದ ಸಮಾರಂಭದಲ್ಲಿ ಅವರು ಕಾಂಗ್ರೆಸ್ ಸೇರಿದ್ದಾರೆ. 1985 ರಲ್ಲಿ ಮೊದಲ ಬಾರಿಗೆ ಕಾಂಗ್ರೆಸ್ ನಿಂದ ಶಾಸಕರಾಗಿದ್ದ ಅವರು ನಂತರ 1994,1999ರಲ್ಲಿ ಜನತಾದಳ, ಸಂಂ–ಯುಕ್ತ ಜನತಾದಳದಿಂದ ಶಾಸಕರಾಗಿ ಆಯ್ಕೆಯಾಗಿದ್ದರು. ನಂತರ ನಡೆದ ಚುನಾವಣೆಗಳಲ್ಲಿ ಸ್ಪರ್ಧಿಸಿ ಸೋಲು ಅನುಭವಿಸಿದ್ದರು. ಇದೀಗ ಅವರು ಮತ್ತೆ ಕಾಂಗ್ರೆಸ್ ಸೇರ್ಪಡೆಗೊಂಡಿದ್ದಾರೆ. ಬುಧವಾರ ಬೆಂಗಳೂರಿನಲ್ಲಿ ನಡೆದ ಸಮಾರಂಭದಲ್ಲಿ ಅವರು ಕಾಂಗ್ರೆಸ್ ಸೇ–ರಿದ್ದಾರೆ.

## ಬೆಳಗಾವಿ ಪ್ರದೇಶ ಮಹಾರಾಷ್ಟ್ರಕ್ಕೆ: ಅಂಜಲಿ ಹೇಳಿಕೆಗೆ ಸ್ಪಷ್ಟನೆ ನೀಡಲು ಬಿಜೆಪಿ ಆಗ್ರಹ

ಬೆಂಗಳೂರು: 'ಬೆಳಗಾವಿ ಜಿಲ್ಲೆಯ ಕೆಲವು ತಾಲ್ಲೂಕುಗಳು ಮಹಾರಾಷ್ಟ್ರಕ್ಕೆ ಸೇರಬೇಕಾಗಿವೆ ಎಂದು ಉತ್ತರಕನ್ನಡ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಅಂಜಲಿ ನಿಂಬಾಳ್ಕರ್ ಹೇಳಿಕೆ ನೀಡಿದ್ದು, ಈ ಬಗ್ಗೆ ಕಾಂಗ್ರೆಸ್ ಪಕ್ಷ ತನ್ನ ನಿಲುವು ಸ್ಪಷ್ಟಪಡಿಸಬೇಕು' ಎಂದು ಬಿಜೆಪಿ ಚುನಾವಣಾ ನಿರ್ವಹಣಾ ಸಮಿತಿ ಸಂಚಾಲಕ ವಿ.ಸುನಿಲ್‌ಕುಮಾರ್ ಒತ್ತಾಯಿಸಿದ್ದಾರೆ.

ಕಾಂಗ್ರೆಸ್ ಅಭ್ಯರ್ಥಿ ಕರ್ನಾಟಕದ ಹಿತಕ್ಕೆ ವಿರುದ್ಧವಾಗಿ ನಡೆದುಕೊಳ್ಳುತ್ತಿದ್ದಾರೆ. ಪಕ್ಷದ ನಾಯಕರ ಆಶೀರ್ವಾದ ಇಲ್ಲದೇ ಇಂತಹ ಹೇಳಿಕೆಗಳನ್ನು ನೀಡಲು ಸಾಧ್ಯವೇ ಎಂದು ಅವರು ಬುಧವಾರ ಸುದ್ದಿಗೋಷ್ಠಿಯಲ್ಲಿ ಪ್ರಶ್ನಿಸಿದರು.

ರಾಜ್ಯವನ್ನು ಒಡೆಯುವುದು ಕಾಂಗ್ರೆಸ್ ಪಕ್ಷದ ರಹಸ್ಯ





ಕಾರ್ಯಸೂಚಿಯೇ ಎಂಬುದನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟಪಡಿಸಬೇಕು. ವಿಚಿತ್ರವೆಂದರೆ ಇಂತಹ ಹೇಳಿಕೆಗಳಿಗೆ ಪ್ರತಿಕ್ರಿಯೆ ನೀಡದೇ ಮೌನ ವಹಿಸಿದ್ದಾರೆ.

ವಿಧಾನಸೌಧದಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಪಾಕಿಸ್ತಾನ್ ಜಿಂದಾಬಾದ್ ಎಂದು ಘೋಷಣೆ ಕೂಗಿದಾಗಲೂ ಮುಖ್ಯಮಂತ್ರಿ ಇದೇ ರೀತಿ ಮೌನ ವಹಿಸಿದ್ದರು ಎಂದು ಸುನಿಲ್‌ಕುಮಾರ್ ಹೇಳಿದರು.

## ಕಾರಾಗೃಹದ ಮೇಲೆ ಸಿಸಿಬಿ ದಿಢೀರ್ ದಾಳಿ: 40 ಸಾವಿರ ನಗದು 3 ಚಾಕು ಜಪ್ತಿ

ಬೆಂಗಳೂರು: ಅಕ್ರಮ ಚಟುವಟಿಕೆಗಳ ಮಾಹಿತಿ ಹಿನ್ನೆಲೆಯಲ್ಲಿ ಸಿಸಿಬಿ ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹದ ಮೇಲೆ ಮಂಗಳವಾರ ನಸುಕಿನಲ್ಲಿ 3.30 ಗಂಟೆಗೆ ದಿಢೀರ್ ದಾಳಿ ನಡೆಸಿದೆ.ನಾಲ್ಕು ತಾಸಿಗೂ ಅಧಿಕ ಹೊತ್ತು ಜೈಲಿನಲ್ಲಿ ಜಾಲಾಡಿ ಅಲ್ಪ ಪ್ರಮಾಣದ ನಗದು ಹಾಗೂ ಚೂರಿಗಳನ್ನು ಸಿಸಿಬಿ ಜಪ್ತಿ ಮಾಡಿದೆ.

ಅಕ್ರಮ ಚಟುವಟಿಕೆ ಶಂಕೆ ಮೇರೆಗೆ ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹದ ಮೇಲೆ ಮಂಗಳವಾರ ನಸುಕಿನಲ್ಲಿ ದಿಢೀರ್ ದಾಳಿ ನಡೆಸಿ ಸಿಸಿಬಿ ಶೋಧ ನಡೆಸಿದೆ.




ಈ ವೇಳೆ ರೂ. 40,000 ನಗದು ಹಾಗೂ ಮೂರು ಚಾಕು ಗಳು ಪತ್ತೆಯಾಗಿದ್ದು, ಅಧಿಕಾ–ರಿಗಳು ಅವುಗಳನ್ನು ಜಪ್ತಿ ಮಾಡಿಕೊಂಡಿದ್ದಾರೆ.

ಈ ಕುರಿತಂತೆ ಬೆಂಗಳೂರು ನಗರ ಪೊಲೀಸ್ ಆಯುಕ್ತ ಬೀದಯಾನಂದ ಸುದ್ದಿಗಾರರೊಂದಿಗೆ ಮಾತನಾಡಿ, ಕೇಂದ್ರ ಕಾರಾಗೃಹದಲ್ಲಿ ದಿಢೀರ್ ತಪಾಸಣೆ ನಡೆಸಿ ರೂ 40 ಸಾವಿರ ನಗದು ಹಾಗೂ ಮೂರು ಚಾಕುಗಳನ್ನು ಸಿಸಿಬಿ ಜಪ್ತಿ ಮಾಡಿದೆ.

ಈ ಹಣ ಹಾಗೂ ಚಾಕು ಬಗ್ಗೆ ತನಿಖೆ ನಡೆಸಿ ಕಾನೂನು ಕ್ರಮ ಜರುಗಿಸಲಾಗುತ್ತದೆ. ಅಕ್ರಮ ಚಟುವಟಿಕೆಗಳ ಶಂಕೆ ಮೇರೆಗೆ ಜೈಲು ತಪಾಸಣೆ ನಡೆಸಲಾಗಿದೆ ಎಂದು ಹೇಳಿದರು.



## ಸಂಸದ ಸಂಗಣ್ಣ ಕರಡಿ ಕಾಂಗ್ರೆಸ್‌ಗೆ ಸೇರ್ಪಡೆ

ಬೆಂಗಳೂರು: ಈ ಬಾರಿ ಲೋಕಸಭೆ ಚುನಾವಣೆಗೆ ಸ್ಪರ್ಧಿಸಲು ಬಿಜೆಪಿ ಟಿಕೆಟ್ ಸಿಗದ ಹಿನ್ನೆಲೆಯಲ್ಲಿ ಮುನಿಸಿಕೊಂಡಿದ್ದ ಹಾಲಿ ಕೊಪ್ಪಳ ಸಂಸದ ಸಂಗಣ್ಣ ಕರಡಿ ಅವರು ಈಗ ಕಾಂಗ್ರೆಸ್ ಪಾರ್ಟಿಗೆ ಅಧಿಕೃತವಾಗಿ ಸೇರಿಕೊಂಡಿದ್ದಾರೆ.

ಇದೇ ವೇಳೆ ಮಾತನಾಡಿದ ಡಿಸಿಎಂ ಡಿ.ಕೆ ಶಿವಕುಮಾರ್ ಅವರು ಹಲವು ಮಂದಿ ನಮ್ಮ ಪಾರ್ಟಿಗೆ ಬಂದು ಸೇರುತ್ತಿದ್ದಾರೆ ಅಂತ ಹೇಳಿದರು.

ಇದಲ್ಲದೇ ಸೋಲಿನ ಭಯದಿಂದಲೇ ಬಿಜೆಪಿ ಹಾಗೂ ಜೆಡಿ–ಎಸ್ ಮೈತ್ರಿ ಮಾಡಿಕೊಂಡಿದೆ. ನಮ್ಮ ಕಾರ್ಯಕ್ರಮಗಳ ಮೂಲಕ ಬಿಜೆಪಿ ನಿರ್ಮೂಲನೆಯಾಗಲಿದೆ ಅಂತ ಹೇಳಿದರು. ಬಿಜೆಪಿಯ ಸರಿ ಸುಮಾರು ನೂರು ಮಂದಿಗೆ ಟಿಕೆಟ್ ಕೊಟ್ಟಿಲ್ಲ, ಈ ಮೂಲಕ ಎನ್‌ಡಿಯ ಪರಿಸ್ಥಿತಿ ಏನು ಎನ್ನುವುದು ತಿಳಿದಿದೆ. ಅವರ ಪಾರ್ಟಿಯವರು ಸಂವಿಧಾನವನ್ನು ಬದಲಾವಣೆ ಮಾಡುತ್ತೇವೆ ಅಂತ ಹೇಳಿದ್ದಾರೆ. ಬಿಜೆಪಿ ಹಣೆ ಬರಹದಲ್ಲಿ ಗ್ಯಾರಂಟಿಯನ್ನು ತೆಗೆಯುವುದಕ್ಕೆ ಸಾಧ್ಯವಿಲ್ಲ ಅಂತ ಹೇಳಿದರು.



## ಬಸ್ ಪಲ್ಟಿ

ಬೆಳಗಾವಿ: ಬೆಳಗಾವಿ ಜಿಲ್ಲೆಯ ಕಿತ್ತೂರು ತಾಲೂಕಿನ ತಿಮ್ಮಾಪುರ ಗ್ರಾಮದ ಬಳಿ ಬ್ರೇಕ್ ಫೇಲ್ ಆಗಿ ರಾಜಹಂಸ ಬಸ್ ಪಲ್ಟಿಯಾಗಿದ ಘಟನೆ ನಡೆದಿದೆ.

ಹುಬ್ಬಳ್ಳಿಯಿಂದ ಬೆಳಗಾವಿಗೆ ಬರುತ್ತಿದ್ದ ರಾಜಹಂಸ ಬಸ್, ರಸ್ತೆ ಪಕ್ಕದ ಬ್ಯಾರಿಕೆಡ್ಗೆ ಗುದ್ದಿ ಸರ್ವಿಸ್ ರಸ್ತೆಯಲ್ಲಿ ಪಲ್ಟಿಯಾಗಿದೆ. ಬಸ್ನಲ್ಲಿದ್ದ ಹತ್ತಕ್ಕೂ ಅಧಿಕ ಪ್ರಯಾಣಿಕ–ರಿಗೆ ಗಂಭೀರ ಗಾಯಗಳಾಗಿದ್ದು, ಇಪ್ಪತ್ತು ಜನ ಪ್ರಯಾಣಿಕರಿಗೆ ಸಣ್ಣ ಪುಟ್ಟ ಗಾಯಗಳಾಗಿವೆ. ಸ್ಥಳೀಯ ಆಸ್ಪತ್ರೆಯಲ್ಲಿ ಗಾಯಾಳುಗಳಿಗೆ ಚಿಕಿತ್ಸೆ ನೀಡಲಾಗುತ್ತಿದೆ.

## ರಾಮನವಮಿ ಮುಗಿಸಿ ಹೋಗುತ್ತಿದ್ದವರನ್ನು ಅಡ್ಡಗಟ್ಟಿ ಅಲ್ಲಾಹು ಅಕ್ಬರ್ ಎಂದ ಮುಸ್ಲಿಂ ಯುವಕರು



ಬೆಂಗಳೂರು: ದೇಶಾದ್ಯಂತ ಹಿಂದೂಗಳು ರಾಮ ನವಮಿಯನ್ನು ಅದ್ದೂರಿಯಾಗಿ ಆಚರಿಸಿದ್ದು ಇನ್ನು ರಾಮನವಮಿಯನ್ನು ಮುಗಿಸಿಕೊಂಡು ಕಾರಿನಲ್ಲಿ ಹೋಗುತ್ತಿದ್ದವರನ್ನು ಅಡ್ಡಗಟ್ಟಿದ ಮುಸ್ಲಿಂ ಯುವಕರು ಪುಂಡಾಟ ನಡೆಸಿದ ಘಟನೆ ಬೆಂಗಳೂರಿನ ವಿದ್ಯಾರಣ್ಯಪುರದ ಬೆಟ್ಟಳ್ಳಿ ಮಸೀದಿ ಬಳಿ ನಡೆದಿದೆ.

ಕಾರನ್ನು ತಡೆದು ನಿಲ್ಲಿಸಿದ ಪುಂಡರು ಕಾರಿನ ಬಳಿ ಬಂದು ಜೈ ಶ್ರೀರಾಮ್ ಎಂದು ಹೇಳಬೇಕಾ, ಜೈ ಶ್ರೀ ರಾಮ್ ಅಲ್ಲ. ಓನ್ಲೀ ಅಲ್ಲಾಹು ಅಕ್ಬರ್ ಎಂದು ಕೂಗಿದ್ದಾರೆ. ಅಷ್ಟೇ ಅಲ್ಲದೆ ಕಾರಿನಲ್ಲಿ ಇದ್ದವರಿಗೆ ಅವಾಚ್ಯವಾಗಿ ನಿಂದಿಸಿದ್ದು ಅಲ್ಲದೆ ಹಲ್ಲೆ ಕೂಡ ನಡೆಸಿದ್ದಾರೆ. ಯುವಕರ ಪುಂಡಾಟದಿಂದ ಗರಂ ಆದ ಕಾರಿನಲ್ಲಿದ್ದ ಯುವಕರು ನಿಮ್ಮ ಹಬ್ಬದಲ್ಲಿ ನಾವು ಹೀಗೆ ಮಾಡುತ್ತೀವಾ ಎಂದು ಪ್ರಶ್ನೆ ಮಾಡಿದ್ದಾರೆ. ಆಗ ಅಲ್ಲೇ ಇದ್ದ ಮತ್ತೆ ಇಬ್ಬರು ಸೇರಿಕೊಂಡು ಮೂವರು ಹಿಂದು ಯುವಕರ ಮೇಲೆ ಹಲ್ಲೆ ಮಾಡಿದ್ದಾರೆ. ಈ ಘಟನೆಗೆ ಸಂಬಂಧಿಸಿದಂತೆ ವಿದ್ಯಾರಣ್ಯಪುರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದ್ದು, ಸದ್ಯ ಪುಂಡಾಟ ಮಾಡಿದವರಿಗಾಗಿ ಪೊಲೀಸರು ಹುಡುಕಾಟ ನಡೆಸಿದ್ದಾರೆ.

## ಕೇವಲ ಎರಡು ತಿಂಗಳಲ್ಲಿ ಬೆಂಗಳೂರಿಗರು ಕಳೆದುಕೊಂಡಿದ್ದು 240 ಕೋಟಿ ರೂ.

ಬೆಂಗಳೂರು: ಸೈಬರ್ ಕ್ರೈಂ, ಹೆಸರು ಕೇಳಿದರೇ ನಡುಕ ಹುಟ್ಟುವ ಸ್ಥಿತಿ ಇತ್ತೀಚೆಗೆ ಉಂಟಾಗಿದೆ. ನಗರ ಪ್ರದೇಶಗಳಲ್ಲಿ ಸೈಬರ್ ಅಪರಾಧ ಪ್ರಕರಣಗಳು ಹೆಚ್ಚಾಗುತ್ತಿದ್ದು, ಕೇವಲ ಎರಡು ತಿಂಗಳಲ್ಲಿ, ಸೈಬರ್ ಕ್ರೈಮ್‌ನಿಂದ ಬೆಂಗಳೂರಿಗರು 240 ಕೋಟಿ ರೂಪಾಯಿಗಳನ್ನು ಕಳೆದುಕೊಂಡಿದ್ದಾರೆ, ಅವುಗಳಲ್ಲಿ ಕೇವಲ 56 ಕೋಟಿ ರೂಪಾಯಿ ಅಂದರೆ ಶೇಕಡಾ 23.6 ರಷ್ಟು ಮಾತ್ರ ವಸೂಲಿಯಾಗಿದೆ. ಸೈಬರ್ ಅಪರಾಧಗಳ ಪತ್ತೆ ಪ್ರಮಾಣವು ಕ್ಷೀಣಿಸುತ್ತಿದೆ ಎಂದು ಗೊತ್ತಾಗಿದೆ.

2022 ರಲ್ಲಿ, ಬೆಂಗಳೂರು ನಗರದಲ್ಲಿ ಸೈಬರ್ ಅಪರಾಧ ಪ್ರಕರಣ ಪತ್ತೆಹಚ್ಚುವಿಕೆ ಶೇಕಡಾ 22.8ರಷ್ಟಿತ್ತು. 2023 ರಲ್ಲಿ ಅದು ಶೇಕಡಾ 8.1ಕ್ಕೆ ಇಳಿಯಿತು. 2024 ರಲ್ಲಿ ಕೇವಲ ಶೇಕಡಾ 1.36ಕ್ಕೆ ಕುಸಿಯಿತು (ಜನವ–ರಿಯಿಂದ ಫೆಬ್ರವರಿವರೆಗೆ). 2024 ರಲ್ಲಿ 60 ದಿನಗಳಲ್ಲಿ 3,151 ಸೈಬರ್ ಅಪರಾಧ ಪ್ರಕರಣಗಳು ದಾಖಲಾಗಿವೆ. ಈ ಪೈಕಿ 828 ಪ್ರಕರಣಗಳಲ್ಲಿ ಉದ್ಯೋಗ ವಂಚನೆ ಮತ್ತು 11 ಪ್ರಕರಣಗಳು ಮಾತ್ರ ಪತ್ತೆಯಾಗಿವೆ. ಅಂಕಿಅಂಶಗಳ ಪ್ರಕಾರ, ಉದ್ಯೋಗ ವಂಚನೆ ಹಗರಣಗಳಿಂದ ವ್ಯಕ್ತಿಗಳು ಒಟ್ಟಾರೆಯಾಗಿ 63.8 ಕೋಟಿ ರೂಪಾಯಿಗಳನ್ನು ಕಳೆದುಕೊಂಡಿದ್ದಾರೆ.

# ಆಡಳಿತ ವೈಫಲ್ಯವೇ ಪ್ರಧಾನಿ ಮೋದಿ ಸಾಧನೆ: ಸಚಿವ ಸತೀಶ್ ಜಾರಕಿಹೊಳಿ

ಬಾಗಲಕೋಟೆ: ಈ ಚುನಾವಣೆ ಅಭಿವೃದ್ಧಿ ಮತ್ತು ಸುಳ್ಳಿನ ಕಂತೆಗಳ ಸೃಷ್ಟಿಕರ್ತರ ನಡುವಿನ ಚುನಾವಣೆ ಎಂದು ಸಚಿವ ಲೋಕೋಪಯೋಗಿ ಇಲಾಖೆ ಸಚಿವ ಸತೀಶ್ ಜಾರಕಿಹೊಳಿ ಅವರು ಹೇಳಿದರು.ಬಾಗಲಕೋಟೆ ನಗರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಸಂಯುಕ್ತಾ ಪಾಟೀಲ್ ಪರವಾಗಿ ಹಮ್ಮಿಕೊಂಡಿದ್ದ ಚುನಾವಣಾ ಪ್ರಚಾರ ಸಭೆಯಲ್ಲಿ ಮಾತನಾಡಿದ ಅವರು, ಬಿಜೆಪಿ ಎರಡು ಬಾರಿಯೂ ಸುಳ್ಳನ್ನೇ ಹೇಳಿ, ಮತದಾರರನ್ನು ಮರುಳು ಮಾಡಿ ಅಧಿಕಾರ ಹಿಡಿಯಿತು. ಆದರೆ ಈ ಬಾರಿ ಸುಳ್ಳುಗಳಿಗೆ ಮರುಳಾಗಿ ಮತ್ತೆ ಅವರಿಗೆ ಅವಕಾಶ ನೀಡಬಾರದು ಎಂದು ಮನವಿ ಮಾಡಿದರು.

ಸುಳ್ಳನ್ನು ಸತ್ಯ ಎಂದು ನಂಬಿಸುವ ವ್ಯವಸ್ಥಿತ ತಂಡ ಬಿಜೆಪಿಯಲ್ಲಿದೆ. ಹತ್ತು ವರ್ಷ ನರೇಂದ್ರ ಮೋದಿ ಅವರು ಸುಳ್ಳು ಹೇಳಿ ಕಾಲಹರಣ ಮಾಡಿದರು. ಆಡಳಿತ ವೈಫಲ್ಯವೇ ಅವರ ಸಾಧನೆ. ಆದರೂ ಮೋದಿ ಸರ್ಕಾರ ಏನೋ ಸಾಧನೆ ಮಾಡಿದೆ ಎಂದು ನಂಬಿಸುವಂತೆ ಮಾರ್ಕೆಟಿಂಗ್ ಮಾಡುವ ತಂಡ ಬಿಜೆಪಿಯಲ್ಲಿದೆ. ನಾವು ಅವರನ್ನು ಅಂಧ ಭಕ್ತರು ಎಂದು ಕರೆಯುತ್ತೇವೆ ಎಂದರು.

ಚಕ್ರವರ್ತಿ ಸೂಲಿಬೆಲೆ ಅವರು ಪ್ರಧಾನಿ ಮೋದಿ ಅವರನ್ನು ಗುಣಗಾನ ಮಾಡಿ ಮಾತನಾಡಿದ್ದೇ ಮಾತನಾಡಿದ್ದು. ಆದ-'ರೆ ಅವರು ಹೇಳಿದ ಎಲ್ಲ ಮಾತುಗಳೂ ಸುಳ್ಳೇ. ಸ್ವಿಸ್ ಬ್ಯಾಂಕ್‌ನಲ್ಲಿರುವ ಕಪ್ಪು ಹಣವನ್ನು ಇದುವರೆಗೆ ಏಕೆ ತರಲಿಲ್ಲ ಎಂದು ಅವರನ್ನು ಪ್ರಶ್ನೆ ಮಾಡಬೇಕಿದೆ ಎಂದರು.

ಕಾಂಗ್ರೆಸ್ ಕಾರ್ಯಕರ್ತರೂ ಕೂಡ ಬಿಜೆಪಿ ಮಾರ್ಕೆಟಿಂಗ್ ತಂಡದಂತೆ ಕೆಲಸ ಮಾಡಬೇಕು. ಆದರೆ ಸುಳ್ಳು ಹೇಳುವ ಅಗತ್ಯವಿಲ್ಲ. ನಮ್ಮ ಸರ್ಕಾರ ಮಾಡಿರುವ ಸಾಧನೆಗಳನ್ನು ಮತದಾರರಿಗ ತಲುಪಿಸುವ ಕೆಲಸ ಮಾಡಬೇಕು ಎಂದು ಹೇಳಿದರು.

ಬಿಜೆಪಿ ಸಂಕಲ್ಪ ಪತ್ರ ಬಿಡುಗಡೆ ಮಾಡಿದೆ. ಆದರೆ ಸಂಕಲ್ಪ ಪತ್ರದಲ್ಲಿ ಪ್ರಸ್ತಾಪ ಮಾಡಿರುವ ವಿಷಯಗಳು ಅವರ ಡಿಕ್ಷನರಿಯಲ್ಲೇ ಇಲ್ಲ. ರೈತರು, ಯುವಕರು, ಮಹಿಳೆಯರ ಬಗ್ಗೆ ಮಾತನಾಡುವ ನೈತಿಕತೆಯೇ ಬಿಜೆಪಿಗೆ ಇಲ್ಲ. ಹಲವು ಬೇಡಿಕೆಗಳ ಈಡೇರಿಕೆಗೆ



ರೈತರು ಹೋರಾಟ ಮಾಡಿದರೆ ಸ್ಪಂದಿಸಲಿಲ್ಲ. ಮಣಿಪುರ ಸೇರಿದಂತೆ ದೇಶದ ಹಲವೆಡೆ ಮಹಿಳೆಯರ ಮೇಲೆ ಲೈಂಗಿಕ ದೌರ್ಜನ್ಯ ನಡೆದರೂ ಕ್ರಮ ಕೈಗೊಳ್ಳಲಿಲ್ಲ ಎಂದು ವಾಗ್ದಾಳಿ ಮಾಡಿದರು.

ದೇಶದಲ್ಲಿ ಕಳೆದ 10 ವರ್ಷಗಳಿಂದ ಆಡಳಿತ ನಡೆಸುತ್ತಿರುವ ಪ್ರಧಾನಿ ನರೇಂದ್ರ ಮೋದಿ ಅವರ ವೈಫಲ್ಯಗಳನ್ನು ನಾವು ಜನಸಾಮಾನ್ಯರಿಗೆ ಅರ್ಥ ಮಾಡುವುದುರಲ್ಲಿ ವಿಫಲರಾಗುತ್ತಿದ್ದೇವೆ, ಹೀಗಾಗಿ ಈ ಚುನಾವಣೆಯಲ್ಲಿ ಕಾರ್ಯಕರ್ತರು ಜನರಿಗೆ ಬಿಜೆಪಿಯ ವೈಫಲ್ಯಗಳನ್ನು ಮನವರಿಕೆ ಮಾಡಿ ದೇಶದ ರಕ್ಷಣೆಯ ಜೊತೆಗೆ ಸಂವಿಧಾನದ ಸಂರಕ್ಷಣೆ ಮಾಡಬೇಕು. ಎಲ್ಲ ಭಾರತೀಯರು ಸಮಾನತೆಯಿಂದ ಬದುಕಬೇಕು ಎಂದರೆ ಬಿಜೆಪಿ ತೊಲಗಿಸಿ ಸಮಾನತಾವಾದಿ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ತರಬೇಕು ಎಂದು ತಿಳಿಸಿದರು. ಈಚೆಗೆ ರಾಜ್ಯಕ್ಕೆ ಆಗಮಿಸಿದ ಪ್ರಧಾನಿ ಮೋದಿಯವರು ಮೈಸೂರು, ಹಂಪಿ ಮತ್ತು ಬದಾಮಿಗಳನ್ನು ಅಂತರರಾಷ್ಟ್ರೀಯ ಮಟ್ಟದಲ್ಲಿ ಬೆಳೆಸಲು ನೆರವಾಗುವುದಾಗಿ ಹೇಳಿದ್ದಾರೆ. ಇದುವರೆಗೆ ಇವುಗಳ ಅಭಿವೃದ್ಧಿಗೆ ನಯಾಪೈಸೆ ಕೊಡದವರು ಈಗ ಅವುಗಳ ಅಭಿವೃದ್ಧಿ ಬಗ್ಗೆ ಮಾತನಾಡುತ್ತಿದ್ದಾರೆ ಎಂದು ಟೀಕಿಸಿದರು.

ಕಾಂಗ್ರೆಸ್ ಅಭ್ಯರ್ಥಿ ಸಂಯುಕ್ತ ಪಾಟೀಲ್ ಮಾತನಾಡಿ, ಮಾತು ಕೃತಿಗೆ ಸಾಮ್ಯ ಇಲ್ಲದ ಕೇಂದ್ರ ಸರ್ಕಾರ ಎಂದು ಟೀಕೆ ಮಾಡಿದರು. ಸಂಕಲ್ಪ ಪತ್ರ ಬಿಡುಗಡೆ ಮಾಡಿ ರೈತರ ಬಗ್ಗೆ ಕಳಕಳಿಯ ಮಾತುಗಳನ್ನು ಆಡಿದ್ದಾರೆ. ಆದರೆ ರಾಜ್ಯ ಸತತ ಎರಡು ಬರಗಾಲ ಎದುರಿಸಿದೆ. ಬರ ಪರಿಹಾರ ನೀಡಲು ನೆರವು ಬಿಡುಗಡೆ ಮಾಡಿ ಎಂದರೆ ಗ್ಯಾರಂಟಿ ಯೋಜನೆಗೆ ಹಣ ಖರ್ಚು ಮಾಡಿ ಬೊಕ್ಕಸ ಖಾಲಿ ಮಾಡಿಕೊಂಡು ನಮ್ಮ ಬಳಿ ಬಂದಿದ್ದೀರಾ? ಎಂದು ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದರು. ಇಂಥ ಕೇಂದ್ರ ಸರ್ಕಾರ ನಮಗೆ ಬೇಕಾ? ಎಂದು ಪ್ರಶ್ನಿಸಿದರು.

ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಸ್.ಜಿ. ನಂ-ಜಯ್ಯನಮಠ ಮಾತನಾಡಿ, ಮೋದಿ ಪ್ರಧಾನಿಯಾದರೆ ದೇಶ ಬಿಟ್ಟು ಹೋಗುತ್ತೇನೆ ಎಂದು ಹೇಳಿದ್ದ ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ ಅವರು ಇಂದು ಮೋದಿ ಪಕ್ಕ ಕುಳಿತು ಮತ್ತೊಮ್ಮೆ ಮೋದಿ ಪ್ರಧಾನಿಯಾಗಬೇಕು ಎಂದು ಹೇಳುತ್ತಿದ್ದಾರೆ. ಇದು ಜೆಡಿಎಸ್ಗೆ ಒದಗಿಬಂದಿರುವ ದುಸ್ಥಿತಿ. ಆದ್ದರಿಂದ ಜನತೆ ಈ ಚುನಾವಣೆಯಲ್ಲಿ ಬಿಜೆಪಿ, ಜೆಡಿಎಸ್ ಗೆ ತಕ್ಕ ಪಾಠ ಕಲಿಸಬೇಕೆಂದು ಮನವಿ ಮಾಡಿದರು.

ಶಾಸಕರಾದ ಜೆ.ಟಿ. ಪಾಟೀಲ, ಎಚ್.ವೈ. ಮೇಟಿ, ಕೆಪಿಸಿಸಿ ಉಪಾಧ್ಯಕ್ಷರಾದ ಅಜಯಕುಮಾರ ಸರನಾಯಕ, ಎಂ.ಬಿ. ಸೌದಾಗಾರ್ ಮಾತನಾಡಿದರು. ಜಿಲ್ಲಾ ಮಹಿಳಾ ಕಾಂಗ್ರೆಸ್ ಅಧ್ಯಕ್ಷ ರಕ್ಷಿತಾ ಈಟಿ, ಜಿಪಂ ಮಾಜಿ ಅಧ್ಯಕ್ಷೆ ಮಾಯಕ್ಕ ಮೇಟಿ ಮತ್ತಿತರರು ಇದ್ದರು.

## ಬೆಳಗಾವಿಯ ಬಿಜೆಪಿ ಬಂಡಾಯ: ಶಮನ ಮಾಡಿದ ಜನಾರ್ಧನ ರೆಡ್ಡಿ



ಬೆಳಗಾವಿ: ಬೆಳಗಾವಿಯಲ್ಲಿ ಬಿಜೆಪಿಯಿಂದ ಜಗದೀಶ ಶೆಟ್ಟರರ ಸ್ಪರ್ಧೆಯನ್ನು ವಿರೋಧಿಸಿ ನಡೆಯುತ್ತಿದ್ದ ಬಂಡಾಯವನ್ನು ತಮ್ಮ ಸಂಘಟನಾ ಚಾತುರ್ಯದಿಂದ ಸರಿಮಾಡಿ, ಬೆಳಗಾವಿ ಬಿಜೆಪಿಯ ಯುವ ನಾಯಕ, ಅಪ್ಪಟ ಹಿಂದುತ್ವವಾದಿ ಮಹಾಂತೇಶ ವಕ್ಕುಂದರವರನ್ನು ಪಕ್ಷಕ್ಕೆ ಮರಳಿ ತರುವ ಹಾಗೂ ಮೋದಿಯವ-ರಿಗಾಗಿ ಮತ್ತೊಮ್ಮೆ ಬೆಳಗಾವಿಯಲ್ಲಿ ಎಲ್ಲರೂ ಸೇರಿ ದುಡಿಯುವಂತೆ ಸಂಘಟನೆಯನ್ನು ಬಲಗೊಳಿಸುವ ಕೆಲಸ ಮಾಡಿದವರಲ್ಲಿ ಪ್ರಮುಖ ಪಾತ್ರ ವಹಿಸಿದವರು ಮಾನ್ಯ ಶ್ರೀ ಜನಾರ್ಧನ ರೆಡ್ಡಿಯವರು.

ಒಬ್ಬ ಹಿರಿಯ ಅನುಭವಿ ನಾಯಕ ಹೇಗೆ ಎಲ್ಲರನ್ನೂ ಒಗ್ಗೂಡಿಸಿ ಸಂಘಟನೆಗೆ ಶಕ್ತಿ ತುಂಬಬಲ್ಲರು ಎಂಬುದಕ್ಕೆ ಇದಕ್ಕಿಂತ ಉತ್ತಮ ಉದಾಹರಣೆ ನೀಡಿದರು.

## ಲೋಕಸಭಾ ಚುನಾವಣೆ-2024

### ಮತಗಟ್ಟೆಗಳನ್ನು ಪರಿಶೀಲಿಸಿದ ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಚುನಾವಣಾಧಿಕಾರಿ ರಾಹುಲ ಶಿಂಧೆ




ಬೆಳಗಾವಿ: ಲೋಕಸಭಾ ಸಾರ್ವತ್ರಿಕ ಚುನಾವಣೆಗಳಿಗೆ ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ಪ್ರಾರಂಭಗೊಂಡಿರುತ್ತವೆ. ಮೇ7 ರಂದು ಮತದಾನ ಜರುಗಲಿದ್ದು ಈ ಹಿನ್ನಲೆಯಲ್ಲಿ ಹುಕ್ಕೇರಿ ವಿಧಾನಸಭಾ ಮತಕ್ಷೇತ್ರದ ವ್ಯಾಪ್ತಿಯ ಸೂಕ್ಷ್ಮ, ಅತೀ ಸೂಕ್ಷ್ಮ, ಸಖಿ ಹಾಗೂ ಮಾದರಿ ಮತಗಟ್ಟೆಗಳಿಗೆ ಗುರುವಾರ (ಎ.17) ರಂದು ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಚುನಾವಣಾಧಿಕಾರಿಗಳು ಹಾಗೂ ಜಿ.ಪಂ. ಸಿ.ಇ.ಓ ರಾಹುಲ ಶಿಂಧೆ ಅವರು ಭೇಟಿ ನೀಡಿ ಪರಿಶೀಲಿಸಿದರು.

ಸೂಕ್ಷ್ಮ ಹಾಗೂ ಅತೀ ಸೂಕ್ಷ್ಮ ಮತಗಟ್ಟೆಗಳ ವ್ಯಾಪ್ತಿಯಲ್ಲಿನ ಮತದಾರರಲ್ಲಿ ಆತ್ಮ ವಿಶ್ವಾಸ ಹೆಚ್ಚಿಸಲು ಪೊಲೀಸ್ ಪಥ ಸಂಚಲನ ಹಾಗೂ ಸ್ವೀಪ ಚಟುವಟಿಕೆಗಳನ್ನು ಪರಿಣಾಮಕಾರಿಯಾಗಿ ಆಯೋಜಿಸುವದರ ಮೂಲಕ ಮತದಾನ ಪ್ರಮಾಣ ಹೆಚ್ಚಿಸಲು ಕ್ರಮಕೈಗೊಳ್ಳುವಂತೆ ಈ ಸಂದರ್ಭದಲ್ಲಿ ಸೂಚಿಸಿದರು.

ಮತದಾನದ ದಿನದಂದು ಮತಗಟ್ಟೆಗೆ ಆಗಮಿಸುವ ಮತದಾರರಿಗೆ ನೆರಳು, ಕುಡಿಯುವ ನೀರು, ಕಾಯುವಿಕೆ ಸ್ಥಳಗಳನ್ನು ಪರಿಶೀಲಿಸಿ, ಮತಗಟ್ಟೆಗಳಿಗೆ ಆಗಮಿಸುವ ವಿಕಲಚೇತನರಿಗೆ ಗಾಲಿ ಕುರ್ಚಿಗಳ ವ್ಯವಸ್ಥೆಗೆ ಕ್ರಮಕೈಗೊಳ್ಳಬೇಕು.

ಒಟ್ಟಾರೆಯಾಗಿ ಮತದಾನದ ದಿನದಂದು ಮತಗಟ್ಟೆಗಳಿಗೆ ಆಗಮಿಸುವ ಮತದಾರರಿಗೆ ಯಾವುದೇ ರೀತಿಯ ಅನಾನುಕೂಲತೆಗಳು ಆಗದಂತೆ ನಿಗಾವಹಿಸಲು ಚಿಕ್ಕೋಡಿ ಲೋಕಸಭಾ ಚುನಾವಣಾಧಿಕಾರಿ ರಾಹುಲ ಶಿಂಧೆ ಅವರು ಅಧಿಕಾ-ರಿಗಳಿಗೆ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಹುಕ್ಕೇರಿ ವಿಧಾನಸಭಾ ಮತಕ್ಷೇತ್ರದ ಸಹಾಯಕ ಚುನಾವಣಾಧಿಕಾರಿಗಳು ಉಪಸ್ಥಿತರಿದ್ದರು.

# ಕೇಂದ್ರದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಮಹಿಳೆಯರ ಖಾತೆಗೆ ವರ್ಷಕ್ಕೆ 1.24 ಲಕ್ಷ ರೂ. ಜಮೆ: ರಾಹುಲ್ ಗಾಂಧಿ ಘೋಷಣೆ

ಮಂಡ್ಯ: ಪ್ರಸಕ್ತ ಲೋಕಸಭಾ ಚುನಾವಣೆಯಲ್ಲಿ ದೇಶದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಪ್ರತಿ ಕುಟುಂಬದ ಯಜಮಾನಿಯರಿಗೆ ಮಹಾಲಕ್ಷ್ಮಿ ಯೋಜನೆಯಡಿ ವರ್ಷಕ್ಕೆ 1 ಲಕ್ಷ ರೂಪಾಯಿಯನ್ನು ಕೊಡುತ್ತದೆ. ಇದರ ಹೊರತಾಗಿ ಕಾಂಗ್ರೆಸ್ ಸರ್ಕಾರ ನೀಡುತ್ತಿರುವ 24 ಸಾವಿರ ರೂಪಾಯಿ ಸಹ ಮುಂದುವರಿಯಲಿದೆ ಎಂದು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಘೋಷಣೆ ಮಾಡಿದರು.

ಮಂಡ್ಯದಲ್ಲಿ ಬುಧವಾರ ಏರ್ಪಡಿಸಲಾಗಿರುವ ಕಾಂಗ್ರೆಸ್ ಪ್ರಜಾಧ್ವನಿ- 2 ಸಮಾವೇಶದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಸ್ಟಾರ್ ಚಂದ್ರು ಪರ ಪ್ರಚಾರ ಮಾಡಿದ ರಾಹುಲ್ ಗಾಂಧಿ, ಮಹಾಲಕ್ಷ್ಮಿ ಯೋಜನೆಯಡಿ ಪ್ರತಿ ಮನೆಯ ಯಜಮಾನಿಗೆ ಮಾಸಿಕವಾಗಿ 8.5 ಸಾವಿರ ರೂಪಾಯಿ ಪ್ಲಸ್ ರಾಜ್ಯ ಸರ್ಕಾರದ 2 ಸಾವಿರ ರೂಪಾಯಿಯಂತೆ ಒಟ್ಟು 10,500 ರೂಪಾಯಿಯನ್ನು ಜಮೆ ಮಾಡಲಾಗುವುದು. ಪುರುಷರು 8 ಗಂಟೆ ಕೆಲಸ ಮಾಡಿದರೆ ಮಹಿಳೆಯರು 16 ಗಂಟೆ ಕೆಲಸ ಮಾಡುತ್ತಾರೆ. ಈ ಕಾರಣಕ್ಕೆ ಇಂಡಿಯಾ ಒಕ್ಕೂಟ ಅಧಿಕಾರಕ್ಕೆ ಬಂದರೆ ವರ್ಷಕ್ಕೆ 1 ಲಕ್ಷ ರೂ. ಕೊಡುವುದಾಗಿ ತೀರ್ಮಾನ ಮಾಡಿದ್ದೇವೆ ಎಂದು ಹೇಳಿದರು.

ರೈತರಿಗೆ ಸಿಗಲಿದೆ ನ್ಯಾಯ: ಲೋಕಸಭೆ ಚುನಾವಣೆಗೆ ಎಐಸಿಸಿ ಗ್ಯಾರಂಟಿ ಯೋಜನೆಗಳನ್ನು ಘೋಷಿಸಿದ್ದೇವೆ. ಕರ್ನಾಟಕ, ತೆಲಂಗಾಣ ಮಾತ್ರವಲ್ಲ ದೇಶದಲ್ಲಿ ರೈತರು ಕಷ್ಟದಲ್ಲಿ ಇದ್ದಾರೆ. ರೈತರು ಯಾರ ಮುಂದೆಯೂ ತಮ್ಮ ಕೈಚಾಚುವುದಿಲ್ಲ. ತಮಗೆ ಅದು ಕೊಡಿ, ಇದು ಕೊಡಿ ಎಂದು ಬೇಡುವವರಲ್ಲ. ತಮಗೆ ನ್ಯಾಯಯುತವಾಗಿ ಏನೋ ಬೇಕೋ ಅದನ್ನು ಕೊಡಿ ಎಂದು ಮಾತ್ರ ಅವರು ಕೇಳುತ್ತಿದ್ದಾರೆ. ಆ ಕೆಲಸವನ್ನು ನಮ್ಮ ಸರ್ಕಾರ ಅಧಿಕಾರಕ್ಕೆ ಬಂದರೆ ಮಾಡಲಿದೆ ಎಂದು ರಾಹುಲ್ ಗಾಂಧಿ ಹೇಳಿದರು.

ವಿಮಾ ಯೋಜನೆ ಹಣವನ್ನು ಕೊಡಿಸುತ್ತೇವೆ; ಭಾರತ್ ಜೋಡೋ ಯಾತ್ರೆ ಮೂಲಕ 4000 ಕಿ.ಮೀ. ಪಾದಯಾತ್ರೆ ಮಾಡಿದ್ದೇನೆ. ಲಕ್ಷಾಂತರ ಜನರನ್ನು ಭೇಟಿ ಮಾಡಿದ್ದೇನೆ. ಅವರ ಕಷ್ಟಗಳನ್ನು ಆಲಿಸಿದ್ದೇನೆ. ದೇಶದ



ತುಂಬೆಲ್ಲ ರೈತರು 2-3 ಮನವಿ ಮಾಡಿದ್ದಾರೆ. ಬೇರೆ ವಸ್ತುಗಳಿಗೆ ಸರಿಯಾದ ಬೆಲೆ ಸಿಗುತ್ತದೆ. ಆದರೆ, ನಾವು ಬೆಳೆಯುವ ಭತ್ತ, ಕಬ್ಬು ಸೇರಿದಂತೆ ಬೆಳೆಗಳಿಗೆ ಸರಿಯಾಗಿ ಬೆಲೆ ಸಿಗುತ್ತಿಲ್ಲ. ರಾಷ್ಟ್ರ ವ್ಯಾಪ್ತಿಯಲ್ಲಿ 16 ಲಕ್ಷ ಕೋಟಿ ರೂಪಾಯಿ ಶ್ರೀಮಂತರ ಸಾಲ ಮನ್ನಾ ಆಗುತ್ತದೆ. ರೈತರ ಸಾಲ ಯಾಕೆ ಮನ್ನಾ ಆಗುವುದಿಲ್ಲ? ಪ್ರಧಾನ ಮಂತ್ರಿ ವಿಮಾ ಯೋಜನೆಯಲ್ಲಿ ರೈತರು ಹಣ ಕಟ್ಟಿದರೂ ಕಂಪನಿ ಯಾಕೆ ನಮಗೆ ಪ್ರವಾಹ, ಬರಕ್ಕೆ ಪರಿಹಾರ ಕೊಡಲ್ಲ? ಎಂದು ಪ್ರಶ್ನೆ ಮಾಡಿದ್ದಾರೆ. ನಾವು ಅಧಿಕಾರಕ್ಕೆ ಬಂದರೆ ನ್ಯಾಯ ಬದ್ಧವಾದ ಎಂಎಸ್‌ಪಿ ಜಾರಿ ಮಾಡುತ್ತೇವೆ. ಕಾಂಗ್ರೆಸ್ ಪಕ್ಷ ಆಡಳಿತಕ್ಕೆ ಬಂದರೆ ರೈತರ ಎಲ್ಲ ಬೇಡಿಕೆಗಳನ್ನು ಪೂರೈಸುತ್ತೇವೆ. ನರೇಂದ್ರ ಮೋದಿ ತಮ್ಮ ಆಪ್ತರ ಸಾಲ ಮನ್ನಾ ಮಾಡಿದರು. ಅದೇ ರೀತಿ ನಾವು ವಿಮಾ ಯೋಜನೆ ಹಣವನ್ನು ಕೊಡಿಸುತ್ತೇವೆ ಎಂದು ರಾಹುಲ್ ಗಾಂಧಿ ಭರವಸೆ ನೀಡಿದರು.

ಗುತ್ತಿಗೆ, ಅರೆ ಕಾಲಿಕ ಉದ್ಯೋಗ ರದ್ದು; ಸರ್ಕಾರಿ ಉದ್ಯೋಗದ ಖಾತ್ರಿ: ಲಕ್ಷಾಂತರ ಯುವ ಜನತೆ ಗುತ್ತಿಗೆ ಆದ-ಾರದ ಮೇಲೆ ಕೆಲಸ ಮಾಡುತ್ತಿದ್ದಾರೆ. ಅವರು ಅನಿಶ್ಚಿತತೆಯಿಂದ ಕೆಲಸ ಮಾಡುತ್ತಿರುತ್ತಾರೆ. ಹೀಗಾಗಿ ಸರ್ಕಾರಿ ಕಚೇರಿಗಳಲ್ಲಿ ಅರೆ ಸರ್ಕಾರಿ, ಗುತ್ತಿಗೆ ಆಧಾರದ ಮೇಲೆ ಕೆಲಸ ಮಾಡುವ ವ್ಯವಸ್ಥೆಯನ್ನು ರದ್ದು ಮಾಡಿ ಮುಂದಿನ ನೇಮಕಾತಿಗಳಲ್ಲಿ ಸರ್ಕಾರಿ ಉದ್ಯೋಗದ ಖಾತ್ರಿಯನ್ನು ನೀಡಲಿದ್ದೇವೆ ಎಂದು ರಾಹುಲ್ ಗಾಂಧಿ ಭರವಸೆ ನೀಡಿದರು.

ರೈತರಿಗೆ, ಮಹಿಳೆಯ-ರಿಗೆ, ನಿರುದ್ಯೋಗಿಗಳಿಗೆ ಹೊಸ ಯೋಜನೆಗಳನ್ನು ತರುತ್ತಿದ್ದೇವೆ. ಪದವಿ ಮುಗಿಸಿದ ಯುವಕರಿಗೆ ಉದ್ಯೋಗ ನಿಶ್ಚಿತ. ಉದ್ಯೋಗ ಭದ್ರತೆಯನ್ನು ನಾವು ನೀಡುತ್ತೇವೆ ಎಂದು ರಾಹುಲ್ ಗಾಂಧಿ ಹೇಳಿದರು.

ಪ್ರಧಾನಿ ನರೇಂದ್ರ ಮೋದಿ ಅವರು ಎರಡು ದಿನಗಳ ಹಿಂದೆ ಸಂದರ್ಶನವೊಂದನ್ನು ನೀಡಿದ್ದರು. ಅದನ್ನು ನೀವೆಲ್ಲರೂ ನೋಡಿರುತ್ತೀರಿ. ಅದರಲ್ಲಿ ಎಲೆಕ್ಟೋರಲ್ ಬಾಂಡ್ ಬಗ್ಗೆ ಮಾತನಾಡಿದ್ದಾರೆ. ಆ ಭಾಗವನ್ನು ಸರಿಯಾಗಿ ಗಮನಿಸಿ. ಚುನಾವಣಾ ಬಾಂಡ್ ಬಗ್ಗೆ ಮಾತನಾಡುವಾಗ ಮೋದಿ ಕೈ ನಡುಗುತಿತ್ತು. ಎಲೆಕ್ಷನ್ ಬಾಂಡ್‌ನಲ್ಲಿ ದೊಡ್ಡ ಹಗರಣ ನಡೆದಿದೆ. ಎಲೆಕ್ಷನ್ ಬಾಂಡ್ ಮೂಲಕ ಯಾ-ರಿಗೆ ಹಣ ಕೊಡಲಾಗಿದೆ? ಯಾರಿಂದ ಕೊಡಲಿದೆ ಎಲ್ಲವೂ ನಿಗೂಢವಾಗಿದೆ. ಎಲೆಕ್ಷನ್ ಬಾಂಡ್ ಬಗ್ಗೆ ಬಹಿರಂಗವಾಗಿ ತಿಳಿಸಲಿ. ಕೇಂದ್ರ ಸರ್ಕಾರ ಸಿಬಿಐ, ಇಡಿ, ತೆರಿಗೆ ಇಲಾಖೆಗಳನ್ನು ದುರ್ಬಳಕೆ ಮಾಡಿಕೊಳ್ಳುತ್ತಿದೆ. ವಿಶ್ವದಲ್ಲೇ ಅತ್ಯಂತ ಭ್ರಷ್ಟಾಚಾರ ಅಂದರೆ ಅದುವೇ ಎಲೆಕ್ಷನ್ ಬಾಂಡ್ ಆಗಿದೆ. ಕೈಗಾರಿಕಾ ಸಂಸ್ಥೆಗಳಿಂದ ಹೆದರಿಸಿ, ಬೆದರಿಸಿ ಹಣ ಸಂಗ್ರಹ ಮಾಡಲಾಗಿದೆ. ಈ ವಿಚಾರವನ್ನು ಮಾಧ್ಯಮಗಳು ನೇರವಾಗಿ ಜನ-ರಿಗೆ ಹೇಳಲಾಗುತ್ತಿಲ್ಲ ಎಂದು ರಾಹುಲ್ ಗಾಂಧಿ ವಾಗ್ದಾಳಿ ನಡೆಸಿದರು.



## ನಮ್ಮದು ಧರ್ಮ ಯುದ್ಧ, ಧರ್ಮದ ಹಾದಿಯಲ್ಲೇ ಸಾಗುತ್ತೇವೆ: ದಿಂಗಾಲೇಶ್ವರ ಶ್ರೀ

ಹುಬ್ಬಳ್ಳಿ: ನಮ್ಮ ಸ್ಪರ್ಧೆಯು ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪನವರ ದೃಷ್ಟಿಯಲ್ಲಿ ದುಸ್ಸಾಹಸ ಆಗಿರಬಹುದು, ಆದರೆ ಧಾರವಾಡ ಮತದಾರರ ದೃಷ್ಟಿಯಲ್ಲಿ ಇದು ಸಾಹಸವಾಗಿದೆ. ಅವರು ನನ್ನೊಂದಿಗೆ ಮಾತನಾಡಿದ್ದಾರೆ, ಆದರೆ ಚುನಾವಣಾ ಕಣದಿಂದ ಹಿಂದೆ ಸರಿಯುವ ಪ್ರಶ್ನೆಯೇ ಇಲ್ಲ ಎಂಬುದಾಗಿ ಅವರಿಗೆ ತಿಳಿಸಿರುವೆ ಎಂದು ಫಕೀರ ದಿಂಗಾಲೇಶ್ವರ ಶ್ರೀಗಳು ತಿಳಿಸಿದರು.

ಬುಧವಾರ ಇಲ್ಲಿನ ಬನಶಂಕರಿ ಬಡಾವಣೆಯಲ್ಲಿ ಮುಸ್ಲಿಂ ಧರ್ಮ ಗುರುಗಳೊಂದಿಗೆ ಸಭೆ ನಡೆಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಾನು ಸ್ಪರ್ಧೆ ಮಾಡುತ್ತಿರುವುದು ಧಾರವಾಡದ ಮತದಾರರ ಒತ್ತಾಯದ ಮೇರೆಗೆ ವಿನಹ ಇದು ನನ್ನ ವಯಕ್ತಿಕ ಸ್ಪರ್ಧೆ ಅಲ್ಲ. ಹೀಗಾಗಿ ಇದು ದುಃಸ್ಸಾಹಸ ಅಲ್ಲ ಎಂದು ಯಡಿಯೂರಪ್ಪ ಅವರಿಗೆ ತಿರುಗೇಟು ನೀಡಿದರು.

ಈ ಹಿಂದೆ ತಿಳಿಸಿದಂತೆ ಏಪ್ರಿಲ್ 18ರಂದು ನಾಮಪತ್ರ ಸಲ್ಲಿಸುತ್ತಿದ್ದೇನೆ. ನಮ್ಮದು ಧರ್ಮ ಯುದ್ಧ ಧರ್ಮದ ಹಾದಿಯಲ್ಲೇ ಸಾಗುತ್ತೇವೆ. ನಾಮಪತ್ರ ಸಲ್ಲಿಕೆ ವೇಳೆ ಒತ್ತಾಯ, ಒತ್ತಡ, ಆಮೀಷವೊಡ್ಡಿ ಯಾರನ್ನು ಕರೆದುಕೊಂಡು ಬರುವುದಿಲ್ಲ. ಯಾರೂ ಕೂಡ ತಮ್ಮ ಕೆಲಸವನ್ನು ಬಿಟ್ಟು ಖರ್ಚು ಮಾಡಿಕೊಂಡು ಬರಬಾರದು. ಶಕ್ತಿವಂತರು ಮಾತ್ರ ಬನ್ನಿ ಎಂದು ಕರೆ ಕೊಡುತ್ತೇನೆ ಎಂದು ದಿಂಗಾಲೇಶ್ವರ ಸ್ವಾಮೀಜಿ ತಿಳಿಸಿದರು.

## ಎನ್.ಕೆ. ಎಜುಕೇಶನ್ ಫೌಂಡೇಶನ್ ವತಿಯಿಂದ ಸೇತುಬಂಧ ಕಾರ್ಯಾಗಾರಕ್ಕೆ ಚಾಲನೆ

ಬೆಳಗಾವಿ: ಆಂಜನೇಯನಗರದ ಎನ್.ಕೆ. ಎಜುಕೇಶನ್ ಫೌಂಡೇಶನ್ ವತಿಯಿಂದ ಎಸ್ ಎಸ್ ಎಲ್ ಸಿ ನಂತರದ ವಿದ್ಯಾರ್ಥಿಗಳಿಗೆ ಉಚಿತ ಸೇತುಬಂಧ ಕಾರ್ಯಕ್ರಮಕ್ಕೆ ಸೋಮವಾರ ಚಾಲನೆ ನೀಡಲಾಯಿತು.

ಈ ವೇಳೆ ಸೇತುಬಂಧ ಕಾರ್ಯಕ್ರಮ ಕುರಿತು ಪ್ರೊ. ಮುಕುಂದ ದೇಶಪಾಂಡೆ ಮಾತನಾಡಿ, ಎಸ್ ಎಸ್ ಎಲ್ ಸಿ ನಂತರದ ವಿದ್ಯಾರ್ಥಿ ಜೀವನವು ಮಹತ್ವದ ಘಟ್ಟವಾಗಿದ್ದು, ಪಿಯು ಹಂತದಲ್ಲಿ ವಿದ್ಯಾರ್ಥಿಗಳಿಗೆ ಪದವಿ ಪೂರ್ವ ಶೈಕ್ಷಣಿಕ ವಿವಿಧ ಹಂತಗಳ ಕುರಿತು ಮಾಹಿತಿ ನೀಡಿದರು. ಪಿಯುಸಿ ಹಂತದಲ್ಲಿಯೇ ಜೆಇಇ,




ನೀಟ್ ಸೇರಿದಂತೆ ವಿವಿಧ ಸಿಇಟಿ ಪರೀಕ್ಷೆಗಳ ಕುರಿತು ಈ ಕಾರ್ಯಗಾರದಲ್ಲಿ ಮಾಹಿತಿ ನೀಡಲಾಯಿತು. ಪ್ರಾಚಾರ್ಯ ಎಂ. ಎಲ್ ಪಾಟೀಲ ಕಾಲೇಜಿನ ಕುರಿತು ವಿವರಿಸಿದರು.

ಪ್ರಸ್ತಾವಿಕವಾಗಿ ಪ್ರೊ. ಬಿ. ಬಿ ಮಠಪತಿ ಮಾತನಾಡಿದರು. ಕಾರ್ಯಕ್ರಮದ ಆರಂಭದಲ್ಲಿ ಸರಸ್ವತಿ ಪೂಜೆಯೊಂದಿಗೆ ಆರಂಭಿಸಲಾಯಿತು.

ಸವಿತಾ ಧಾಮನೇಕರ ಪ್ರಾರ್ಥಿಸಿದರು. ಡಾ.ರವೀಂದ್ರ ಸತ್ತಿಗೇರಿ ಸ್ವಾಗತಿಸಿದರು.ವಿನಾಯಕ ನಿಕ್ಕಂ ವಂದನಾರ್ಪಣೆ ಮಾಡಿದರು.

ಈ ಸಂದರ್ಭದಲ್ಲಿಫೌಂಡೇಶನ ಅಧ್ಯಕ್ಷ ಎನ್.ಕೆ.ನರೇಂದ್ರ ಕುಮಾರ, ಸಿ.ಇ.ಓ ವೈಭವ ಉಮರ್ಜಿ, ವಿದ್ಯಾರ್ಥಿಗಳು ಶಿಕ್ಷಕರು ಸಿಬ್ಬಂದಿ ವರ್ಗದವರು ಭಾಗವಹಿಸಿದ್ದರು.

## ರಾಜ್ಯದಲ್ಲಿ ಕಾಂಗ್ರೆಸ್ 20 ಸ್ಥಾನ ಗೆಲ್ಲುವುದು ಖಚಿತ: ಡಾ. ಆರತಿ ಕೃಷ್ಣ

ಉಡುಪಿ: ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ದೇಶದ ಜನತೆ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಲಿದ್ದಾರೆ. ಜನರ ಬದುಕನ್ನು ಕಟ್ಟುವುದರೊಂದಿಗೆ ಶಾಂತಿ, ಸಾಮರಸ್ಯದಿಂದ ಸುಭದ್ರ ಆಡಳಿತ ನೀಡಿದ ಕಾಂಗ್ರೆಸ್‌ನ ಕೈ ಹಿಡಿಯಲಿದ್ದಾರೆ.

ಕೇಂದ್ರದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಲ್ಲಿ ಅನಿವಾಸಿ ಭಾರತೀಯರ ಕುಂದುಕೊರತೆಗಳ ಪರಿಹಾರಕ್ಕಾಗಿ ಪ್ರತ್ಯೇಕ ಸಚಿವಾಲಯ ರಚಿಸಲಾಗುವುದು. ಹಾಗೆಯೇ ರಾಜ್ಯದಲ್ಲಿ



ಜನತೆಗೆ ನೀಡಿದ ಜನಪರ ಯೋಜನೆಗಳಿಂದ ಮತದಾರರಲ್ಲಿ ಕೃತಜ್ಞತಾ ಭಾವ ಇದ್ದು ಅವರ ಆಶೀರ್ವಾದದಿಂದ ರಾಜ್ಯದಲ್ಲಿ 20 ಸ್ಥಾನ ಗೆಲ್ಲುವುದು ಖಚಿತ.

ಕಾಂಗ್ರೆಸ್ ಪಕ್ಷದ ಬಗ್ಗೆ ಇರುವ ಮತದಾರರ ಒಲವನ್ನು ಮತವಾಗಿ ಪರಿವರ್ತಿಸಲು ಪಕ್ಷದ ಚುನಾವಣಾ ಉಸ್ತುವಾರಿಗಳು ಬದ್ಧತೆಯಿಂದ ಶ್ರಮಿಸಬೇಕೆಂದು ಅನಿವಾಸಿ ಭಾರತೀಯ ಸಮಿತಿಯ ಉಪಾಧ್ಯಕ್ಷರಾದ ಡಾ. ಆರತಿ ಕೃಷ್ಣ ಹೇಳಿದರು.

ಅನ್ನ,ಆಶ್ರಯ,ಅಕ್ಷರ, ಆರೋಗ್ಯ, ಅಭಿವೃದ್ಧಿಯ ವಿಚಾರಗಳಿಗೆ ಹೆಚ್ಚಿನ ಒತ್ತುಕೊಟ್ಟು ಭವ್ಯ ಭಾರತವನ್ನು ವಿಶ್ವದ ಬಲಿಷ್ಠ ರಾಷ್ಟ್ರಗಳ ಸಾಲಿನಲ್ಲಿ ನಿಲ್ಲುವಂತೆ ಮಾಡಿದ ಕೀರ್ತಿ ನಮ್ಮ ಕಾಂಗ್ರೆಸ್ ಪಕ್ಷಕ್ಕೆ ಸಲ್ಲಬೇಕೆಂದರು.

ಅವರು ಬ್ರಹ್ಮಗಿರಿಯ ಕಾಂಗ್ರೆಸ್ ಭವನದಲ್ಲಿ ಪಕ್ಷದ ಚುನಾವಣಾ ಉಸ್ತುವಾ-ರಿಗಳು ,ನಗರಸಭಾ ಸದಸ್ಯರು ಹಾಗೂ ನಗರಸಭೆಗೆ ಸ್ಪರ್ಧಿಸಿದ ಪಕ್ಷದ ಮುಂದಾಳುಗಳಿಗಾಗಿ ಉಡುಪಿ ಬ್ಲಾಕ್ ಕಾಂಗ್ರೆಸ್ ಸಮಿತಿ ಏರ್ಪಡಿಸಿದ್ದ ಸಭೆಯಲ್ಲಿ ಮಾತನಾಡಿದರು. ಉಡುಪಿ ಬ್ಲಾಕ್ ಕಾಂಗ್ರೆಸ್ ಸಮಿತಿ ಅಧ್ಯಕ್ಷ ರಮೇಶ್ ಕಾಂಚನ್ ಅಧ್ಯಕ್ಷತೆ ವಹಿಸಿದ್ದರು.

# ಡಾ. ಎಸ್. ಡಿ. ಇಂಚಲ ರವರ ನಡೆ-ನುಡಿ ಈಗಿನ ಪೀಳಿಗೆಗೆ ಅನುಕರಣನೀಯ: ಡಾ. ಗುರುದೇವಿ ಹುಲ್ಲೇಪ್ಪನವರಮಠ

ಬೆಳಗಾವಿ: ಡಾ. ಎಸ್. ಡಿ. ಇಂಚಲರವರ ನಾಡು ನುಡಿ ಕುರಿತಾದ ಅಪಾರ ಪ್ರೇಮ, ಅವರ ನಡೆ,ನುಡಿ,ಆಚಾರ ಅವರ ಶಿಸ್ತಿನ ಜೀವನ ಈಗಿನ ಪೀಳಿಗೆಗೆ ಅನುಕರನೀಯವಾಗಿದೆ ಎಂದು ಹಿರಿಯ ಸಾಹಿತಿಗಳು ಮತ್ತು ನಿವೃತ್ತ ಪ್ರಾಧ್ಯಾಪಕರು ಆದ ಡಾ. ಗುರುದೇವಿ ಹುಲ್ಲೆಪ್ಪನವರಮಠ ಅವರು ಹೇಳಿದರು.

ಇಲ್ಲಿನ ನೆಹರು ನಗರದ ಕನ್ನಡ ಭವನದಲ್ಲಿ ಮಂಗಳವಾರ ಬೆಳಗಾವಿ ಜಿಲ್ಲಾ ಕಸಾಪ ವತಿಯಿಂದ ಹಮ್ಮಿಕೊಳ್ಳಲಾದ ಬೆಳಗಾವಿ ಜಿಲ್ಲೆಯ ಶತಮಾನ ಕಂಡ ಸಾಹಿತಿಗಳು ಮಾಲಿಕೆಯ ತಿಂಗಳ ಕಾರ್ಯಕ್ರಮದಲ್ಲಿ 'ಡಾ. ಎಸ್ ಡಿ ಇಂಚಲ ರವರ ಬದುಕು ಬರಹ' ಕುರಿತು ವಿಶೇಷ ಉಪನ್ಯಾಸ ನೀಡಿ ಅವರು ಮಾತನಾಡಿದರು.

ಇಂಚಲ ರವರು ಪ್ರಭಾವಿ ವಾಗ್ಮಿಗಳು ಚತುರ ಸಂಘಟನಾಕಾರರು ಮತ್ತು ಬಹುಮುಖ ವ್ಯಕ್ತಿತ್ವಯುಳ್ಳವರಾಗಿದ್ದರು. ಶಿಕ್ಷಕ ವೃತ್ತಿಯನ್ನು ಶಿಸ್ತುಬದ್ಧವಾಗಿ ಮಾಡಿ ರಾಜ್ಯ ಮತ್ತು ರಾಷ್ಟ್ರ ಪ್ರಶಸ್ತಿಗಳನ್ನು ಪಡೆದಿದ್ದರು. ನಾಡು ನುಡಿಯ ಬಗ್ಗೆ ಅಪಾರ ಅಭಿಮಾನ ಪ್ರೀತಿ ತುಂಬಿಕೊಂಡಿದ್ದ ಇವರು ನಾಡಿನ ಅನುಭವಿಕರ ಸೇವೆಯನ್ನು ತಮ್ಮ ನುಡಿಗಳಲ್ಲಿ ಕಟ್ಟಿದ್ದರು. ಕಾಶ್ಮೀರದ ಮೇಲೆ ಪಾಕಿಸ್ತಾನಿಗರು ದಂಡೆತ್ತಿ ಬಂದಾಗ ದೇಶದ ಕುರಿತಾದ ದೇಶಭಕ್ತಿಯ ಕಿಚ್ಚನ್ನು ಹೊತ್ತಿಸಲು ಅನೇಕ ಗೀತೆಗಳನ್ನು ರಚಿಸಿದ್ದರು ಎಂದರು.

ಹೀಗೆ ನಾಡ ಪ್ರೇಮ ಶಿಸ್ತು ಬದ್ಧ



ಜೀವನ ಮತ್ತು ದೇಶಪ್ರೇಮವನ್ನು ತಮ್ಮಲ್ಲಿ ಮೈಗೂಡಿಸಿಕೊಂಡಿದ್ದ ಅವರ ಜೀವನ ನಿಜಕ್ಕೂ ಈಗಿನ ಪೀಳಿಗೆಗೆ ಮಾರ್ಗದರ್ಶಿಯಾಗುವುದರಲ್ಲಿ ಸಂದೇಹವಿಲ್ಲ ಎಂದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಹುಕ್ಕೇರಿ ತಾಲೂಕ ಅಧ್ಯಕ್ಷ ಪ್ರಕಾಶ ಅವಲಕ್ಕಿ ಮಾತನಾಡಿ ಶಿಕ್ಷಣದ ಗುಣಮಟ್ಟ ಹೆಚ್ಚಿಸುವಲ್ಲಿ ಇಂಚಲ ರವರ ಶ್ರಮ ಎತ್ತರದ್ದು ಎಂದರು.

ಈ ವೇಳೆ ಸಾಹಿತ್ಯ ಮತ್ತು ನಾಟಕ ರಂಗದಲ್ಲಿ ವಿಶೇಷ ಸೇವೆ ಸಲ್ಲಿಸಿದ ಸರ್ವಮಂಗಳಾ ಅರಳಿಮಟ್ಟಿ ಮತ್ತು ಮಹಿಳಾ ಸಂಘಟನೆಯಲ್ಲಿ ಮತ್ತು ಸಂಘಟನಾತ್ಮಕ ಕಾರ್ಯಗಳಲ್ಲಿ ವಿಶೇಷ ಕಾರ್ಯಕ್ರಮಗಳನ್ನು ಆಯೋಜಿಸಲಾಗಿತ್ತು, ಸರ್ವರಂಗಗಳಲ್ಲಿ ಸೇವೆ ಸಲ್ಲಿಸುತ್ತಿರುವ ಶೈಲಜಾ ಬಿಂಗೆ ಮತ್ತು ಸಮಾಜ ಸೇವಕ ಚಂದ್ರಶೇಖರ ಬೆಂಬಳಗಿ ಅವರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಕಿತ್ತೂರ ತಾಲೂಕ ಕ.ಸಾ.ಪ. ಅಧ್ಯಕ್ಷ ಎಸ್.ಬಿ ದಳವಾಯಿ, ಬಿ.ಎಸ್ ದೊಡ್ಡಬಂಗಿ, ವಿ ಎಂ ಪಾಟೀಲ್, ಬಿ.ಬಿ ಮಠಪತಿ, ನಂದೀಶ ಕಾಂಬಳೆ,ಎಂ.ಎ. ದೇಸಾಯಿ, ರಮೇಶ ಮಗದುಮ್ಮ ಸೇ-ರಿದಂತೆ ಕನ್ನಡ ಸಾಹಿತ್ಯಾಸಕ್ತರು ಉಪಸ್ಥಿತ-ರಿದ್ದರು.

ಮಹಾನಂದಾ ಪರುಶೆಟ್ಟಿ ಪ್ರಾರ್ಥಿಸಿದರು, ಶಿವಾನಂದ ತಲ್ಲೂರ ಅತಿಥಿ ಪರಿಚಯಿಸಿದರು. ಎಂ.ವೈ ಮೆಣಸಿನಕಾಯಿ ಪ್ರಾಸ್ತಾವಿಕ ನುಡಿಗಳನ್ನಾಡಿದರು.

ವಿ.ಬಿ ಅಂಗಡಿ ಸ್ವಾಗತಿಸಿದರು. ಡಾ ಭಾರತಿ ಮಠದ ನಿರೂಪಿಸಿದರು. ಕೊನೆಯಲ್ಲಿ ಡಿ.ಜಿ. ಬೇವಿನಕೊಪ್ಪಮಠ ವಂದಿಸಿದರು.

# ಬೆಳಗಾವಿ ಜನರ ಅಸಮಾನತೆಯ ಕೂಗಿಗೆ ಮೃಣಾಲ್ ಧ್ವನಿಯಾಗಲಿದ್ದಾನೆ: ಸಚಿವೆ ಲಕ್ಷ್ಮೀ ಹೆಬ್ಬಾಳಕರ್

ಬೆಳಗಾವಿ: ಲೋಕಸಭಾ ಚುನಾವಣೆಯ ಪ್ರಚಾರಕ್ಕೆಂದು ಹೋದಲ್ಲೆಲ್ಲ ಜನರು ತೋ-ರಿಸುತ್ತಿರುವ ಪ್ರೀತಿ, ವಿಶ್ವಾಸ ನೋಡಿದರೆ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ ಹೆಬ್ಬಾಳಕರ್ 2 ಲಕ್ಷ ಮತಗಳಿಗೂ ಹೆಚ್ಚು ಅಂತರದಿಂದ ಗೆಲುವು ಸಾಧಿಸುವುದು ನಿಶ್ಚಿತ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಹೇಳಿದ್ದಾರೆ.

ಬೆಳಗಾವಿ ಗ್ರಾಮೀಣ ಕ್ಷೇತ್ರದ ಬಿಜಗರಣಿ, ಕವಳೆವಾಡಿ, ರಾಕಸಕೊಪ್ಪ, ಬೆಳವಟ್ಟಿ, ಬಡಸ್, ಬಾಕನೂರು, ಎಳೆಬೈಲ್ ಮೊದಲಾದ ಪ್ರದೇಶಗಳಲ್ಲಿ ಬುಧವಾರ ಸಚಿವರು ಪ್ರಚಾರ ನಡೆಸಿದರು. 2013ರಿಂದಲೂ ನನಗೂ ಕ್ಷೇತ್ರದ ಜನರಿಗೂ ನಿರಂತರ ಸಂಬಂಧವಿದೆ. ನಾನು ಇದೇ ಊರಿನಲ್ಲಿ ಹುಟ್ಟಿ, ಬೆಳೆದವಳು. ಲೋಕಸಭಾ ಅಭ್ಯರ್ಥಿಯಾಗಿರುವ ಮೃಣಾಲ ಹೆಬ್ಬಾಳಕರ್ ಕೂಡ ಇಲ್ಲೇ ಹುಟ್ಟಿ ಬೆಳೆದವನು. ಹಾಗಾಗಿ ಈ ಚುನಾವಣೆ ಸ್ಥಳೀಯರು ಮತ್ತು ಹೊರಗಿನವರ ನಡುವಿನ ಸ್ವಾಭಿಮಾನದ ಚುನಾವಣೆ. ಸ್ಥಳೀಯ ಅಭ್ಯರ್ಥಿಯಾಗಿರುವ, ಕ್ಷೇತ್ರದ ಅಭಿವೃದ್ಧಿಗೆ ಹಲವು ಕನಸುಗಳನ್ನು ಕಟ್ಟಿಕೊಂಡಿರುವ ಮೃಣಾಲ ಹೆಬ್ಬಾಳಕರ್ ಅವರನ್ನು ಅಧಿಕ ಬಹುಮತದಿಂದ ಆಯ್ಕೆ ಮಾಡಿ ಎಂದು ಹೆಬ್ಬಾಳಕರ್ ವಿನಂತಿಸಿದರು.

ಹೊರಗಿನಿಂದ ಚುನಾವಣೆಗೋಸ್ಕರ ಬಂದಿರುವ ಬಿಜೆಪಿ ಅಭ್ಯರ್ಥಿ ಚುನಾವಣೆ ಬಳಿಕ ಇಲ್ಲಿಂದ ಹೊರಟುಹೊಗುತ್ತಾರೆ. ಅವರಿಗೆ ಬೇಕಿರುವುದು ನಿಮ್ಮ ಮತ ಮಾತ್ರ, ಬೆಳಗಾವಿಯ ಅಭಿವೃದ್ಧಿ ಅವ-ರಿಗೆ ಬೇಕಾಗಿಲ್ಲ. ಬೆಳಗಾವಿ ಬೆಳೆಯುವುದನ್ನು ಮೊದಲಿನಿಂದಲೂ ವಿರೋಧಿಸುತ್ತ ಬಂದವರು ಅವರು. ಹಾಗಾಗಿಯೇ ಹುಬ್ಬಳ್ಳಿ – ಧಾರವಾಡಕ್ಕೆ ಹೋಲಿಸಿದರೆ ಬೆಳಗಾವಿ ಅಭಿವೃದ್ಧಿ ಕಂಡಿಲ್ಲ. ಬೆಳಗಾವಿಯ ಜನರು ಈ ಅಸಮಾನತೆಗಾಗಿ ನಿರಂತರ ಹೋರಾಟವನ್ನು ಮಾಡುತ್ತಲೇ ಬಂದಿದ್ದಾರೆ. ಆದರೆ ಇಲ್ಲಿಯ ಜನರಿಗೆ ಗಟ್ಟಿ ಧ್ವನಿ ಸಿಕ್ಕಿರಲಿಲ್ಲ. ಈ ಬಾರಿ ಮೃಣಾಲ ಹೆಬ್ಬಾಳಕರ್ ಸಂಸದನಾಗಿ ಬೆಳಗಾವಿಯ ಧ್ವನಿಯನ್ನು ಲೋಕಸಭೆಯಲ್ಲಿ ಮೊಳಗಿಸಲಿದ್ದಾನೆ ಎಂದು ಲಕ್ಷ್ಮೀ ಹೆಬ್ಬಾಳಕರ್ ತಿಳಿಸಿದರು.



ಅಭ್ಯರ್ಥಿ ಮೃಣಾಲ ಹೆಬ್ಬಾಳಕರ್ ಮಾತನಾಡಿ, ನಾನು ಇಲ್ಲಿಯ ಜನರಿಗಾಗಿ, ಬೆಳಗಾವಿ ಜಿಲ್ಲೆಗಾಗಿ ಖಂಡಿತವಾಗಿಯೂ ಕೆಲಸ ಮಾಡಲಿದ್ದೇನೆ. ಬೆಳಗಾವಿಯ ವಿವಿದ ಕ್ಷೇತ್ರಗಳ ತಜ್ಞರ ಸಲಹೆ ಪಡೆದು ಸಮಗ್ರ ಅಭಿವೃದ್ಧಿಯ ಯೋಜನೆ ತಯಾರಿಸಲಿದ್ದೇನೆ.

ಸುವ್ಯವಸ್ಥಿತ, ಸುಂದರ, ನೆಮ್ಮದಿಯ ನಗರವಾಗಿ ಬೆಳಗಾವಿ ಬೆಳೆಯಬೇಕೆನ್ನುವುದು ನನ್ನ ಕನಸು ಎಂದು ಹೇಳಿದರು.

ಬೆಳಗಾವಿ ಗ್ರಾಮೀಣ ಕ್ಷೇತ್ರದ ಬಿಜಗರಣಿ, ಕವಳೆವಾಡಿ ಹಾಗೂ ರಾಕಸಕೊಪ್ಪ ಗ್ರಾಮಸ್ಥರು ಒಗ್ಗಟ್ಟಾಗಿ 19 ವರ್ಷಗಳ ಬಳಿಕ ಆಯೋಜಿಸಿರುವ ಶ್ರೀ ಲಕ್ಷ್ಮೀ ಮಾತಾ ಜಾತ್ರಾ ಮಹೋತ್ಸವದಲ್ಲಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಹಾಗೂ ಮೃಣಾಲ ಹೆಬ್ಬಾಳಕರ್ ಭಾಗವಹಿಸಿ, ಆಶೀರ್ವಾದ ಪಡೆದು ಎಲ್ಲರ ಒಳಿತಿಗಾಗಿ ಪ್ರಾರ್ಥಿಸಿದರು.

ಈ ಸಂದರ್ಭದಲ್ಲಿ ಬಿಜಗರಣಿ ಗ್ರಾಮ ಪಂಚಾಯತ್ ಅಧ್ಯಕ್ಷ ಮನೋಹರ್ ಬೆಳಗಾಂವ್ಕರ್, ವಸಂತ್ ಅಷ್ಟೆಕರ್, ನಾಮದೇವ್ ಮೋರೆ, ಸಂದೀಪ್ ಅಷ್ಟೆಕರ್, ಮಾರುತಿ ಜಾಧವ್, ಶ್ರೀರಂಗ ಭಾಸ್ಕರ್, ರವಿ ಜಾಧವ್, ಡಾಕಳು ಪಾಟೀಲ ಸೇ-ರಿದಂತೆ ದೇವಸ್ಥಾನ ಕಮೀಟಿಯ ಸದಸ್ಯರು ಉಪಸ್ಥಿತರಿದ್ದರು.

ಬೆಳವಟ್ಟಿ ಗ್ರಾಮದ ಪ್ರಚಾರದಲ್ಲಿ ನಾರಾಯಣ ನಾಲವಡೆ, ಮಧು ನಾಲವಡೆ, ರಾಮನಿಂಗ ದೇಸಾಯಿ, ನಾಮದೇವ ಪಾಟೀಲ, ಮಧುಕರ ದೇಸಾಯಿ, ಮಾರುತಿ ಕಾಂಬಳೆ, ರಾಮನಿಂಗ ಪಾಟೀಲ ಸೇರಿದಂತೆ ಗ್ರಾಮಸ್ಥರು ಉಪಸ್ಥಿತರಿದ್ದರು.

ಬಡಸ್ ಗ್ರಾಮದಲ್ಲಿ ಯುವರಾಜ ಕದಂ, ನಾರಾಯಣ ಪಾಟೀಲ, ಪರಶುರಾಮ ಪಾಟೀಲ ಸೇರಿದಂತೆ ಹಲವರು ಉಪಸ್ಥಿತ-ರಿದ್ದರು.

ಬಾಕನೂರ ಗ್ರಾಮದಲ್ಲಿ ಯುವರಾಜ ಕದಂ, ಸುರೇಶ್ ನಾಯ್ಕ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ರಾಕಸಕೊಪ್ಪ ಗ್ರಾಮದಲ್ಲಿ ಯುವರಾಜ ಕದಂ, ಇಂದು ಪಾಟೀಲ, ಸಿದ್ದಪ್ಪ ಕಂಗ್ರಾಳ್ಕರ್, ಬಾಬುರಾವ್ ಮೋರೆ, ಡಾಕಳು ಪಾಟೀಲ ಸೇರಿದಂತೆ ಹಲವರು ಉಪಸ್ಥಿತರಿದ್ದರು. ಎಳೆಬೈಲ್ ಗ್ರಾಮದಲ್ಲಿ ಮಲ್ಲಪ್ಪ ಮರಗಾಳಿ, ಪರಶುರಾಮ ಪಾಟೀಲ, ಪರಶುರಾಮ ಪಾಟೀಲ, ವಿಠ್ಠಲ ಹೂಳ್ಕರ, ತಾನಾಜಿ ಮೋರೆ, ಮಹೇಶ ಪಾಟೀಲ, ಮಲ್ಲಪ್ಪ ಪಾಟೀಲ, ಭರ್ಮಾ ಶಹಾಪೂರಕರ್ ಉಪಸ್ಥಿತರಿದ್ದರು.

## ರಾಜ್ಯ ಮಟ್ಟದ ತಂತ್ರಜ್ಞಾನ ಮಾದರಿಗಳ ಸ್ಪರ್ಧೆ: ಸರ್ಕಾರಿ ಪಾಲಿಟೆಕ್ನಿಕ್ ವಿದ್ಯಾರ್ಥಿಗಳಿಗೆ ದ್ವಿತೀಯ ಬಹುಮಾನ

ಬೆಳಗಾವಿ: ಹಿರಾಶುಗರ ಇನ್‌ಸ್ಟಿಟ್ಯೂಟ ಆಫ್ ಟೆಕ್ನಾಲಾಜಿಯಲ್ಲಿ ಏ.02 ರಂದು ನಡೆದ ಟೆಕ್ನೋವಿಸಿನ್–24 ಎಂಬ ಡಿಪ್ಲೋಮಾ ವಿದ್ಯಾರ್ಥಿಗಳಿಗೆ ರಾಜ್ಯ ಮಟ್ಟದ ತಂತ್ರಜ್ಞಾನ ಮಾದರಿಗಳ ಸ್ಪರ್ಧೆಯನ್ನು ನಡೆಸಲಾಯಿತು.

ಇದರಲ್ಲಿ ಭಾಗವಹಿಸಿದ ಬೆಳಗಾವಿ ನಗರದ ಸರ್ಕಾರಿ ಪಾಲಿಟೆಕ್ನಿಕ್ ಯಾಂತ್ರಿಕ ವಿಭಾಗದ ವಿದ್ಯಾರ್ಥಿಗಳು 4 ಪ್ರಶಸ್ತಿ ಪಡೆದಿರುತ್ತಾರೆ. ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆಯ ಯಾಂತ್ರಿಕ ವಿಭಾಗದ ಅಂತಿಮ ವರ್ಷದ ಡಿಪ್ಲೋಮಾ ವಿದ್ಯಾರ್ಥಿಗಳಾದ ಅಭಯ ದುಡಮಿ, ನಿಖಿಲ್ ಉಪಾಧ್ಯೆ, ಪವನ ಅಮಾಸಿ,



ಮಂಜುನಾಥ ಲಮಾಣಿ ಇವರು " PLC CONTROLLED VENDING MA-CHINE WITH UPI INTERFACE " ವಸ್ತು ಪ್ರದರ್ಶನ ಮಾಡಿ ದ್ವಿತೀಯ ಬಹುಮಾನ ಪಡೆದಿರುತ್ತಾರೆ.

ಅದೇ ರೀತಿ ಯಾಂತ್ರಿಕ ವಿಭಾಗದ ಅಂತಿಮ ವರ್ಷದ ಡಿಪ್ಲೋಮಾ ವಿದ್ಯಾರ್ಥಿಗಳಾದ ಪ್ರಸಾದ ಕೆ, ಮಹಮ್ಮದ್ ಸಾಬಿರ್ ಅತ್ತಾರ ಅಹಮ್ಮದ್, ಸಿದ್ದಾರ್ಥ ಕಾಮ್ಕರ, ರೋಹನ ಗಸ್ತಿ ವಿದ್ಯಾರ್ಥಿಗಳು PLC CONTROLLED BOTTLE FILLING AND CAPPING ಎಂಬ ವಸ್ತು ಪ್ರದರ್ಶನದಲ್ಲಿ ತೃತೀಯ ಬಹುಮಾನವನ್ನು ಪಡೆದುಕೊಂಡರೆ ರೋಹನ ಗಸ್ತಿ, ಕಾರ್ತಿಕ ತಾರಿಹಾಳ PLC ವಿಷಯದ ಮೇಲೆ ಪ್ರಬಂಧವನ್ನು (Paper Presentation) ಮಂಡಿಸಿ ತೃತಿಯ ಬಹುಮಾನ ಪಡೆದಿರುತ್ತಾರೆ.

ಪ್ರಥಮ ವರ್ಷದ ವಿದ್ಯಾರ್ಥಿಗಳಾದ ಮಾರುತಿ ಬಂಗಾರೆ, ಆದಿಲ್ ಖಿಲೆದಾರ, ಶಿವಾನಂದ ಗಬ್ಬರ್, ಪ್ರೇಮಸಿಂಗ್ ರಜಪೂತ ಇವರು ಪೋಸ್ಟರ್ ಪ್ರಸೆಂಟೇಶನಲ್ಲಿ ಸಮಾಧಾನಕರ ಬಹುಮಾನ ಪಡೆದಿರುತ್ತಾರೆ. ಎಲ್ಲ ವಿದ್ಯಾರ್ಥಿಗಳನ್ನು ಮತ್ತು ಮಾರ್ಗದರ್ಶಕರಾದ ಲಿಂಗರಾಜ ಶಾಮನೂರ, ಶಿವಲಿಂಗ ಮೂಕನವರ ಇವರನ್ನು ಸಹ ಸಂಸ್ಥೆಯ ಪ್ರಾಚಾರ್ಯರಾದ ವಾಸುದೇವ ಅಪ್ಪಾ-ಜಿಗೋಳ, ಯಾಂತ್ರಿಕ ವಿಭಾಗದ ಮುಖ್ಯಸ್ಥರಾದ ಗಂಗಾಧರ ಹುನಗುಂದ ಅವರು ಅಭಿನಂದಿಸಿದ್ದಾರೆ.

## ಲೋಕಸಭಾ ಚುನಾವಣೆ ಮತದಾನ ಮಾಡಿ ಪ್ರಾಣಬಿಟ್ಟ ವೃದ್ಧೆ



ಉಡುಪಿ: ಲೋಕಸಭಾ ಚುನಾವಣೆಗೆ ಸಂಬಂಧಿಸಿದಂತೆ ಮನೆಯಿಂದಲೇ ಮತದಾನ ಪ್ರಕ್ರಿಯೆ ಈಗಾಗಲೇ ಆರಂಭಗೊಂಡಿದ್ದು, 85 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರು ಹಾಗೂ ವಿಶೇಷ ಚೇತನರು ಮನೆಯಿಂದಲೇ ಮತದಾನ ಮಾಡುತ್ತಿದ್ದಾರೆ. ಉಡುಪಿ ಜಿಲ್ಲೆಯಲ್ಲಿಯೂ ಈ ಪ್ರಕ್ರಿಯೆ ನಡೆಯುತ್ತಿದ್ದು, ಮತದಾನ ಮಾಡಿ ಕೆಲವೇ ಕ್ಷಣಗಳಲ್ಲಿ ವಯೋವೃದ್ಧೆ ಮೃತಪಟ್ಟ ಘಟನೆ ನಡೆದಿದೆ.

ಬ್ರಹ್ಮಾವರ ತಾಲೂಕಿನ ಸಾಸ್ತಾನ ಪಾಂಡೇಶ್ವರ ಚಡಗರ ಅಗ್ರಹಾರದ ನಿವಾಸಿಯಾಗಿದ್ದ ಪಿ.ಯಶೋಧಾ ನಾರಾಯಣ ಉಪಾಧ್ಯ (83) ಎನ್ನುವವರು, ಲೋಕಸಭಾ ಚುನಾವಣೆಯಲ್ಲಿ ಮನೆಯಲ್ಲಿ ಮತದಾನ ಮಾಡಿ ಕೆಲವೇ ಕ್ಷಣಗಳಲ್ಲಿ ಮೃತಪಟ್ಟಿದ್ದಾರೆ.

ಮತದಾನದ ದಿನ ಪಿ.ಯಶೋಧಾ ಅವರಿಗೆ ಎದೆ ನೋವು ಕಾಣಿಸಿಕೊಂಡಿತ್ತು. ಆದರೆ ಯಶೋಧಾ ನಾರಾಯಣ ಅವರು, ಮತದಾನ ಮಾಡಿಯೇ ಆಸ್ಪತ್ರೆ ತೆರಳುತ್ತೇನೆ ಎಂದು ಕುಟುಂಬಸ್ಥರ ಬಳಿ ತಿಳಿಸಿದ್ದರು. ಹೀಗಾಗಿ ಉಡುಪಿ ಜಿಲ್ಲಾ ಚುನಾವಣಾ ಅಧಿಕಾ-ರಿಗಳ ಸಹಾಯದಿಂದ ಯಶೋಧಾ ಅವರು ಮನೆಯಿಂದಲೇ ಮತದಾನ ಮಾಡಿದ್ದಾರೆ.

ಮತದಾನ ಮಾಡಿದ ಬಳಿಕ ಎದೆನೋವು ಹೆಚ್ಚಾದ ಕಾರಣ ಪಿ.ಯಶೋಧಾ ಅವರನ್ನು ಕೋಟೇಶ್ವರ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆದರೆ ಚಿಕಿತ್ಸೆ ಫಲಕಾರಿಯಾಗದೆ ಮಂಗಳವಾರ ರಾತ್ರಿ 9 ಗಂಟೆ ಸುಮಾರಿಗೆ ಮೃತಪಟ್ಟಿದ್ದಾರೆ ಎಂದು ತಿಳಿದು ಬಂದಿದೆ.

## ನರೇಗಾ ಕೂಲಿಕಾರ್ಮಿಕರು ತಪ್ಪದೇ ಮತದಾನ ಮಾಡಿ: ತಾಪಂ ಇಒ ತಳವಾರ



ಚನ್ನಮ್ಮನ ಕಿತ್ತೂರು: ಲೋಕಸಭೆ ಸಾರ್ವತ್ರಿಕ ಚುನಾವಣೆ ಅಂಗವಾಗಿ ಮೇ 07 ರಂದು ನಡೆಯುವ ಮತದಾನ ದಿನದಂದು ಎಲ್ಲಾ ನರೇಗಾ ಕೂಲಿಕಾರ್ಮಿಕರು ತಪ್ಪದೇ ಮತದಾನ ಮಾಡಬೇಕು ಎಂದು ತಾಲ್ಲೂಕು ಸ್ವೀಪ್ ಅಧ್ಯಕ್ಷರು ಹಾಗೂ ತಾಪಂ ಇಒ ಭೀಮಪ್ಪ ತಳವಾರ ತಿಳಿಸಿದರು.

ಜಿಲ್ಲಾ ಚುನಾವಣಾಧಿಕಾರಿಗಳ ಕಚೇರಿ, ಜಿಲ್ಲಾಡಳಿತ, ಜಿಲ್ಲಾ ಸ್ವೀಪ್ ಸಮಿತಿ, ಜಿಲ್ಲಾ ಪಂಚಾಯತ್ ಬೆಳಗಾವಿ ಮತ್ತು ತಾಲ್ಲೂಕು ಆಡಳಿತ, ತಾಲೂಕು ಸ್ವೀಪ್ ಸಮಿತಿ , ತಾಲೂಕ ಪಂಚಾಯತಿ ಚ.ಕಿತ್ತೂರು ಇವರ ಸಂಂ-ಯುಕ್ತಾಶ್ರಯದಲ್ಲಿ ಲೋಕಸಭಾ ಸಾರ್ವತ್ರಿಕ ಚುನಾವಣೆ ಅಂಗವಾಗಿ ತಾಲ್ಲೂಕಿನ ಕಲಭಾಂವಿ ಗ್ರಾಪಂ ವ್ಯಾಪ್ತಿಯ ಮನರೇಗಾ ಕಾಮಗಾರಿ ಸ್ಥಳಗಳಲ್ಲಿ ಹಮ್ಮಿಕೊಂಡಿದ್ದ ಮತದಾನ ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಚುನಾವಣೆಗಳು ಹಬ್ಬವಿದ್ದಂತೆ. ಅದರಲ್ಲಿ ಮತದಾನವು ತನ್ನದೇ ಆದ ವೈಶಿಷ್ಟ್ಯತೆ ಹೊಂದಿದೆ. ಹಾಗಾಗಿ ಯಾರೂ ಮತದಾನ ಪ್ರಕ್ರಿಯೆಯಿಂದ ದೂರ ಉಳಿಯಬಾರದು. ಪ್ರತಿಯೊಬ್ಬರೂ ಕಡ್ಡಾಯವಾಗಿ ಮತದಾನ ಮಾಡಬೇಕು ಎಂದು ಹೇಳಿದರು.

ಚುನಾವಣೆ ದಿನ ಯಾವುದೇ ಆಸೆ ಆಮೀಷಕ್ಕೆ ಒಳಗಾಗದೇ ಎಲ್ಲರೂ ನೈತಿಕವಾಗಿ ಮತದಾನ ಮಾಡಬೇಕು. ಯುವ ಮತದಾರರು ತಪ್ಪದೇ ಮತದಾನ ಪ್ರಕ್ರಿಯೆಯಲ್ಲಿ ಪಾಲ್ಗೊಂಡು ಪ್ರಜಾಪ್ರಭುತ್ವ ಸುಭದ್ರಗೊಳಿಸುವಲ್ಲಿ ಮುಖ್ಯಪಾತ್ರ ವಹಿಸಬೇಕು ಎಂದರು.

ನರೇಗಾ ಯೋಜನೆಯಡಿ ದಿನಕೂಲಿ 349ರೂ ಆಗಿದೆ. ಯಾರೂ ಗುಳೆ ಹೋಗಬಾರದು. ನಿಮ್ಮೂರಲ್ಲಿಯೇ ಉದ್ಯೋಗ ಖಾತರಿ ಯೋಜನೆಯಡಿ ಉದ್ಯೋಗ ಒದಗಿಸಲಾಗುತ್ತದೆ ಎಂದರು. ಇದೇ ಸಂದರ್ಭದಲ್ಲಿ ಮತದಾರರ ಪ್ರತಿಜ್ಞಾ ವಿಧಿಯನ್ನು ಸ್ವೀಕರಿಸಲಾಯಿತು.

ಈ ಸಂದರ್ಭದಲ್ಲಿ ಗ್ರಾಉ ಸಹಾಯಕ ನಿರ್ದೇಶಕ ಲಿಂಗರಾಜ ಹಲಕರ್ಣಿಮಠ, ತಾಲ್ಲೂಕು ಐಇಸಿ ಸಂಯೋಜಕ ಎಸ್.ಬಿ.ಜವಳಿ, ಪಿಡಿಓ ವಿವೇಕಾನಂದ ಶಿಂಧೆ, ಬಿಎಫ್ಟಿ ಬಸವರಾಜಹೊಸಮನಿ, ಗ್ರಾ.ಪಂ. ಸಿಬ್ಬಂದಿಗಳು ಸೇರಿದಂತೆ ಕೂಲಿಕಾರ್ಮಿಕರು ಹಾಜರಿದ್ದರು.

## ಏಪ್ರಿಲ್ 20 ರಂದು ರಾಜ್ಯಕ್ಕೆ ಪಿಎಂ ಮೋದಿ ಆಗಮನ

ಬೆಂಗಳೂರು: ಲೋಕಸಭೆ ಚುನಾವಣೆಗೆ ಕರ್ನಾಟಕದಲ್ಲಿ ಪ್ರಚಾರ ತೀವ್ರಗೊಳಿಸಿರುವ ಬಿಜೆಪಿ ಜೆಡಿಎಸ್ ಮೈತ್ರಿ ನಾಯಕರು ಮತ್ತೊಮ್ಮೆ ಪ್ರಧಾನಿ ನರೇಂದ್ರ ಮೋದಿಯವರನ್ನು ರಾಜ್ಯಕ್ಕೆ ಕರೆಸಲು ತೀರ್ಮಾನಿಸಿದ್ದಾರೆ.

ಏ. 20ರಂದು ರಾಜ್ಯಕ್ಕೆ ಭೇಟಿ ನೀಡಲಿದ್ದಾರೆ. ಚಿಕ್ಕಬಳ್ಳಾಪುರ ಮತ್ತು ಬೆಂಗಳೂರಿನಲ್ಲಿ ಪಕ್ಷದ ಅಭ್ಯರ್ಥಿಗಳ ಪರ ಮತಯಾಚನೆ ಮಾಡಲಿದ್ದಾರೆ. ಕಳೆದ ಭಾನುವಾರ ಮೈಸೂರಿನಲ್ಲಿ ನಡೆದ ವಿಜಯ ಸಂಕಲ್ಪ ಸಮಾವೇಶದಲ್ಲಿ ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡರ ಜತೆ ವೇದಿಕೆ ಹಂಚಿಕೊಂಡಿದ್ದ ಪ್ರಧಾನಿ ನರೇಂದ್ರ ಮೋದಿ ಬಳಿಕ ಮಂಗಳೂರಿನಲ್ಲಿ ಭರ್ಜರಿ ರೋಡ್ ಶೋ ನಡೆಸಿದ್ದರು. ಇದೀಗ ಮತ್ತೆ ಪ್ರಧಾನಿ ಮೋದಿ ಕರ್ನಾಟಕಕ್ಕೆ ಭೇಟಿ ನೀಡಲಿದ್ದು, ಏಪ್ರಿಲ್ 20ರಂದು ಚಿಕ್ಕಬಳ್ಳಾಪುರ ಹಾಗೂ ಬೆಂಗಳೂರಿನಲ್ಲಿ ಸಾರ್ವಜನಿಕ ಸಮಾವೇಶಗಳಲ್ಲಿ ಭಾಗವಹಿಸಲಿದ್ದಾರೆ.

ಇದೇ ಏಪ್ರಿಲ್ 20 ರಂದು ಚಿಕ್ಕಬಳ್ಳಾಪುರದ ದೇವನಹಳ್ಳಿಯಲ್ಲಿ ಮತ್ತೊಂದು ಬೃಹತ್ ಸಮಾವೇಶ ಹಮ್ಮಿಕೊಳ್ಳಲಾಗಿದೆ. ಈ ಸಮಾವೇಶದಲ್ಲೂ ಪ್ರಧಾನಿ ಮೋದಿ–ಹೆಚ್‌ಡಿ ದೇವೇಗೌಡ ಜೊತೆಯಾಗಿ ಕಾಣಿಸಿಕೊಳ್ಳಲಿದ್ದಾರೆ ಎಂದು ಪಕ್ಷದ ಮೂಲಗಳು ತಿಳಿಸಿವೆ.

## ಆಸೆ, ಆಮೀಶಗಳಿಗೆ ಒಳಗಾಗದೇ ನೈತಿಕ ಮತದಾನ ಮಾಡಿ: ಗೋಪಾಲ ಮಾಳಿ




ಬೆಳಗಾವಿ: ಯಾವುದೇ ಆಸೆ ಆಮೀಶಗಳಿಗೆ ಒಳಗಾಗದೇ ಪ್ರತಿಯೊಬ್ಬರು ನೈತಿಕ ಮತದಾನ ಮಾಡಬೇಕು ಎಂದು ಸಹಾಯಕ ನಿರ್ದೇಶಕ(ಗ್ರಾಪಂ) ಗೋಪಾಲ ಮಾಳಿ ಹೇಳಿದರು.

ಕಾಗವಾಡ ತಾಲೂಕಿನ ಮಳವಾಡ ಗ್ರಾಮದಲ್ಲಿ ತಾಲ್ಲೂಕು ಸ್ವೀಪ್ ವತಿಯಿಂದ ಬುಧವಾರ ಹಮ್ಮಿಕೊಳ್ಳಲಾದ ಮಾತದಾನ ಜಾಗೃತಿ ಅಭಿಯಾನದಲ್ಲಿ ಅವರು ಮಾತನಾಡಿದರು.

ಮತದಾನ ಪ್ರತಿಯೊಬ್ಬರ ಆದ್ಯಕರ್ತವ್ಯವಾಗಿದ್ದು, ಮೇ 7 ರಂದು ಕಡ್ಡಾಯವಾಗಿ ನಿಮ್ಮ ಹಕ್ಕು ಚಲಾಯಿಸಿ ಪ್ರಜಾಪ್ರಭುತ್ವ ಗಟ್ಟಿಗೊಳಿಸಬೇಕಿ ಎಂದರು. ಪಿಡಿಓ ಯಶವಂತ ವಂಟಗೂಡೆ ಮಾತನಾಡಿ, ಉತ್ತಮ ಪ್ರಜಾ ಪ್ರಭುತ್ವ ವ್ಯವಸ್ಥೆಗೆ ಮತದಾನದ ಅವಶ್ಯಕತೆ ಇದ್ದು, ಗ್ರಾಮೀಣ ಮಹಿಳೆಯರು ತಮ್ಮ ಸುತ್ತಲಿನ ಜನರಿಗೆ ಮತದಾನ ಅರಿವು ಮೂಡಿಸಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಐಇಸಿ ಸಂಯೋಜಕ ಅಮೀತ ಇಂಗಳಗಾಂವಿ, ತಾಂತ್ರಿಕ ಸಹಾಯಕ ಯುವರಾಜ ಗಾಡಿವಡ್ಡರ, ಆಡಳಿತ ಸಹಾಯಕ ಆದಿನಾಥ ಚೌಗಲೇ, ಗ್ರಾಪಂ ಸಿಬ್ಬಂದಿಗಳಾದ ವೈಭವ ಬಾಗೇವಾಡಿ, ಪ್ರೇಮಾ ಪಾಟೀಲ್, ಸಾವಂತ ಮುಂತಾದವರು ಭಾಗವಹಿಸಿದ್ದರು.

## ಚಿಕ್ಕೋಡಿ ಮಾದರಿ ಕ್ಷೇತ್ರವನ್ನಾಗಿಸುವುದೇ ನನ್ನ ಕನಸು: ಪ್ರಿಯಂಕಾ ಜಾರಕಿಹೊಳಿ

ಬೆಳಗಾವಿ: ಚಿಕ್ಕೋಡಿ ಲೋಕಸಭಾ ಕ್ಷೇತ್ರದ ಜನತೆ ವಿಶ್ವಾಸವಿಟ್ಟು ಮತ ನೀಡಿದರೆ. ಕ್ಷೇತ್ರದಲ್ಲಿ ಬಾಕಿ ಉಳಿದಿರುವ ಮೂಲಸೌಕರ್ಯ ಅಭಿವೃದ್ಧಿಯೊಂದಿಗೆ ಈ ಕ್ಷೇತ್ರವನ್ನು ಮಾದರಿ ಕ್ಷೇತ್ರವನ್ನಾಗಿ ಅಭಿವೃದ್ಧಿ ಪಡಿಸಲಾಗುವುದು. ಅದು ನನ್ನ ಕನಸಾಗಿದೆ ಎಂದು ಚಿಕ್ಕೋಡಿ ಲೋಕಸಭಾ ಕಾಂಗ್ರೆಸ್ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಅವರು ವಿಶ್ವಾಸ ವ್ಯಕ್ತಪಡಿಸಿದರು.

ಬೆಳಗಾವಿ ತಾಲೂಕಿನ ಸುತಗಟ್ಟಿ, ಪರಶ್ಯಾನಟ್ಟಿ, ಶಿವಾಪೂರ, ಹಳೆ ಇದ್ದಲಹೊಂಡ, ನಿಂಗ್ಯಾನಟ್ಟಿ ಹಾಗೂ ಕಟ್ಟನಭಾವಿ ಗ್ರಾಮದಲ್ಲಿ ಮತಯಾಚಿಸಿ, ಪ್ರಚಾರ ಸಭೆ ಉದ್ದೇಶಿಸಿ ಮಾತನಾಡಿದ ಅವರು, ಚಿಕ್ಕೋಡಿ ಭಾಗದಲ್ಲಿ ನೀರಾವರಿ ಯೋಜನೆ ಸಾಕಾರಗೊಳ್ಳಬೇಕಿದೆ. ನನ್ನನ್ನು ಆಯ್ಕೆ ಮಾಡಿ, ಲೋಕಸಭೆಗೆ ಕಳಿಸಿಕೊಟ್ಟರೆ ಕ್ಷೇತ್ರವನ್ನು ಮಾದರಿ ಕ್ಷೇತ್ರವಾಗಿ



ಅಭಿವೃದ್ಧಿ ಪಡಿಸಲು ಯೋಜನೆ ರೂಪಿಸಿ ಅನುಷ್ಠಾನ ಮಾಡಲಾಗುವುದು ಎಂದು ಹೇಳಿದರು.

ಹಸ್ತವೇ ಈ ದೇಶದ ಶಕ್ತಿ: ದೇಶಕ್ಕೆ ಕಾಂಗ್ರೆಸ್ ಕೊಡುಗೆ ಅಪಾರವಾಗಿದೆ. ಸ್ವಾತಂತ್ರ್ಯ ನಂತರ ಹಸಿವು, ಬಡತನ, ಅನಕ್ಷರತೆಯಿಂದ ಕೂಡಿದ್ದ ಭಾರತ ದೇಶ ಇಂದು ವಿಜ್ಞಾನ, ತಂತ್ರಜ್ಞಾನ, ಆಹಾರ ಸ್ವಾವಲಂಬನೆಗಳಿಸಿ ಬೆಳವಣಿಗೆಯಾಗಲು ಕಾಂಗ್ರೆಸ್ ಪಕ್ಷದ ಕೊಡುಗೆ ಅಪಾರವಾದದ್ದು. 70 ವರ್ಷದ ಅವಧಿಯಲ್ಲಿ ದೇಶದ ಅಭಿವೃದ್ಧಿಗೆ ಕಾಂಗ್ರೆಸ್ ಶ್ರಮಿಸಿದೆ. ಮರಭೂಮಿಯಲ್ಲಿ ಭವ್ಯ ಭಾರತ ನಿರ್ಮಾಣ ಮಾಡಿರುವುದು ಕಾಂಗ್ರೆಸ್ ಪಕ್ಷ, ಹಸ್ತವೇ ಈ ದೇಶದ ಶಕ್ತಿ ಎಂದರು.

ಕಾಂಗ್ರೆಸ್ ಪಕ್ಷದ ಕೊಟ್ಟ ಮಾತಿನಂತೆ ಗ್ಯಾರಂಟಿ ಯೋಜನೆ ಜಾರಿ ಮಾಡಿದೆ. ಸಿಎಂ ಸಿದ್ದರಾಮಯ್ಯನವರ ಸರ್ಕಾರ ರಾಜ್ಯದಲ್ಲಿ ಉತ್ತಮ ಆಡಳಿತ ನೀಡುತ್ತಿದೆ. ರಾಜ್ಯದ ಅಭಿವೃದ್ಧಿ ಜೊತೆ ನಾಡಿನ ಹಿತ ಕಾಪಾಡಿಕೊಂಡು ಹೋಗುತ್ತಿರುವ ಕಾಂಗ್ರೆಸ್ ಕೇಂದ್ರದಲ್ಲಿ ಅಧಿಕಾರಕ್ಕೆ ಬಂದರೆ ಇನ್ನೂ ಹೆಚ್ಚಿನ ಅಭಿವೃದ್ಧಿ ಕಾರ್ಯಗಳು ನಡೆಯಲಿವೆ ಎಂದರು.

ಈಗಾಗಲೇ ಕಾಂಗ್ರೆಸ್ ಪಕ್ಷ ಲೋಕಸಭೆಯ ಪ್ರಣಾಳಿಕೆಯನ್ನು ಬಿಡುಗಡೆ ಮಾಡಿದೆ. ಮಹಿಳೆಯರಿಗೆ ಹೆಚ್ಚಿನ ಪ್ರಾಮುಖ್ಯತೆ ನೀಡಲಾಗಿದೆ.

ಕೇಂದ್ರದಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದ ತಕ್ಷಣವೇ 25 ಗ್ಯಾರಂಟಿ ಯೋಜನೆಗಳನ್ನು ಜಾ-ರಿಗೊಳಿಸಲಾಗುವುದು. ಮತ್ತು ಮಹಿಳೆಯರಿಗೆ ವಿಶೇಷವಾಗಿ ವರ್ಷಕ್ಕೆ ತಲಾ 1 ಲಕ್ಷ ರೂ. ನೀಡಲಾಗುವುದು. ರೈತರ ಹಿತ ರಕ್ಷಣೆಗಾಗಿ ರೈತರ ಸಾಲ ಮನ್ನಾ ಮಾಡಲಾಗುವುದು ಕಾಂಗ್ರೆಸ್ ವರಿಷ್ಠ ನಾಯಕ ರಾಹುಲ್ ಗಾಂಧಿ ಅವರು ಇಂದು ಘೋಷಣೆ ಮಾಡಿದ್ದಾರೆ. ದೇಶದ ಅಭಿವೃದ್ಧಿಗಾಗಿ ಮತದಾರರು ಕಾಂಗ್ರೆಸ್ ಗೆ ಮತ ನೀಡಬೇಕು ಎಂದು ಹೇಳಿದರು.

ತಂದೆವರಾದ ಸಚಿವ ಸತೀಶ ಜಾರಕಿಹೊಳಿ ಅವರು ಶಿಕ್ಷಣ, ನೀರಾವರಿ ಹಾಗೂ ಸಮಾಜಮುಖಿ ಕಾರ್ಯಗಳನ್ನು ಮಾಡಿದ್ದಾರೆ. ಜನರ ಏಳಿಗಾಗಿ ಸಾಕಷ್ಟು ಶ್ರಮಿಸಿದ್ದಾರೆ.

ಬಡವರಿಗೆ ಬೆನ್ನುಲುಬಾಗಿ ನಿಂತಿ-ರುವ ಅಪರೂಪದ ಸಚಿವರು ಈ ಭಾಗದ ಅಭಿವೃದ್ಧಿಗೆ ಪಣತೊಟ್ಟಿದ್ದಾರೆ. ನಿಮ್ಮ–ಮನೆ ಮಗಳನ್ನು ಆಯ್ಕೆ ಮಾಡಿ ಲೋಕಸಭೆಗೆ ಕಳಿಸಿಕೊಟ್ಟರೆ ಚಿಕ್ಕೋಡಿ ಕ್ಷೇತ್ರದ ಬದಲಾವಣೆಗೆ ಶ್ರಮಿಸುತ್ತೆವೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ರಾಮಣ್ಣ ಗುಳಿ, ಮಾರುತಿ ಸಜಲಿ, ಶಟ್ಟು ಅಲ್ಲನಗೋಳ, ರೇಣುಕಾ ಗೋಡ್ಯಾಳ, ನಂದಿನಿ ಬಂಗ್ಯಾಗೋಳ, ನಾಗವ್ವ ಸಜಲಿ ಗ್ರಾಮಸ್ಥರು ಹಾಗೂ ಕಾಂಗ್ರೆಸ್ ಕಾರ್ಯಕರ್ಯರು ಇತರರು ಇದ್ದರು.

## ಕಾಂಗ್ರೆಸ್ ಗ್ಯಾರಂಟಿಗಳೇ ಕೈ ಅಭ್ಯರ್ಥಿ ಪ್ರಿಯಂಕಾ ಗೆಲುವಿಗೆ ಶ್ರೀರಕ್ಷೆ: ಸಚಿವ ಸತೀಶ ಜಾರಕಿಹೊಳಿ

ರಾಯಬಾಗ: ಕಾಂಗ್ರೆಸ್ ಕಾರ್ಯಕರ್ತರು, ಅಭಿಮಾನಿಗಳ ಶಕ್ತಿಯಿಂದ ರಾಜ್ಯದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದಿದೆ. ಮತ್ತೆ ಎಲ್ಲರೂ ಒಗ್ಗಟ್ಟಾಗಿ ಮತ್ತೊಮ್ಮೆ ಕೈ ಬಲಪಡಿಸಬೇಕಿದೆ. ಕಾಂಗ್ರೆಸ್ ಗ್ಯಾರಂಟಿಗಳೇ ಕಾಂಗ್ರೆಸ್ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಗೆಲುವಿಗೆ ಶ್ರೀರಕ್ಷೆಯಾಗಲಿದೆ ಎಂದು ಸಚಿವ ಸತೀಶ ಜಾರಕಿಹೊಳಿ ಅವರು ಹೇಳಿದರು.

ಚಿಕ್ಕೋಡಿ ಲೋಕಸಭಾ ಕ್ಷೇತ್ರದ ರಾಯಬಾಗ ತಾಲೂಕಿನ ಕಂಕನವಾಡಿ ಗ್ರಾಮದಲ್ಲಿ ಮತಯಾಚಿಸಿ, ಕಾಂಗ್ರೆಸ್ ಕಾರ್ಯಕರ್ತರ ಪ್ರಚಾರ ಸಭೆ ಉದ್ದೇಶಿಸಿ ಮಾತನಾಡಿದ ಅವರು, ಕಳೆದ 20 ವರ್ಷಗಳಿಂದ ಬೆಳಗಾವಿ, ಚಿಕ್ಕೋಡಿ ಅಭಿವೃದ್ಧಿಗೆ ಸಾಕಷ್ಟು ಶ್ರಮಿಸಲಾಗಿದೆ. ರೈತರ ಕೃಷಿ ಕಾರ್ಯಗಳಿಗೆ ನೀರಾವರಿ ಯೋಜನೆ ಸೇರಿದಂತೆ ಅನೇಕ ಮಹತ್ವದ ಕಾರ್ಯಗಳನ್ನು ನೆರವೇರಿಸಲಾಗಿದೆ. ಈ ಭಾಗದಲ್ಲಿ ಬಹಳಷ್ಟು ಅಭಿವೃದ್ಧಿ ಕಾರ್ಯಗಳು ನಡೆಯಬೇಕಿದೆ.

ಹೀಗಾಗಿ ಯುವ ನಾಯಕಿ ಕಾಂಗ್ರೆಸ್ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಅವರನ್ನು ಬಹುಮತ ಅಂತರ ಗೆಲ್ಲಿಸಿ ಲೋಕಸಭೆಗೆ ಕಳಿಸಿಕೊಡಬೇಕು ಎಂದು ಸಚಿವರು ಮನವಿ ಮಾಡಿಕೊಂಡರು.

ಕಾಂಗ್ರೆಸ್ ಪಕ್ಷ ದೇಶಕ್ಕೆ ಅನಿರ್ವಾಯವಾಗಿದೆ: ದೇಶದ ಅಭಿವೃದ್ಧಿ, ಜನರು ನೆಮ್ಮದಿಯಿಂದ ಜೀವನ ನಡೆಸಲು ಕಾಂಗ್ರೆಸ್ ಪಕ್ಷ ದೇಶಕ್ಕೆ ಅನಿರ್ವಾಯವಾಗಿದೆ. ಸಿಎಂ ಸಿದ್ದರಾಮಯ್ಯನವರ ನೇತೃತ್ವದ ಕಾಂಗ್ರೆಸ್ ಸರ್ಕಾರ ಗ್ಯಾರಂಟಿ ಯೋಜನೆಗಳನ್ನು ಅನುಷ್ಠಾನಗೊಳಿಸಿ ನುಡಿದಂತೆ ನಡೆದಿದ್ದಾರೆ. ರಾಜ್ಯದ ವಿಧಾನಸಭಾ ಚುನಾವಣೆಯಲ್ಲಿ ಜಿದ್ದಾ–ಜಿದ್ದಿನ ಕಣದಲ್ಲಿ ಕಾಂಗ್ರೆಸ್ ಬಹುಮತ ಪಡೆದುಕೊಂಡು ಅಧಿಕಾರಕ್ಕೇರಿದೆ.



ಲೋಕಸಭಾ ಅಖಾಡದಲ್ಲಿ ಬಿರುಸಿನ ಫೈಟ್ ನಡೆದಿದೆ. ಮತದಾರರು ದೃಢ ನಿರ್ಧಾರ ಮಾಡಿ "ಕೈ " ಗೆ ಶಕ್ತಿ ನೀಡಬೇಕು. ದೇಶದ ಅಭಿವೃದ್ಧಿಗೆ ಸಹಕಾರ ನೀಡಬೇಕು ಎಂದು ಸಚಿವರು ಮನವಿ ಮಾಡಿಕೊಂಡು.

ಚಿಕ್ಕೋಡಿ ಸೇರಿದಂತೆ ಮಹಾಲಿಂಗಪೂರವರೆಗೂ ರಸ್ತೆಗಳ ಅಭಿವೃದ್ಧಿ ಕಾರ್ಯಗಳು ನಡೆಬೇಕಿದೆ. ರಾಜ್ಯದಲ್ಲಿ ಕಾಂಗ್ರೆಸ್ ಅಧಿಕಾರದಲ್ಲಿದೆ, ಕೇಂದ್ರದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಅಭಿವೃದ್ಧಿ ಕಾರ್ಯಗಳ ಸರಾಗವಾಗಿ ನಡೆಯುತ್ತವೆ. ನಮ್ಮಗೆ ರೈತರ ಹಿತರಕ್ಷಣೆ ಮುಖ್ಯವಾಗಿದೆ ಹೀಗಾಗಿ ಈಗಾಗಾಲೇ ನೀರನ್ನು ಬಿಡಲಾಗಿದೆ. ಜನ–ಜಾನುವಾರುಗಳು ನೀರಿನ ಅವಶ್ಯ ಬಹಳಷ್ಟಿದೆ. ಮತ್ತೆ ಮತ್ತೆ ನೀರನ್ನು ಹ-ರಿಸುವ ಪ್ರಯತ್ನ ಮಾಡಲಾಗುವುದು. ಈ ಭಾಗದ ರೈತರು ಬಹಳಷ್ಟು ಅಭಿವೃದ್ಧಿ ಹೊಂದಬೇಕಾಗಿದೆ.

ಹೀಗಾಗಿ ಕೈ ಗೆ ಶಕ್ತಿ ತುಂಬಿ ಪುತ್ರಿ ಪ್ರಿಯಂಕಾ ಜಾರಕಿಹೊಳಿ ಅವರನ್ನು ಗೆಲ್ಲಿಸಿದಾಗ ಮಾತ್ರ ಇವೆಲ್ಲವೂ ಸಾಧ್ಯವಾಗಲಿದೆ ಎಂದು ಸಚಿವರು ಹೇಳಿದರು.

ಈ ವೇಳೆ 60 ಕ್ಕೂ ಹೆಚ್ಚು ಬಿಜೆಪಿ ಹಾಗೂ ಜೆಡಿಎಸ್ ಕಾರ್ಯಕರ್ತರು ಸಚಿವ ಸತೀಶ ಜಾರಕಿಹೊಳಿ ಅವರ ಸಮ್ಮುಖದಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾದರು.

ಈ ಸಂದರ್ಭದಲ್ಲಿ ಯುವ ನಾಯಕ ರಾಹುಲ್ ಜಾರಕಿಹೊಳಿ, ಎಸ್ ಬಿ ಘಾಟಗೆ, ಮಹಾವೀರ ಮೋಹಿತೆ, ಅರ್ಜುನ ನಾಯಕವಾಡಿ, ಅಪ್ಪಾಸಾಹೇಬ ಕುಲಕರ್ಣಿ. ದಿಲೀಪ ಜಮಾದಾರ, ಸದ್ದು ಬಂಡಗರ, ಸತಾರ ಮುಲ್ಲಾ, ಶಿವು ಮರ್ಯಾಯಿ, ರಾಜು ಶಿರಗಾಂವಿ, ಮಹೇಶ ಕೊರವಿ, ಮಹಾದೇವ ನಾಯಕ, ಅರ್ಜುನ ಬಳ್ಳಾರಿ, ರಾಮಪ್ಪ ಬೆಳಗಲಿ, ಶಂಕರ ನಾಯವಾಡಿ, ರಾಮರಾಜ ಬಳ್ಳಾರಿ, ವಿಠ್ಠಲ ಅಂಕಲಗಿ, ಮಹಾದೇವ ತಿಮ್ಮವ್ವಗೋಳ, ಅಶೋಕ ಮರ್ದಿ, ಶಂಕರ ಬಳ್ಳಾರಿ, ಮೋಹನ ಸಂಕಾಡಿ, ಆನಂದ ಬಳ್ಳಾರಿ, ಮೋಹನ ಪಕಾಂಡಿ, ಲಕ್ಷ್ಮಣ ತಿಗಡಿ, ಲಕ್ಷ್ಮಣ ಬೆಳಗಲಿ, ಸಿದ್ದಪ್ಪ ಬಳ್ಳಾರಿ, ನಾಮದೇವ ಅವರಾದಿ, ಮಹಾವೀರ ಪಾಟೀಲ, ವಿಠ್ಠಲ ನಾಯಕವಾಡಿ, ಶಂಕರ ನಾಯಕವಾಡಿ, ಮಾರುತಿ ಬಳ್ಳಾರಿ, ರಾಘವೇಂದ್ರ ಮರ್ದಿ, ಸಿದ್ದಣ್ಣ ದುರದುಂಡಿ, ಅರ್ಜುನ ತೋಳಿ, ಕರೆಪ್ಪ ಮೇತ್ರಿ, ಪಾರುಕ ನದಾಫ, ಪ್ರಕಾಶ ಸೊಳ್ಳೆನವರ, ಮುತ್ತು ಅರಬಾಂವಿ, ಸುರೇಶ ಗದಾಡಿ ಹಾಗೂ ಇತರರು ಇದ್ದರು.

## 6ನೇ ತರಗತಿ ವಸತಿ ಶಾಲೆಗಳಿಗೆ ಪ್ರವೇಶಕ್ಕಾಗಿ ಅರ್ಜಿ ಆಹ್ವಾನ

ಬೆಳಗಾವಿ: 2024-25 ನೇ ಸಾಲಿಗೆ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಬೆಳಗಾವಿ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ ಹಾಗೂ ಎಪಿಜೆ ಅಬ್ದುಲ್ ಕಲಾಂ ವಸತಿ ಶಾಲೆಗಳ 6ನೇ ತರಗತಿಗಳಿಗೆ ಪ್ರವೇಶ ನೀಡಲು ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್ ಮತ್ತು ಪಾರ್ಸಿ ಅರ್ಹ ವಿದ್ಯಾರ್ಥಿಗಳಿಂದ ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಆಸಕ್ತ ವಿದ್ಯಾರ್ಥಿಗಳು ಮತ್ತು ಪಾಲಕರು ಏ.30 ಒಳಗಾಗಿ ಸೇವಾ ಸಿಂಧು ಪೋರ್ಟ್‌ಲ್ http://sevasindhu.karnataka.gov.in ಲಿಂಕ್ ಮುಖಾಂತರ ಅರ್ಜಿ ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ ಃttp://dom.karnataka.gov.in ಲಿಂಕ್ ಮೂಲಕ ಪಡೆಯಬಹುದಾಗಿದೆ ಹಾಗೂ ಉಚಿತ ಸೇವೆಗಳನ್ನು ಬಳಸಿಕೊಳ್ಳಲು ತಮ್ಮ ಸಮೀಪದ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳು, ಅಲ್ಪಸಂಖ್ಯಾತರ ಮಾಹಿತಿ ಕೇಂದ್ರಗಳನ್ನು ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಅಧಿಕಾರಿಗಳಾದ ಡಾ. ಅಬ್ದುಲರಶೀದ ಎಮ್ ಮಿರ್ಜನ್ನವರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 6ನೇ ತರಗತಿ ಮೌಲಾನಾ ಆಜಾದ್ ಮಾದರಿ ಶಾಲೆಗಳಿಗೆ ಪ್ರವೇಶಕ್ಕಾಗಿ ಅರ್ಜಿ ಆಹ್ವಾನ

ಬೆಳಗಾವಿ: 2024-25 ನೇ ಸಾಲಿಗೆ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಬೆಳಗಾವಿ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಮೌಲಾನಾ ಆಜಾದ್ ಮಾದರಿ ಶಾಲೆಗಳ 6ನೇ ತರಗತಿಗಳಿಗೆ ಪ್ರವೇಶ ಪಡೆಯಲು ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್ ಮತ್ತು ಪಾರ್ಸಿ ಅರ್ಹ ವಿದ್ಯಾರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಆಸಕ್ತಿಯುಳ್ಳ ವಿದ್ಯಾರ್ಥಿಗಳು ಮೇ. 15 ಒಳಗಾಗಿ ಅಲ್ಪಸಂಖ್ಯಾತರ ನಿರ್ದೇಶನಾಲಯದ ಅಧಿಕೃತ ಜಾಲ ತಾಣದಲ್ಲಿ ನೇರವಾಗಿ http://dom.karnataka.in ಲಿಂಕ್ ಮೂಲಕ ಅರ್ಜಿಯನ್ನು ಸಲ್ಲಿಸಬಹುದು ಅಥವಾ ತಮ್ಮ ಹತ್ತಿರದ ಮೌಲಾನಾ ಆಜಾದ ಮಾದರಿ ಶಾಲೆಗಳು, ಅಲ್ಪಸಂಖ್ಯಾತರ ಜಿಲ್ಲಾ/ತಾಲ್ಲೂಕು ಮಾಹಿತಿ ಕೇಂದ್ರಗಳಲ್ಲಿ ಉಚಿತವಾಗಿ ಅರ್ಜಿಗಳನ್ನು ಸಲ್ಲಿಸಬಹುಹುದು ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಅಧಿಕಾರಿಗಳಾದ ಡಾ. ಅಬ್ದುಲರಶೀದ ಎಮ್ ಮಿರ್ಜನ್ನವರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸೈನಿಕ ಶಾಲೆ ಪ್ರವೇಶ; ಪೂರ್ವ ತರಬೇತಿಗಾಗಿ ಅರ್ಜಿ ಆಹ್ವಾನ

ಬೆಳಗಾವಿ: 2024-25 ನೇ ಸಾಲಿನ ನಗರದ ಸದಾಶಿವ ನಗರದಲ್ಲಿ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ನಡೆಯುತ್ತಿರುವ ಸೈನಿಕ ತರಬೇತಿ ಶಾಲೆಯಲ್ಲಿ ಸೈನಿಕ ಶಾಲೆ ವಿಜಯಪುರದಲ್ಲಿ ಪ್ರವೇಶಕ್ಕಾಗಿ ಪೂರ್ವ ತರಬೇತಿ ನೀಡಲು ವಾರ್ಷಿಕ ವರಮಾನ ರೂ. 2,50 ಲಕ್ಷಗಳ ಒಳಗಿರುವ 5ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗದ ಗಂಡು ಮಕ್ಕಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

50 ವಿದ್ಯಾರ್ಥಿಗಳಿಗನ್ನು ಸ್ಪರ್ಧಾತ್ಮಕ ಪರೀಕ್ಷೆ, ಮೇರಿಟ್ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು. ತರಬೇತಿ ಸಂದರ್ಭದಲ್ಲಿ ಊಟ ಮತ್ತು ವಸತಿ ಸೌಲಭ್ಯ, ಕಲಿಕಾ ಸಾಮಗ್ರಿಗಳು ಹಾಗೂ ಶುಚಿ ಸಂಭ್ರಮ ಕಿಟ್, ವೈದ್ಯಕೀಯ ಸೌಲಭ್ಯ, ಸಮವಸ್ತ್ರ, ಶೂ ಮತ್ತು ಸಾಕ್ಸ್, ಹಾಸಿಗೆ ಹೊದಿಕೆ, 12 ವಿದ್ಯಾರ್ಥಿಗಳಿಗೆ ಒಬ್ಬ ಶಿಕ್ಷಕರ ನೇಮಕ ನುರಿತ 4 ಶಿಕ್ಷಕರಿಂದ ಭೋದನೆ ನೀಡಲಾಗುತ್ತದೆ.


ಆಸಕ್ತರು ಏ.16 ರಿಂದ ಮೇ.10 ರವರೆಗೆ ಅರ್ಜಿ ನಮೂನೆಗಳನ್ನು ಪಡೆದು ಮೇ.15 ರ ಸಂಜೆ 5 ಗಂಟೆಯೊಳಗಾಗಿ ಅರ್ಜಿಗಳನ್ನು ಆಯಾ ತಾಲೂಕಿನ ಸಹಾಯಕ ನಿರ್ದೇಶಕರು ಸಮಾಜ ಕಲ್ಯಾಣ ಇಲಾಖೆಯ ಕಛೇರಿ, ಜಂಟಿ ನಿರ್ದೇಶಕರು ಸಮಾಜ ಕಲ್ಯಾಣ ಇಲಾಖೆ, ಬೆಳಗಾವಿರವರ ಕಛೇರಿಗೆ ಸಲ್ಲಿಸಬೇಕು ಎಂದು ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಏ.18 ರಂದು ವಿಶೇಷ ಚೇತನರಿಂದ ಮತದಾನ ಜಾಗೃತಿ ಟ್ರೈಸೈಲ್ ರ್‍ಯಾಲಿ

ಬೆಳಗಾವಿ: ಸಾರ್ವತ್ರಿಕ ಲೋಕಸಭಾ ಚುನಾವಣೆ 2024ರ ಅಂಗವಾಗಿ ಜಿಲ್ಲಾಡಳಿತ, ಮತ್ತು ಜಿಲ್ಲಾ ಪಂಚಾಯತ್ ಜಿಲ್ಲಾ ಸ್ವೀಪ್ ಸಮಿತಿ ಮತ್ತು ಜಿಲ್ಲಾ ಅಂಗವಿಕಲರ ಹಾಗೂ ಹಿರಿಯ ನಾಗರೀಕರ ಕಲ್ಯಾಣಾಧಿಕಾರಿಗಳು ವತಿಯಿಂದ ಏ.17 ರಂದು ಬೆಳಗ್ಗೆ 10 ಗಂಟೆಗೆ ಮತದಾರರಿಗೆ ಮತದಾನ ಜಾಗೃತಿ ಉದ್ದೇಶದಿಂದ ವಿಶೇಷ ಚೇತನರಿಂದ ಟ್ರೈಸೈಕಲ್ ರ್‍ಯಾಲಿ ಹಮ್ಮಿಕೊಳ್ಳಲಾಗಿದೆ.

ಜಿಲ್ಲಾಧಿಕಾರಿಗಳ ಕಚೇರಿಯಿಂದ ಚೆನ್ನಮ್ಮ ವೃತ್ತ, ಕಾಲೇಜ್ ರಸ್ತೆ, ಸಂಭಾಜಿ ವೃತ್ತದವರೆಗೆ ವಿಶೇಷ ಚೇತನರಿಂದ ಟ್ರೈಸೈಕಲ್ ರ್‍ಯಾಲಿಯ ಮೂಲಕ ಮತದಾನ ಜಾಗೃತಿ ನಡೆಯಲಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಜಿಲ್ಲಾ ಸ್ವಿಪ್ ಸಮಿತಿ ಅಧ್ಯಕ್ಷರಾದ ರಾಹುಲ್ ಶಿಂಧೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವ್ಯಕ್ತಿ ನಾಪತ್ತೆ



ಬೆಳಗಾವಿ: ಬೆಳಗಾವಿಯ ಸದಾಶಿವ ನಗರದ ಉಮೇಶ ಖಾಂಡೇಕರ ಎಂಬ ವ್ಯಕ್ತಿಯು ಮನೆಯಲ್ಲಿ ಯಾರಿಗೂ ಹೇಳದೆ ಹೊದವರು ಮರಳಿ ಬಂದಿರುವುದಿಲ್ಲಾ ಆದ್ದರಿಂದ ಇತನ ಅಣ್ಣ ವಿಲಾಸ ಖಾಂಡೇಕರ ಅವರು ಬೆಳಗಾವಿ ಎ.ಪಿ.ಎಮ್.ಸಿ ಪೊಲೀಸ್ ಠಾಣೆಗೆ ಹಾಜರಾಗಿ ದೂರು ದಾಖಲಿಸಿದ್ದಾರೆ.

ಕಾಣೆಯಾದ ವ್ಯಕ್ತಿಯ ವಿವರ: ವಯಸ್ಸು 49, ಎತ್ತರ 5 ಫೂಟ 6 ಇಂಚು, ಗೋದಿಗೆಂಪು ಮೈ ಬಣ್ಣ, ಸದೃಡ ಮೈಕಟ್ಟು, ಕಪ್ಪು ಟೀ ಶರ್ಟ್ ಹಾಗೂ ಕಪ್ಪು ಬಣ್ಣದ ಪ್ಯಾಂಟ್ ಧರಿಸಿರುತ್ತಾನೆ. ಮಾತನಾಡಲು ಬರುವುದಿಲ್ಲ ಮತ್ತು ಕಿವಿ ಕೇಳುವುದ್ದಿಲ್ಲ,

ಸದರಿ ಕಾಣೆಯಾದ ವ್ಯಕ್ತಿಯ ಮಾಹಿತಿ ಸಿಕ್ಕಲ್ಲಿ ಪೊಲೀಸ್ ಆಯುಕ್ತರು ಅಥವಾ ಪೊಲೀಸ್ ಇನ್ಸಪೆಕ್ಟರ್ ಎ.ಪಿ.ಎಂ.ಸಿ ಪೊಲೀಸ್ ಠಾಣೆ ಬೆಳಗಾವಿ ದೂರವಾಣಿ (0831) 2405250, 9480804106, 9480804047 ಸಂಪರ್ಕಿಸಬೇಕು ಎಂದು ಎ.ಪಿ.ಎಂ.ಸಿ ಪೊಲೀಸ್ ಸ್ಟೇಷನ್ ಅಸಿಸ್ಟೆಂಟ್ ಸಬ್ ಇನ್ಸಪೆಕ್ಟರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವೇಗವಾಗಿ ಬೆಳೆಯುತ್ತಿರುವ ಬೆಳಗಾವಿಗೆ ಕೆಲಸ ಮಾಡುವ ಸಂಸದ ಬೇಕು: ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್

## ಮಹಾಂತೇಶ್ ನಗರ, ಕಣಬರ್ಗಿಯಲ್ಲಿ ಮೃಣಾಲ ಹೆಬ್ಬಾಳಕರ್ ಪರ ಮತಯಾಚನೆ

ಬೆಳಗಾವಿ: ವೇಗವಾಗಿ ಬೆಳೆಯುತ್ತಿರುವ ಬೆಳಗಾವಿಗೆ ನಗರಕ್ಕೆ ಅಷ್ಟೇ ವೇಗವಾಗಿ ಕೆಲಸ ನಿರ್ವಹಿಸುವ ಸಂಸದ ಬೇಕು. ಹಾಗಾಗಿ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳ್ಕರ್ ಅವರನ್ನು ಅತ್ಯಧಿಕ ಮತಗಳಿಂದ ಗೆಲ್ಲಿಸಿ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರಾದ ಲಕ್ಷ್ಮೀ ಹೆಬ್ಬಾಳ್ಕರ್ ಮನವಿ ಮಾಡಿದರು.

ಮಹಾಂತೇಶ್ ನಗರದ ಮಹಾಂತ್ ಭವನದಲ್ಲಿ ಮಂಗಳವಾರ ನಡೆದ ಚುನಾವಣಾ ಪ್ರಚಾರದಲ್ಲಿ ಮಾತನಾಡಿದ ಸಚಿವರು, ಬೆಳಗಾವಿ ಎಲ್ಲಾ ದಿಕ್ಕಿನಲ್ಲಿ ಬೆಳೆಯುತ್ತಿದೆ. ಬೆಳೆಯುತ್ತಿರುವ ಬೆಳಗಾವಿಗೆ ಕೇಂದ್ರ ಸರ್ಕಾರದ ಅಭಿವೃದ್ಧಿ ಯೋಜನೆಗಳನ್ನು ತರಬೇಕಾಗಿದೆ. ಇಲ್ಲಿನ ಯುವಕರಿಗೆ ಉದ್ಯೋವಕಾಶ ಕಲ್ಪಿಸಬೇಕಿದೆ. ಹೀಗಾಗಿ ಉತ್ಸಾಹದಿಂದ ಕೆಲಸ ಮಾಡಲು ಸಂಸದ ಬೇಕು. ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ್ ಅವರಿಗೆ ಬೆಳಗಾವಿ ಮೇಲೆ ಅಭಿಮಾನವೂ ಇಲ್ಲ. ಕೆಲಸ ಮಾಡುವ ಹಸಿವೂ ಇಲ್ಲ. ಅಂತಹವರನ್ನು ತಿರಸ್ಕರಿಸಿ, ಕಾಂಗ್ರೆಸ್ ಅಭ್ಯರ್ಥಿಯನ್ನು ಆಯ್ಕೆ ಮಾಡಿ ಎಂದು ಕರೆ ನೀಡಿದರು.



ಕರ್ನಾಟಕ ಸರ್ಕಾರ ಘೋಷಿಸಿದ್ದ ಪಂಚ ಗ್ಯಾರಂಟಿ ಯೋಜನೆಗಳನ್ನು ಜನರಿಗೆ ಪ್ರಮಾಣಿಕವಾಗಿ ತಲುಪಿಸಲಾಗುತ್ತಿದೆ. ಸುಮಾರು 1.20 ಕೋಟಿ ಮಹಿಳೆಯರಿಗೆ ಗೃಹಲಕ್ಷ್ಮಿ ಯೋಜನೆ ತಲುಪುತ್ತಿವೆ. ಇದು ವಿಶ್ವದಲ್ಲಿಯೇ ಮಾದರಿಯಾದ ಯೋಜನೆ. ಸರ್ವರನ್ನು ಬಸವಣ್ಣನವರ ಸಮಾನತೆಯ ತತ್ವ ಸಿದ್ಧಾಂತಗಳನ್ನು ಅಳವಡಿಸಿಕೊಂಡು ಜಾರಿಗೆ ತಂದ ಯೋಜನೆ ಇದಾಗಿದೆ ಎಂದು ಸಚಿವರು ಹೇಳಿದರು.

ಮನೆಯಲ್ಲಿ ಕೂರದೆ ಎಲ್ಲರೂ ಮತದಾನ ಮಾಡಿ, ಬೆಳಗಾವಿ ಸ್ವಾಭಿಮಾನ ಉಳಿಸೋಣ. ಬೆಳಗಾವಿ ಜನರ ಕಷ್ಟ ಸುಖಗಳ ಬಗ್ಗೆ ಅರಿತಿರುವ ಅಭ್ಯರ್ಥಿಯನ್ನು ಬೆಂಬಲಿಸೋಣ. ಬದ್ಧತೆ ಇಲ್ಲದ ಬಿಜೆಪಿ ಅಭ್ಯರ್ಥಿ ಕಣದಲ್ಲಿದ್ದು, ಅವರಲ್ಲಿ ಸಾಕಷ್ಟು ಗೊಂದಲವಿದೆ. ಪಕ್ಷಾತೀತವಾಗಿ ಎಲ್ಲರೂ ಮೃಣಾಲ್ ಬೆಂಬಲಿಸಿ ಎಂದು ಸಚಿವರು ಹೇಳಿದರು. ಬೆಳಗಾವಿ ಇನ್ನೂ ಬೆಳೆಯಬೇಕು. ಮೆಟ್ರೋ, ಫ್ಲೈಓವರ್, ಕೈಗಾರಿಕೆಗಳು ಬರಬೇಕು ಎಂದರು.

ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ್ ಅವರು, ಮುಖ್ಯಮಂತ್ರಿ ಆಗಿ ಎರಡು ಬಾರಿ ಉಸ್ತುವಾರಿ ಸಚಿವರಾಗಿ, ವಿರೋಧ ಪಕ್ಷದ ನಾಯಕನಾಗಿ ಕೆಲಸ ಮಾಡಿದರೂ ಅಭಿವೃದ್ಧಿ ಬಗ್ಗೆ ಚಿಂತಿಸದೆ ನಿರ್ಲಕ್ಷ್ಯ ವಹಿಸಿದರು. ಶೆಟ್ಟರ್ ಅವರಿಗೆ ಅಭಿವೃದ್ಧಿ ಮಾಡೋಕೆ ಬರಲ್ಲ. ಬಿಜೆಪಿ ಅಭ್ಯರ್ಥಿಗೆ ಇಲ್ಲಿ ಮತ ಕೇಳಲು ನೈತಿಕತೆ ಇದೆಯೇ? ಎಂದು ಪ್ರಶ್ನಿಸಿದರು.

ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ ಮಾತನಾಡಿ, ಜಗದೀಶ್ ಶೆಟ್ಟರ್ ಬೆಳಗಾವಿಗೆ ಸಾಕಷ್ಟು ಅನ್ಯಾಯ ಮಾಡಿದ್ದಾರೆ. ಅವರು ಕೈಗಾರಿಕೆ ಸಚಿವರಾಗಿದ್ದಾಗ ಬೆಂಗಳೂರಿನಲ್ಲಿ ನಡೆದ ಉನ್ನತ ಮಟ್ಟದ ಸಭೆಯಲ್ಲಿ ನಾನೂ ಭಾಗವಹಿಸಿದ್ದೆ. ಆಗ ಅವರ ಲಕ್ಷ್ಯ ಕೇವಲ ಹುಬ್ಬಳ್ಳಿ -ಧಾರವಾಡದ ಮೇಲಿತ್ತು. ನಾನು ಬೆಳಗಾವಿ ಬಗ್ಗೆ ಹೇಳಲು ಹೋದರೆ ನನ್ನ ಮೇಲೆ ಕೋಪಿಸಿಕೊಂಡರು. ಬೆಳಗಾವಿಗೆ ಏನೇ ಬಂದರೂ ಅಡ್ಡಗಾಲು ಹಾಕುವ ಚಾಲಿ ಅವರದ್ದಾಗಿತ್ತು. ಈಗ ಬೆಳಗಾವಿ ನನ್ನ ಕರ್ಮ ಭೂಮಿ ಎನ್ನುತ್ತಿದ್ದಾರೆ ಎಂದು ಟೀಕಿಸಿದರು.

ಶಾಸಕ ಫಿರೋಜ್ ಸೇಠ್ ಮಾತನಾಡಿ,



ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅವರು ಉತ್ತಮ ರೀತಿಯಿಂದ ಕೆಲಸ ಮಾಡುತ್ತಿದ್ದಾರೆ. ಪುತ್ರ ಮೃಣಾಲ ಕೂಡ ಅವರದೇ ಮಾದರಿಯಲ್ಲಿ ಕೆಲಸ ಮಾಡಲಿದ್ದಾನೆ. ಹಾಗಾಗಿ ನಾವೆಲ್ಲ ಅವರಿಗೆ ಹೆಚ್ಚಿನ ಮತ ನೀಡಿ ಆಯ್ಕೆ ಮಾಡೋಣ. ಎಲ್ಲರೂ ಸೇರಿ ಬೆಳಗಾವಿಯನ್ನು ಅಭಿವೃದ್ಧಿಪಡಿಸೋಣ ಎಂದರು.

ಅಭ್ಯರ್ಥಿ ಮೃಣಾಲ ಹೆಬ್ಬಾಳಕರ್, ಆಮ್ ಆದ್ಮಿ ಪಕ್ಷದ ಗಿರೀಶ್ ಬಾಳೆಕುಂದ್ರಿ, ದಿನೇಶ ಬಾಳೆಕುಂದ್ರಿ, ಆರ್ಪಿ.ಪಾಟೀಲ ಮೊದಲಾದವರು ಮಾತನಾಡಿದರು. ಈ ವೇಳೆ ಬೆಳಗಾವಿ ಉತ್ತರ ಕ್ಷೇತ್ರದ ಶಾಸಕ ರಾಜು ಸೇಠ್, ಮಾಜಿ ಸಚಿವ ಶಶಿಕಾಂತ್ ನಾಯಕ್, ಬೆಳಗಾವಿ ಬಾರ್ ಅಸೋಸಿಯೇಷನ್ ಅಧ್ಯಕ್ಷ ಎಸ್.ಎಸ್. ಕಿವುಡಸಣ್ಣನವರ, ಮಾಜಿ ಮೇಯರ್ ಎನ್.ಬಿ.ನಿರ್ವಾಣಿ, ಮಾಜಿ ಉಪ ಮೇಯರ್ ಜ್ಯೋತಿ ಭಾವಿಕಟ್ಟಿ, ಮಾಜಿ ಕಾರ್ಪೋರೇಟರ್ ಅನುಶ್ರೀ ದೇಶಪಾಂಡೆ, ಪುಷ್ಪ ಪರ್ವತರಾವ್ ಸೇರಿದಂತೆ ಹಲವು ಮಂದಿ ಉಪಸ್ಥಿತರಿದ್ದರು.

## ನ್ಯಾಷನಲ್ ಟೆಕ್ನೋ ಎಕ್ಸಿಬಿಷನ್‌ನಲ್ಲಿ ಪಾಲಿಟೆಕ್ನಿಕ್ ಕಾಲೇಜ್‌ನ ವಿದ್ಯಾರ್ಥಿಗಳಿಗೆ ತೃತೀಯ ಸ್ಥಾನ



ಬೆಳಗಾವಿ: ಬೆಂಗಳೂರಿನ ಡಾ. ಬಿ ಆರ್ ಅಂಬೇಡ್ಕರ್ ತಾಂತ್ರಿಕ ಮಹಾವಿದ್ಯಾಲಯದಲ್ಲಿ 2023-24 ನೇ ಸಾಲಿನ ರಾಷ್ಟ್ರ ಮಟ್ಟದ 8 ನೇ ನ್ಯಾಷನಲ್ ಟೆಕ್ನೋ ಎಕ್ಸಿಬಿಷನ್ ಏ.13 ರಂದು ನಡೆಸಲಾಯಿತು.


ಇದರಲ್ಲಿ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜ್‌ನ ವಿದ್ಯಾರ್ಥಿಗಳು ಎಲೆಕ್ಟ್ರಾನಿಕ್ ಆ್ಯಂಡ್ ಕಮ್ಯುನಿಕೇಶ್ ವಿಭಾಗದ ಅಂತಿಮ ವರ್ಷದ ಡಿಪ್ಲೋಮಾ ವಿದ್ಯಾರ್ಥಿಗಳು ಸ್ಮಾರ್ಟ್ ವೇಸ್ಟ್ ವಾಟರ್ ಟ್ರೀಟ್ಮೆಂಟ್ ಪ್ಲಾಂಟ್ ಎಂಬ ಪ್ರೊಜೆಕ್ಟ್‌ಕ್ಕೆ ಮೇಘರಾಣಿ ಮಾಯಾಣಿ ಅವರ ಮಾರ್ಗದರ್ಶನದಲ್ಲಿ ಈರಯ್ಯ ಹಿರೇಮಠ, ಮುಸದ್ದಿಕ್ ಚಕ್ಕುಲಿ, ಅಭಿನವ ಕೋಟಗಿ, ಹರ್ಷ ಚಿತಿಗಿ ವಿದ್ಯಾರ್ಥಿಗಳು ತೃತೀಯಾ ಸ್ಥಾನ ಪಡೆದಿದ್ದಾರೆ.

2023-24 ನೇ ಸಾಲಿನ ರಾಜ್ಯ ಮಟ್ಟದ ಸ್.ಜೆ.ಪಿ.ಎನ್ ಟರ್ಸ್ಟ್ ಹಿರಾ ಸುಗರ್ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ನೀಡಶೋಷಿಯನ್ನು ಏ.4 ರಂದು ನಡೆಸಲಾಯಿತು.

ಇದರಲ್ಲಿ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜ್‌ನ ವಿದ್ಯಾರ್ಥಿಗಳು ಎಲೆಕ್ಟ್ರಾನಿಕ್ ಆ್ಯಂಡ್ ಕಮ್ಯುನಿಕೇಶ್ ವಿಭಾಗದ ಅಂತಿಮ ವರ್ಷದ ಡಿಪ್ಲೋಮಾ ವಿದ್ಯಾರ್ಥಿಗಳು ಸ್ಮಾರ್ಟ್ ಸಿಟಿ ಎಂಬ ಪ್ರೊಜೆಕ್ಟ್‌ನ್ನು ಅಪೂರ್ವಾ, ಸಂಜನಾ, ಶ್ರೇಯಾ, ಸ್ವಾತಿ, ಮೇಘರಾಣಿ ಮಾಯಾಣಿ ಅವರ ಮಾರ್ಗದರ್ಶನದಲ್ಲಿ ಜ್ಞಾನ ಪಡೆದು ಪ್ರಥಮ ಸ್ಥಾನ ಪಡೆದಿದ್ದಾರೆ. ಮಹೇಶ್ ತುಬಾಕಿ ಇವರ ಮಾರ್ಗದರ್ಶನದಲ್ಲಿ ಸ್ಮಾರ್ಟ್ ಲೈಬ್ರರಿ ಪ್ರೆಸೆಂಟೇಷನ್‌ಯಲ್ಲಿ ಸೂರ್ಯಕಾಂತ್ ತಿಗಡಿ, ರವಿ ಪಟ್ಟಣಶೆಟ್ಟಿ, ಹಬಿಭ-ಹುಲ್-ರೆಹಮಾನ್, ಅಶ್ವಿನಿ ಲಮಾನಿ, ದೀಪಾ ಹಿರೇಮಠ, ಮೊಹಮ್ಮದ್ ಅವೇಜ್ ಚೌಧರಿ ವಿದ್ಯಾರ್ಥಿಗಳು ಎರಡನೇ ಸ್ಥಾನ ಪಡೆದಿದ್ದಾರೆ.

2023-24 ನೇ ಸಾಲಿನ ರಿಸೈಕಲ್ ಅರ್ಥ್ ಎಂಬ ವಿಷಯದ ಬಗ್ಗೆ ಬೆಳಗಾವಿಯ ಮರಾಠ ಮಂಡಳ ಪಾಲಿಟೆಕ್ನಿಕ್‌ನಲ್ಲಿ ಏ.6 ರಂದು ನಡೆಸಲಾಯಿತು. ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜ್‌ನ ವಿದ್ಯಾರ್ಥಿಗಳು ಎಲೆಕ್ಟ್ರಾನಿಕ್ ಆ್ಯಂಡ್ ಕಮ್ಯುನಿಕೇಶ್ ವಿಭಾಗದ ಎರಡನೇ ವರ್ಷದ ಡಿಪ್ಲೋಮಾ ವಿದ್ಯಾರ್ಥಿಗಳು ಯುಪಿಸೈಕಲಿಂಗ್ ಅಥವಾ ರಿಸೈಕಲಿಂಗ್ ಎಂಬ ಪ್ರೊಜೆಕ್ಟ್‌ನಲ್ಲಿ ಮೇಘರಾಣಿ ಮಾಯಾಣಿ ಅವರ ಮಾರ್ಗದರ್ಶನದಲ್ಲಿ ವಾಣಿಶ್ರೀ, ತೇಜಸ್ವಿನಿ, ಪ್ರತೀಕ್ಷಾ, ಭಾರತೀ ವಿದ್ಯಾರ್ಥಿಗಳಿಗೆ ಪ್ರಥಮ ಸ್ಥಾನ ಪಡೆದುಕೊಂಡಿದ್ದಾರೆ.

## ವಿಜೃಂಭಣೆಯಿಂದ ಜರುಗಿದ ಶ್ರೀ ಸಾಯಿ ಜಯಂತಿ ಮತ್ತು ಶ್ರೀ ರಾಮ ನವಮಿ



ಬೆಳಗಾವಿ: ನಗರದ ವಂಟಮುರಿ ಕಾಲೊನಿಯ ಶ್ರೀಸಾಯಿ ಮಂದಿರದಲ್ಲಿ ಇಂದು ಶ್ರೀ ರಾಮ ನವಮಿ ಮತ್ತು ಶ್ರೀಸಾಯಿ ಜಯಂತಿಯನ್ನ ಸಾಹಸ್ರಾರು ಭಕ್ತರ ಸಮ್ಮುಖದಲ್ಲಿ ವಿಜೃಂಭಣೆಯಿಂದ ಜರುಗಿತು, ಬೆಳಿಗ್ಗೆ 6 ಗಂಟೆಗೆ ಅಭಿಷೇಕ ನಡೆಯಿತು ಮಧ್ಯಾಹ್ನ 12 ಗಂಟೆಗೆ ಶ್ರೀರಾಮ ಮತ್ತು ಶ್ರೀ ಸಾಯಿನಾಥರನ್ನ ತೂಟ್ಟಲಿನಲ್ಲಿ ಹಾಕಲಾಯಿತು.

ಮಧ್ಯಾಹ್ನ 1 ಗಂಟೆಯಿಂದ ಸಂಜೆ 5 ಗಂಟೆಯವರೆಗೆ ಮಹಾ ಪ್ರಸಾದ ಅನ್ನ ಸಂತರ್ಪಣೆ ನಡೆಯಿತು ನಗರದ ಅನೇಕ ಭಾಗಗಳಿಂದ ಮತ್ತು ಹಲವು ಗ್ರಾಮಗಳಿಂದ ಆಗಮಿಸಿದ ಸುಮಾರ ಏಳು ಸಾವಿರಕ್ಕು ಅದಿಕ ಭಕ್ತರು ದೇವರ ದರ್ಶನ ಪಡೆದು ತೊಟ್ಟಲು ತೊಗಿ ಮಹಾ ಪ್ರಸಾದ ಸ್ವೀಕರಿಸಿದರು. ವಿಶೇಷ ಪೋಜೆಗಳು ನಡಯಿತು.

ದೇವರನ್ನ ಮತ್ತು ದೇವಸ್ಥಾನವನ್ನ ವಿಶೇಷವಾಗಿ ಅಲಂಕರಿಸಲಾಗಿತ್ತು ಭಕ್ತರು ಜೈ ಶ್ರೀ ರಾಮ ಘೋಷಣೆಗಳನ್ನ ಕೊಗುತ್ತ ಭಕ್ತಿಯನ್ನ ಸರ್ಮಪಿಸಿದರು. ಸಾಹಸ್ರಾರು ಮಹಿಳೆಯರಿಗೆ ದೇವಸ್ಥಾನದವತಿಯಿಂದ ಉಡಿ ತುಂಬಲಾಯಿತು.

# ಸಚಿವರಿದ್ದಾಗ ಬೆಳಗಾವಿ ಎಂದರೆ ಜಗದೀಶ್ ಶೆಟ್ಟರಿಗೆ ಸಿಟ್ಟು ಬರುತ್ತಿತ್ತು: ಚನ್ನರಾಜ ಹಟ್ಟಿಹೊಳಿ

ಬೆಳಗಾವಿ: ಲೋಕಸಭಾ ಚುನಾವಣೆಗೆ ಬೆಳಗಾವಿ ಕ್ಷೇತ್ರದಿಂದ ಸ್ಪರ್ಧಿಸಿ, ಬೆಳಗಾವಿ ನನ್ನ ಕರ್ಮ ಭೂಮಿ ಎನ್ನುತ್ತಿರುವ ಜಗದೀಶ್ ಶೆಟ್ಟರ್ ಅವರಿಗೆ ಅವರು ಸಚಿವರಾಗಿದ್ದಾಗ ಬೆಳಗಾವಿ ಎಂದರೆ ಸಿಟ್ಟು ಬರುತ್ತಿತ್ತು. ನಾನು ಬೆಳಗಾವಿಗೆ ಇಂಡಸ್ಟ್ರಿಯಲ್ ಕಾರಿಡಾರ್ ಮಾಡೋಣ ಎಂದು ಒತ್ತಾಯಿಸಿದ್ದಕ್ಕೆ ನನ್ನ ಮೇಲೆ ಮುನಿಸಿಕೊಂಡಿದ್ದರು ಎಂದು ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ ಆರೋಪಿಸಿದ್ದಾರೆ.



ಬೆಳಗಾವಿಯ ಕಣಬರ್ಗಿಯಲ್ಲಿ ಮಂಗಳವಾರ ಸಂಜೆ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ ಹೆಬ್ಬಾಳಕರ್ ಪರ ಅವರು ಮತಯಾಚನೆ ಮಾಡುತ್ತಿದ್ದರು. ಜಗದೀಶ್ ಶೆಟ್ಟರ್ ಕೈಗಾರಿಕೆ ಸಚಿವರೂ, ಬೆಳಗಾವಿ ಜಿಲ್ಲಾ ಉಸ್ತುವಾರಿ ಸಚಿವರೂ ಆಗಿದ್ದ ಸಂದರ್ಭದಲ್ಲಿ ಬೆಂಗಳೂರಿನಲ್ಲಿ ಉದ್ಯಮಿಗಳ ಸಭೆ ಕರೆದಿದ್ದರು. ಆ ಸಭೆಯಲ್ಲಿ ಉದ್ಯಮಿಯಾಗಿ ನಾನು ಭಾಗವಹಿಸಿದ್ದೆ. ಯಾವುದೇ ಕೈಗಾರಿಕೆ ಸ್ಥಾಪನೆ ಮತ್ತು ಇಂಡಸ್ಟ್ರಿಯಲ್ ಕಾರಿಡಾರ್ ವಿಷಯ ಬಂದಾಗ ಹುಬ್ಬಳ್ಳಿಗೆ ಎನ್ನುತ್ತಿದ್ದರು. ಆ ಸಂದರ್ಭದಲ್ಲಿ ನಾನು, ಇಂಡಸ್ಟ್ರಿಲ್ ಕಾರಿಡಾರ್ ಬೆಳಗಾವಿಯಲ್ಲಿ ಸ್ಥಾಪಿಸೋಣ ಎಂದು ಹೇಳಿದೆ. ಇದರಿಂದ ಅವರು ಸರಿಯಾಗಿ ಉತ್ತರವನ್ನೂ ನೀಡದೆ ನನ್ನ ಮೇಲೆ ಮುನಿಸಿಕೊಂಡರು. ಬೆಳಗಾವಿ ಎಂದರೆ ಅವರಿಗೆ ಅಸಡ್ಡೆಯಾಗಿತ್ತು. ಅಂತಹ ಶೆಟ್ಟರ್ ಇಂದು ನಿಮ್ಮಮತಕ್ಕಾಗಿ ಬೆಳಗಾವಿ ನನ್ನ ಕರ್ಮ ಭೂಮಿ ಎನ್ನುತ್ತಿದ್ದಾರೆ. ಬೆಳಗಾವಿಗೆ ಅನ್ಯಾಯ ಮಾಡಿರುವ ನಿಮಗೆ ಮತ ನೀಡಲು ಬೆಳಗಾವಿಗರೇನು ಹುಚ್ಚರಾ ಎಂದು ಚನ್ನರಾಜ ಪ್ರಶ್ನಿಸಿದರು.

ಶೆಟ್ಟರ ಅವರೇ ನೀವು ಬೆಳಗಾವಿಗೆ ಅನ್ಯಾಯ ಮಾಡಿದ್ದಕ್ಕೆ ಉತ್ತರಿಸಬೇಕು. ಮುಖ್ಯಮಂತ್ರಿಯಾಗಿದ್ದಾಗ, ಜಿಲ್ಲಾ ಉಸ್ತುವಾರಿ ಸಚಿವರಾಗಿದ್ದಾಗ ಬೆಳಗಾವಿಗೆ ಏನಾದರೂ ಯೋಜನೆ ತರಲು ನಿಮಗೆ ಅವಕಾಶವಿತ್ತು. ಕೈಗಾರಿಕೆಯಂತ ಉತ್ತಮ ಖಾತೆಯೂ ಇತ್ತು. ಆದರೆ ನಿಮಗೆ ಕೇವಲ ಹುಬ್ಬಳ್ಳಿ - ಧಾರವಾಡ ಮಾತ್ರ ಕಾಣುತ್ತಿತ್ತು. ಹುಬ್ಬಳ್ಳಿ - ಧಾರವಾಡದ ಜನರೇನು ನಮ್ಮ ವಿರೋಧಿಗಳಲ್ಲ. ಅಲ್ಲೂ ಬೆಳೆಯಲು, ಆದರೆ ಎಲ್ಲವೂ ಅಲ್ಲಿಗೆ ಹೋದರೆ ಸಮಾನತೆ ಎನ್ನುವುದಕ್ಕೆ ಬೇಲೆ ಏನು ಉಳಿಯಿತು. ಬೆಳಗಾವಿ ಅಸಮಾನತೆಯಿಂದ ಬಳಲುತ್ತಿದೆ. ಹುಬ್ಬಳ್ಳಿ - ಧಾರವಾಡದ ಮಟ್ಟದಲ್ಲಿ ಬೆಳೆಯಬೇಕೆಂದರೆ ಯುವಕ ಮೃಣಾಲ ಹೆಬ್ಬಾಳಕರ್ ಅವರಿಗೆ ಮತ ನೀಡಿ ಆಯ್ಕೆ ಮಾಡಿ ಎಂದುಅವರು ವಿನಂತಿಸಿದರು.

## ಕುಟುಂಬ ಸದಸ್ಯರು, ವಕೀಲರಿಗೆ ಕರೆ ಮಾಡಲು ಕೈದಿಗಳಿಗೆ ಸ್ಮಾರ್ಟ್ ಕಾರ್ಡ್ ವಿತರಣೆ

ಮಹಾರಾಷ್ಟ್ರ: ಮಹಾರಾಷ್ಟ್ರದ ಛತ್ರಪತಿ ಸಾಂಭಾಜಿನಗರದ ಹರ್ಸೂಲ್ ಕೇಂದ್ರ ಕಾರಾಗೃಹದ 650 ಕೈದಿಗಳಿಗೆ ತಮ್ಮ ಕುಟುಂಬ ಸದಸ್ಯರು ಮತ್ತು ವಕೀಲರ ಜೊತೆ ಸಂಪರ್ಕದಲ್ಲಿರಲು ಸ್ಮಾರ್ಟ್ ಕಾರ್ಡ್ ವಿತರಿಸಲಾಗಿದೆ ಎಂದು ಬುಧವಾರ ಅಧಿಕಾರಿಗಳು ತಿಳಿಸಿದ್ದಾರೆ.

ಈ ಸ್ಮಾರ್ಟ್ ಕಾರ್ಡ್ ವಾರದಲ್ಲಿ ಮೂರು ಬಾರಿ ಉಚಿತ ಕರೆ ಮಾಡಲು ಅವಕಾಶ ಮಾಡಿಕೊಡುತ್ತದೆ. ಒಮ್ಮೆ ಕರೆ ಮಾಡಿದರೆ 6 ನಿಮಿಷಗಳವರೆಗೆ ಮಾತನಾಡಬಹುದಾಗಿದೆ ಎಂದು ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಆರ್ಥಿಕ ಮುಗ್ಗಟ್ಟಿನ ಕಾರಣ ಹಲವು ಕೈದಿಗಳ ಕುಟುಂಬಸ್ಥರು ಜೈಲಿಗೆ ಭೇಟಿ ನೀಡಲು ಸಾಧ್ಯವಿಲ್ಲ. ಹಾಗಾಗಿ, ಕೈದಿಗಳು ಅವರ ಕುಟುಂಬದವರು, ವಕೀಲರ ಜೊತೆ ಸಂಪರ್ಕದಲ್ಲಿರಲು ಹರ್ಸೂಲ್ ಜೈಲಿನ 650 ಕೈದಿಗಳಿಗೆ ಸ್ಮಾರ್ಟ್ ಕಾರ್ಡ್ ವಿತರಿಸಲಾಗಿದೆ' ಎಂದು ಪ್ರಕಟಣೆ ತಿಳಿಸಿದೆ.

ಆದರೆ, ಜೈಲಿನ ಅಧಿಕಾರಿಗಳ ಜೊತೆ ಹಂಚಿಕೊಳ್ಳಲಾದ ಸಂಖ್ಯೆಗಳಿಗೆ ಮಾತ್ರ ಕರೆ ಮಾಡಲು ಅವಕಾಶವಿದೆಯೇ ಅಥವಾ ಬೇರೆ ಸಂಖ್ಯೆಗಳಿಗೂ ಕರೆ ಮಾಡಬಹುದೇ ಎಂಬ ಬಗ್ಗೆ ಪ್ರಕಟಣೆಯಲ್ಲಿ ಸ್ಪಷ್ಟಪಡಿಸಿಲ್ಲ. ಜೈಲಿನ ಆವರಣದಲ್ಲಿ ಕಾಲಿಂಗ್ ಬೂತ್‌ಗಳ ವ್ಯವಸ್ಥೆ ಮಾಡಲಾಗಿದೆ.

## ಮೂರು ವರ್ಷಕ್ಕೆ ಕಲಿತದ್ದು ನೂರು ವರ್ಷ ತನಕ: ಪ್ರೊ. ಜಿ. ಕೆ. ಕುಲಕರ್ಣಿ

ಬೆಳಗಾವಿ: ಬಾಲ್ಯದಲ್ಲಿ ಕಲಿತ ವಿಷಯಗಳು ಕೊನೆಯ ತನಕ ಉಳಿಯುತ್ತವೆ. ಅವು ಹಸಿ ಗೋಡೆಯ ಮೇಲೆ ಕಲ್ಲು ಒಗೆದಂತೆ ಗಟ್ಟಿಯಾಗಿ ಕುಳಿತುಬಿಡುತ್ತವೆ. ಬಾಲ್ಯದಲ್ಲಿ ಕಲಿಯುವಾಗಲೇ ಒಳ್ಳೆಯದನ್ನು ಸರಿಯಾದುದನ್ನು ಕಲಿಯಬೇಕು. ಮೂರು ವರ್ಷಕ್ಕೆ ಕಲಿತದ್ದು ನೂರು ವರ್ಷ ತನಕ ಎಂದು ಖ್ಯಾತ ನಗೆ ಮಾತುಗಾರ ಪ್ರೊ. ಜಿ. ಕೆ. ಕುಲಕರ್ಣಿಯವರು ಇಂದಿಲ್ಲಿ ಹೇಳಿದರು.

ನಗರದ ಹಾಸ್ಯಕೂಟ ಮತ್ತು ಕನ್ನಡ ಸಾಹಿತ್ಯ ಭವನ ವಿಶ್ವಸ್ತ ಮಂಡಳಿ ಸಂಯುಕ್ತ ಆಶ್ರಯದಲ್ಲಿ ಇದೇ ದಿ.13 ಶನಿವಾರದಂದು ಚೆನ್ನಮ್ಮವೃತ್ತದ ಬಳಿಯಿರುವ ಕನ್ನಡ ಸಾಹಿತ್ಯಭವನದಲ್ಲಿ 'ಬಾಲ್ಯದ ಆಟ ಆ ಹುಡುಗಾಟ' ಎಂಬ ವಿಶೇಷ ಕಾರ್ಯಕ್ರಮದಲ್ಲಿ ಪ್ರಮುಖ ಭಾಷಣಕಾರರಾಗಿ ಆಗಮಿಸಿದ್ದ ಕುಲಕರ್ಣಿಯವರು ಮೇಲಿನಂತೆ ಹೇಳಿದರು.




ಅವರ ಹೆಸರನ್ನು ಕೇಳಿದಾಗ ಪ್ರೊ. ಕುಲಕರ್ಣಿಯವರು ತಮ್ಮ ಹೆಸರನ್ನು ಹೇಳುತಿದ್ದ ರೀತಿಯಿಂದ ಆದ ಅನಾಹುತದ ಪ್ರಸಂಗವನ್ನು ಹೇಳಿ ಜನರ ನಗೆ ಮುಗಿಲು ಮುಟ್ಟಿಸಿದರು.

ಅಧ್ಯಕ್ಷತೆಯನ್ನು ವಹಿಸಿದ್ದ ಹಿರಿಯ ಪತ್ರಕರ್ತ ಲೇಖಕ ಎಲ್. ಎಸ್. ಶಾಸ್ತ್ರಿ, 'ಮನಸ್ಸಿಗೆ ಮುಪ್ಪಾಗುವವರೆಗೆ ದೇಹಕ್ಕೆ ಮುಪ್ಪಿಲ್ಲ. ಅಂದಿನ ಮಕ್ಕಳಗಿದ್ದ ಮುಕ್ತ ವಾತಾವರಣ ಇಂದಿನ ಮಕ್ಕಳಲ್ಲಿ ಕಾಣಸಿಗುವುದಿಲ್ಲವಾದ್ದರಿಂದ ಸಹಜವಾಗಿಯೇ ಮಕ್ಕಳಲ್ಲಿ ಅಂದಿನ ಹುಡುಗಾಟ, ತುಂಟಾವನ್ನು ಇಂದಿನ ಮಕ್ಕಳಲ್ಲಿ ಕಾಣುವುದಿಲ್ಲ. ಸಹಜವಾಗಿಯೇ ಇಂದಿನ ಯಾಂತ್ರಿಕ ಯುಗದಲ್ಲಿ ಮಕ್ಕಳಲ್ಲಿ ಮೊದಲಿದ್ದ ಸ್ವಾತಂತ್ರ್ಯವಿಲ್ಲ. ಮನಸ್ಸಿಗೆ ವಯಸ್ಸಾಗುವವರೆಗೆ ದೇಹಕ್ಕೆ ಮುಪ್ಪಿಲ್ಲ ಎಂದು ಹೇಳಿದರು.

ಡಾ. ಭಾರತಿ ಮಠದ, ಶ್ರೀಮತಿ ರಾಜನಂದಾ ಗಾರ್ಗಿ, ಎಸ್. ವಿ. ದೀಕ್ಷಿತ ಬಾಲ್ಯದಲ್ಲಿ ತಮಗಾದ ರಸಪ್ರಸಂಗಗಳನ್ನು ಹಂಚಿಕೊಂಡರು. ಪ್ರಾ. ವ್ಹಿ. ಎನ್. ಜೋಶಿ ಕಾರ್ಯಕ್ರಮದ ಪ್ರಾಯೋಜಕತ್ವ ವಹಿಸಿಕೊಂಡಿದ್ದರು. ಪ್ರಾಸ್ತಾವಿಕ ನುಡಿಗಳನ್ನು ಗುಂಡೇನಟ್ಟಿ ಮಧುಕರ ಆಡಿದರು. ಜಿ. ಎಸ್. ಸೋನಾರ ನಿರೂಪಿಸಿದರು.

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089